ಸಂಪುಟ: 14 Volume | ಸಂಚಿಕೆ: 88 Issue | ಪುಟಗಳು 08 Pages | ಶುಕ್ರವಾರ 10 ಜುಲೈ 2026 | ₹4 | PRGINO.120927 (RNINO:KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450, 9845028349

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

MN ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

ಅದೃಷ್ಟ ವೆನ್ನುವುದು ಪ್ರಯತ್ನವೆಂಬ ತಾಯಿಗೆ, ಅವಕಾಶವೆಂಬ ತಂದೆಗೆ ಜನಿಸುವ ಮಗು.

–ಗುರುನಾನಕ್



ಸಿಎಂ ಡಿಕೆ ಶಿವಕುಮಾರ್ ಅವರು ಬೆಳಗಾವಿಯಲ್ಲಿ ಸೌತ್ ಇಂಡಿಯನ್ ಶುಗರ್ ಮಿಲ್ಸ್ ಅಸೋಸಿಯೇಷನ್‌ನ ಕರ್ನಾಟಕ ವಿಭಾಗದ ಪ್ರತಿನಿಧಿಗಳ ಜತೆ ಗುರುವಾರ ಸಮಾಲೋಚನೆ ನಡೆಸಿದರು. ಡಿಸಿಎಂ ಪರಮೇಶ್ವರ, ಸಚಿವರಾದ ಸತೀಶ್ ಜಾರಕಿಹೊಳಿ, ಈಶ್ವರ್ ಖಂಡ್ರೆ, ಯುಟಿ ಖಾದರ್, ಮಾಜಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಮತ್ತಿತರರು ಉಪಸ್ಥಿತರಿದ್ದರು.

## SIR: ಮನೆ ಮನೆ ಭೇಟಿ



**ಮುದಗಲ್:** ಚುನಾವಣಾ ಆಯೋಗದಿಂದ ನಡೆಯುತ್ತಿರುವ ಮತದಾರರ ಪಟ್ಟಿಯ ಸಮಗ್ರ ಪರಿಷ್ಕರಣೆಯಂತೆ ಲಿಂಗಸಗೂರು ತಾಲೂಕಿನಲ್ಲಿ ಮತಗಟ್ಟೆ ಅಧಿಕಾರಿಗಳಿಂದ ಮನೆ ಮನೆ ಭೇಟಿ ನಡೆಯುತ್ತಿವೆ ಎಂದು ತಹಶೀಲ್ದಾರ ಸತ್ಯಮ್ಮ ಗುರವಾರ ತಿಳಿಸಿದರು. ಈ ಬಗ್ಗೆ ಪಟ್ಟಣದ ಸುದ್ದಿಗಾರರಿಗೆ ಮಾಹಿತಿ ನೀಡಿದ ಅವರು ಈಗಾಗಲೇ ಬಿಎಲ್ ಓಗಳಿಗೆ ತರಬೇತಿ ಸಿದ್ಧತೆ ಮುದ್ರಣ ಕಾರ್ಯಗಳು ನಡೆಯಲಿವೆ. ಜು. 29ರ ವರೆಗೆ ಮತಗಟ್ಟೆ ಮಟ್ಟದ ಅಧಿಕಾರಿಗಳಿಂದ ಮನೆಮನೆ ಭೇತಿ ನಡೆಯಲಿದೆ. ಒಟ್ಟು ಮತದಾರರು 2,73,705. ಬಿಎಲ್‌ಓಗಳು 285, ಒಟ್ಟು ವಿತರಣೆ ಅರ್ಜಿಗಳು 2,69,388, ಒಟ್ಟು ಎಎಫ್ ಸಿ ಡಿಜಿಟೈಸ್ 75,264, ಪ್ರತಿಗ್ರಾಮ ಪಂಚಾಯತಿಯಲ್ಲಿ ವಿಎಫ್ ಸಿ ಕಲ್ಪಿಸಲಾಗಿದೆ. ಬಿಎಲ್ ಓಗಳು ಎ.ಎಸ್.ಟಿ.ಡಿ ಪರಿಷ್ಕರಣೆ ಮಾಡಲಾಗುತ್ತದೆ ಮ್ಯಾಪಿಂಗ್ ಆಗಿದೆಯೋ ಇಲ್ಲವೋ ಎಂಬುದನ್ನು ಮತಗಟ್ಟೆ ಅಧಿಕಾರಿಗಳಿಂದ ಖಚಿತ ಪಡಿಸಿಕೊಳ್ಳಬಹುದು ಎಂದು ತಿಳಿಸಿದರು.



ಸಿಎಂ ಡಿ ಕೆ ಶಿವಕುಮಾರ್ ಅವರು ರಾಜ್ಯಪಾಲ ಥಾವರ್ ಚಂದ್ ಗೆಹಲೊಟ್ ಅವರನ್ನು ಲೋಕಭವನದಲ್ಲಿ ಬುಧವಾರ ರಾತ್ರಿ ಸೌಜನ್ಯದ ಭೇಟಿ ಮಾಡಿದ್ದರು.

## ಕಿದ್ವಾಯಿ ನಿರ್ದೇಶಕರಾಗಿ ಡಾ. ಕೃಷ್ಣಪ್ಪ ನೇಮಕ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಬೆಂಗಳೂರಿನ ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆಯ ನಿರ್ದೇಶಕರಾಗಿ(ಪ್ರಭಾರ) ಡಾ.ಆರ್.ಕೃಷ್ಣಪ್ಪ ಅವರನ್ನು ನೇಮಕ ಮಾಡಿ ರಾಜ್ಯ ಸರ್ಕಾರ ಆದೇಶಿಸಿದೆ. ಜುಲೈ 6ರಂದು ನಿರ್ದೇಶಕ ಹುದ್ದೆಗೆ ವರದಿ ಮಾಡಿಕೊಂಡಿದ್ದಾರೆ.

ಡಾ.ಆರ್.ಕೃಷ್ಣಪ್ಪ ತಲೆ ಮತ್ತು ಕುತ್ತಿಗೆ ಗಂಥಿ ಶಾಸ್ತ್ರ ವಿಭಾಗದ ಮುಖ್ಯಸ್ಥರಾಗಿ ಹಾಗೂ ಪ್ರಸ್ತುತ ಪ್ರಾಧ್ಯಾಪಕರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆಯಲ್ಲಿ 22 ವರ್ಷದಿಂದ ಸೇವೆ ಸಲ್ಲಿಸಿರುವ ಅವರು ಶಿರ ಮತ್ತು ಕುತ್ತಿಗೆ ಗಂಥಿಶಾಸ್ತ್ರ ವಿಭಾಗದಲ್ಲಿ ಪರಿಣಿತಿ ಹೊಂದಿದ್ದಾರೆ.

ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆಯು ವಿಶ್ವಮಟ್ಟದಲ್ಲಿ ಪ್ರಖ್ಯಾತಿ ಪಡೆದಿದೆ. ಸಂಸ್ಥೆಯು ರೋಗಿಗಳಿಗೆ ಉನ್ನತ ದರ್ಜೆಯ ಚಿಕಿತ್ಸಾ ಸೌಲಭ್ಯಗಳನ್ನು ಒದಗಿಸುತ್ತಿದೆ. ಪಾಶ್ಚಿಮಾತ್ಯ ದೇಶಗಳಿಗೆ ಸರಿಸಮನಾಗಿ ಅತ್ಯಾಧುನಿಕ ಕ್ಯಾನ್ಸರ್ ಆರೈಕೆ ಮತ್ತು ತಂತ್ರಜ್ಞಾನ ಆಧಾರಿತ



ಸೇವೆಯನ್ನು ಒದಗಿಸುತ್ತಿದೆ. ಕ್ಯಾನ್ಸರ್ ಚಿಕಿತ್ಸೆಗಾಗಿ ಇತ್ತೀಚಿನ ಮತ್ತು ಆಧುನಿಕ ಸಲಕರಣೆಗಳನ್ನು ಕಿದ್ವಾಯಿ ಸಂಸ್ಥೆಯಲ್ಲಿ ಸಜ್ಜುಗೊಳಿಸುವ ಪ್ರಕ್ರಿಯೆಯಲ್ಲಿ ನಾವು ತೊಡಗಿಸಿಕೊಂಡಿದ್ದೇವೆ. ಸಂಸ್ಥೆಯಲ್ಲಿ ನನಗೆ ನಿರ್ದೇಶಕ ಹುದ್ದೆ ನೀಡಿದ ಸರ್ಕಾರ ಹಾಗೂ ವೈದ್ಯಕೀಯ ಶಿಕ್ಷಣ ಇಲಾಖೆಗೆ ನೂತನ ನಿರ್ದೇಶಕ ಡಾ.ಆರ್. ಕೃಷ್ಣಪ್ಪ ಕೃತಜ್ಞತೆ ಸಲ್ಲಿಸಿದ್ದಾರೆ.

## ವಿದ್ಯುತ್ ತಂತಿ ತಗುಲಿ ಮಹಿಳೆ ಸಾವು..!

• ಮಲ್ಲಮ್ಮ ನುಡಿ ವಾರ್ತೆ ಬೀದರ್

ಭಾಲ್ಕಿ ತಾಲೂಕಿನ ಮಳಚಾಪೂರ ಗ್ರಾಮದಲ್ಲಿ ವಿದ್ಯುತ್ ತಂತಿ ತಗುಲಿ ದಲಿತ ಮಹಿಳೆ ಮೃತಪಟ್ಟ ಪ್ರಕರಣಕ್ಕೆ ಸಂಬಂಧಿಸಿದಂತೆ ಕರ್ತವ್ಯಲೋಪ ಎಸಗಿದ ಅಧಿಕಾರಿಗಳನ್ನು ಕೂಡಲೇ ಅಮಾನತುಗೊಳಿಸಬೇಕು ಎಂದು ಕರ್ನಾಟಕ ದಲಿತ ಸಂಘರ್ಷ ಸಮಿತಿ (ಅಂಬೇಡ್ಕರ್‌ವಾದ) ಜಿಲ್ಲಾ ಸಂಚಾಲಕ ರಮೇಶ್ ಮಂದಕನಳ್ಳಿ ಅವರು ಆಗ್ರಹಿಸಿದ್ದಾರೆ.

ಈ ಕುರಿತು ಕಾರ್ಯ ಮತ್ತು ಪಾಲನೆ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರರಿಗೆ ಸಲ್ಲಿಸಿರುವ ಮನವಿಯಲ್ಲಿ, ಜುಲೈ 9ರಂದು ಮಳಚಾಪೂರ ಗ್ರಾಮದ ತುಳಸಮ್ಮಾ ಅವರು ಕಬ್ಬಿನ ಹೊಲದಲ್ಲಿ ಕೆಲಸ ಮಾಡುತ್ತಿದ್ದ ವೇಳೆ ವಿದ್ಯುತ್ ತಂತಿ ತುಂಡಾಗಿ ಬಿದ್ದು ಸ್ಥಳದಲ್ಲೇ ಮೃತಪಟ್ಟಿದ್ದಾರೆ ಎಂದು ಆರೋಪಿಸಲಾಗಿದೆ.

ಗ್ರಾಮದಲ್ಲಿರುವ ಅಪಾಯಕಾರಿ ಸ್ಥಿತಿಯಲ್ಲಿದ್ದ ವಿದ್ಯುತ್ ತಂತಿಗಳನ್ನು ದುರಸ್ತಿಪಡಿಸುವಂತೆ ಸಂಘಟನೆಯ ಪದಾಧಿಕಾರಿಗಳು ಹಾಗೂ ಗ್ರಾಮಸ್ಥರು ಹಲವು ಬಾರಿ ದೂರವಾಣಿ ಮೂಲಕ ಅಧಿಕಾರಿಗಳಿಗೆ ಮನವಿ ಮಾಡಿದರೂ ಯಾವುದೇ ಕ್ರಮ ಕೈಗೊಳ್ಳಲಿಲ್ಲ. ಅಧಿಕಾರಿಗಳ ನಿರ್ಲಕ್ಷ್ಯ ಹಾಗೂ ಕರ್ತವ್ಯ ಲೋಪದಿಂದಲೇ ಈ ದುರ್ಘಟನೆ ಸಂಭವಿಸಿದೆ ಎಂದು ದೂರಿನಲ್ಲಿ ತಿಳಿಸಲಾಗಿದೆ.

ಈ ಹಿನ್ನೆಲೆಯಲ್ಲಿ ಸಂಬಂಧಪಟ್ಟ ಲೈನ್‌ಮೆನ್ ಬಲವಂತರೆಡ್ಡಿ ಹಾಗೂ ಸೆಕ್ಷನ್ ಅಧಿಕಾರಿ ಸಾಯಿನಾಥ ಮಾಣಕೊಜೀ ಅವರನ್ನು ಕೂಡಲೇ ಸೇವೆಯಿಂದ ಅಮಾನತುಗೊಳಿಸಿ ಸೂಕ್ತ ಕ್ರಮ ಕೈಗೊಳ್ಳಬೇಕು. ಇಲ್ಲದಿದ್ದರೆ ಕಾರ್ಯ ಮತ್ತು ಪಾಲನೆ ವಿಭಾಗದ ಕಚೇರಿ ಎದುರು ಧರಣಿ ಸತ್ಯಾಗ್ರಹ ನಡೆಸುವುದಾಗಿ ಸಂಘಟನೆ ಎಚ್ಚರಿಕೆ ನೀಡಿದ್ದಾರೆ.

ಈ ಸಂದರ್ಭದಲ್ಲಿ ಜಿಲ್ಲಾ ಸಂಘಟನಾ ಸಂಚಾಲಕರಾದ ಝುರೆಪ್ಪಾ ರಾಂಪೂರೆ, ಸಂಜೀವಕುಮಾರ ಬ್ಯಾಗಿ, ಫಾಳೆಪ್ಪಾ ಮೈಲಾರೆ, ಭಾಲ್ಕಿ ತಾಲೂಕು ಸಂಚಾಲಕ ರಾಜಕುಮಾರ ಕಾಳೇಕರ, ಜಿಲ್ಲಾ ಸಮಿತಿ ಸದಸ್ಯರಾದ ಲಕ್ಷ್ಮಣ ಹೊನ್ನಡ್ಡಿ, ನಾಗೇಶ ಜನವಾಡ ಹಾಗೂ ಬೀದರ ತಾಲೂಕು ಸಂಚಾಲಕ ಗೌತಮ ಸಾಗರ ಉಪಸ್ಥಿತರಿದ್ದರು.

# ಅಡ್ಡಮತಕ್ಕೆ ದಿಟ್ಟ ಕ್ರಮ

## ಬಿಜೆಪಿ ಪಕ್ಷ ಸಂಘಟನೆಗೆ ಒತ್ತು | ಎಸ್‌ಐಆರ್ ಫಾರ್ಮ್ ಭರ್ತಿ ವಿರುದ್ಧ ಅಗರ್‌ವಾಲ್ ಆಕ್ಷೇಪ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಅಡ್ಡ ಮತದಾನ ಮಾಡಿದವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಮತ್ತು ರಾಜ್ಯ ಉಸ್ತುವಾರಿ ಡಾ.ರಾಧಾಮೋಹನ್ ದಾಸ್ ಅಗ್ರವಾಲ್ ಅವರು ಆಕ್ಷೇಪಿಸಿದ್ದಾರೆ. ನಗರದ ರಾಜ್ಯ ಬಿಜೆಪಿ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಇಂದು ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಅವರು ಮತ್ತೊಂದು ಪ್ರಶ್ನೆಗೆ ಉತ್ತರ ನೀಡಿದ್ದಾರೆ.

**ಸಮನ್ವಯ ಸಮಿತಿ ರಚನೆ:** ಬಿಜೆಪಿ– ಜೆಡಿಎಸ್ ನಡುವೆ ನಿರಂತರ ಸಂಪರ್ಕವಿದ್ದು, ಮಾತುಕತೆ ನಡೆಯುತ್ತದೆ. ಸಮನ್ವಯ ಸಮಿತಿ ರಚಿಸಿದ್ದು ನಮ್ಮ ಪಕ್ಷದ ವತಿಯಿಂದ ರಾಜ್ಯಾಧ್ಯಕ್ಷ ವಿಜಯೇಂದ್ರ, ವಿಪಕ್ಷ ನಾಯಕ ಆರ್.ಅಶೋಕ್, ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಅವರು ಇದರಲ್ಲಿ ಇದ್ದಾರೆ ಎಂದು ತಿಳಿಸಿದ್ದಾರೆ.

**ಎಸ್‌ಐಆರ್ ಬಗ್ಗೆ ಆಕ್ಷೇಪ:** ಧಾರ್ಮಿಕ ಸ್ಥಳ, ಕಾಂಗ್ರೆಸ್ ನಾಯಕರು ಸೂಚಿಸಿದ ಸ್ಥಳಗಳಲ್ಲಿ ಸಾಮೂಹಿಕವಾಗಿ ಎಸ್‌ಐಆರ್ ಎನ್ಯುಮರೇಷನ್ ಫಾರ್ಮ್ ತುಂಬಿಸುತ್ತಿದ್ದು ಇದು ಸರಿಯಲ್ಲ. ಕಾಂಗ್ರೆಸ್ ಪಕ್ಷದ ಪರವಾಗಿ ಎಸ್.ಐಆರ್ ಬಳಸಿಕೊಳ್ಳಲು ಪ್ರಯತ್ನ ನಡೆದಿದೆ. ಬಿಎಲ್‌ಒಗಳು ಮನೆಗೆ ತೆರಳದ ಕುರಿತು ನಾವು ದೂರು ನೀಡಿದ್ದೇವೆ ಎಂದಿದ್ದಾರೆ.







### ಖರ್ಗೆ ಮಾತು ಗಮನಿಸಲ್ಲ

ರಾಜ್ಯ ಸರಕಾರವು ಬಿಜೆಪಿಯ ಬಿಎಲ್‌ಎ 2 ಅನ್ನು ಬಳಸಿಕೊಳ್ಳುತ್ತಿಲ್ಲ ಎಂದು ಟೀಕಿಸಿದರು. ಪಕ್ಷದ ಆಂತರಿಕ ವಿಚಾರಗಳನ್ನು ಜನಪ್ರತಿನಿಧಿಗಳ ಜೊತೆ ಚರ್ಚಿಸಿದ್ದಾಗಿ ಪ್ರಶ್ನೆಗೆ ಉತ್ತರ ಕೊಟ್ಟ ಅಗರ್‌ವಾಲ್, ಪ್ರಿಯಾಂಕ್ ಖರ್ಗೆ ಅವರ ಮಾತನ್ನು ಯಾರೂ ಗಮನಿಸುತ್ತಿಲ್ಲ. ಕುಂಕುಮದ ವಿಚಾರದಲ್ಲೂ ಅವರ ಮಾತು ಸರಿಯಲ್ಲ ಎಂದು ಟೀಕಿಸಿದ್ದಾರೆ.

### ಸಮನ್ವಯ ಸಮಿತಿ ಬೇಕು

ಬಿಜೆಪಿ ಮತ್ತು ಜೆಡಿಎಸ್ ನಡುವೆ ಸಮನ್ವಯ ಸಮಿತಿ ಬೇಕು ಎಂಬ ಬೇಡಿಕೆ ಸರಿ ಇದೆ. ಜಿಬಿಎನಲ್ಲಿ ಜೆಡಿಎಸ್‌ಗೂ ಸ್ಥಾನ ನೀಡಬೇಕು. ಎಲ್ಲಿ ಸ್ಥಾನಗಳನ್ನು ಕೊಡಬೇಕು, ಅಭ್ಯರ್ಥಿಗಳು ಯಾರು ಎಂಬುದನ್ನು ತೀರ್ಮಾನ ಮಾಡಲು ಎರಡೂ ಪಕ್ಷಗಳ ನಡುವೆ ಸಮನ್ವಯ ಸಮಿತಿ ಇರಬೇಕು. ಜಿಬಿಎ ಸಂಬಂಧ ಸಮನ್ವಯ ಸಮಿತಿ ಮಾಡುತ್ತೇವೆ ಎಂದು ಶಾಸಕ ಎಸ್.ಆರ್.ವಿಶ್ವನಾಥ್ ಹೇಳಿದ್ದಾರೆ.

### ಭಿನ್ನಾಭಿಪ್ರಾಯ ಮರೆತು..!

ಪಕ್ಷದ ಕೆಲವರ ಜೊತೆಗಿನ ಭಿನ್ನಾಭಿಪ್ರಾಯ ಮರೆತು ಸಂಘಟನೆಯಲ್ಲಿ ತೊಡಗಿಸಿಕೊಳ್ಳುತ್ತೇವೆ. ಮುಂದೆ ಬರುವ ಸ್ಥಳೀಯ ಸಂಸ್ಥೆ ಚುನಾವಣೆ ಇರಬಹುದು, ವಿಧಾನಸಭಾ ಚುನಾವಣೆ ಗಮನದಲ್ಲಿಟ್ಟುಕೊಂಡು ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದಲ್ಲಿ ಕನಿಷ್ಠ ನಾಲ್ಕು ಶಾಸಕರು ಗೆಲ್ಲಲು ಸಂಸದ ಡಾ. ಕೆ ಸುಧಾಕರ್ ಅವರೊಂದಿಗೆ ಕೆಲಸ ಮಾಡುತ್ತೇನೆ ಎಂದು ವಿಶ್ವನಾಥ್ ತಿಳಿಸಿದ್ದಾರೆ.

### ಪ್ರಭಾವ ಬೀರುವ ಭಿನ್ನತೆ

ರಾಜ್ಯ ಉಸ್ತುವಾರಿ ಡಾ.ರಾಧಾಮೋಹನ್ ದಾಸ್ ಅಗ್ರವಾಲ್ ಅವರು ನಮ್ಮನ್ನು ಕರೆದಿದ್ದರು. ನಮ್ಮ ಭಾಗದಲ್ಲಿ ಅನ್ಯೋನ್ಯವಾಗಿ ಬಿಜೆಪಿಯನ್ನು ಸದೃಢವಾಗಿ ಕಟ್ಟಬೇಕು; ಪರಸ್ಪರ ಏನೇ ಭಿನ್ನಾಭಿಪ್ರಾವಿದ್ದರೂ ಅದು ಪಕ್ಷದ ಮೇಲೆ ಪ್ರಭಾವ ಆಗಬಾರದು. ಪಕ್ಷಕ್ಕೆ ನಷ್ಟ ಆಗಬಾರದೆಂದು ಹೇಳಿದ್ದು, ಒಪ್ಪಿದ್ದೇವೆ. ಸಣ್ಣಪುಟ್ಟ ಅಭಿಪ್ರಾಯ ಹೇಳಿದ್ದೇವೆ ಎಂದಿದ್ದಾರೆ ಸಂಸದ ಡಾ.ಸುಧಾಕರ್.

## ಜೆಸ್ಕಾಂ ವ್ಯಾಪ್ತಿಯಲ್ಲಿ ವಿದ್ಯುತ್ ಕಳ್ಳತನ, ಸೋರಿಕೆ ವಿರುದ್ಧ ಕಾರ್ಯಾಚರಣೆ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಜೆಸ್ಕಾಂ ವ್ಯಾಪ್ತಿಯ ಏಳು ಜಿಲ್ಲೆಗಳಲ್ಲಿ ಜಾಗೃತದಳದ ಅಧಿಕಾರಿಗಳು ಹಾಗೂ ಸಿಬ್ಬಂದಿ ನಡೆಸಿದ ವಿಶೇಷ ಕಾರ್ಯಾಚರಣೆಯಲ್ಲಿ ವಿದ್ಯುತ್ ದುರಪಯೋಗ, ಸೋರಿಕೆ ಮತ್ತು ಕಳ್ಳತನದ ಪ್ರಕರಣಗಳನ್ನು ಪತ್ತೆಹಚ್ಚಿ, 2026–27ನೇ ಸಾಲಿನ ಮೊದಲ ತ್ರೈಮಾಸಿಕದಲ್ಲಿ ಒಟ್ಟು 4.32 ಕೋಟಿ ರೂ. ದಂಡ ವಿಧಿಸಲಾಗಿದೆ ಎಂದು ಜೆಸ್ಕಾಂ ಪ್ರಕಟಣೆಯಲ್ಲಿ ತಿಳಿಸಿದೆ.

ಜೆಸ್ಕಾಂ ಜಾಗೃತದಳದ ಪೊಲೀಸ್ ಅಧಿಕಾರಿಗಳು ಹಾಗೂ ಕಾರ್ಯನಿರ್ವಾಹಕ ಅಭಿಯಂತರರು (ವಿ) ನೇತೃತ್ವದಲ್ಲಿ ಕಲಬುರಗಿ, ಯಾದಗಿರಿ, ಬೀದರ್, ಬಳ್ಳಾರಿ, ರಾಯಚೂರು, ಕೊಪ್ಪಳ ಹಾಗೂ ವಿಜಯನಗರ ಜಿಲ್ಲೆಗಳಲ್ಲಿ ತಾಂತ್ರಿಕ ಸಿಬ್ಬಂದಿಯ ಸಹಯೋಗದೊಂದಿಗೆ ದಿಢೀರ್ ಕಾರ್ಯಾಚರಣೆ ನಡೆಸಲಾಯಿತು. ಈ ವೇಳೆ ಒಟ್ಟು 2,406 ಸಂಜ್ಞೇಯ ಪ್ರಕರಣಗಳು ಹಾಗೂ 197 ಅಸಂಜ್ಞೇಯ ಪ್ರಕರಣಗಳು ದಾಖಲಾಗಿದ್ದು, ಒಟ್ಟಾರೆ 4.32 ಕೋಟಿ ರೂ. ದಂಡ ವಿಧಿಸಲಾಗಿದೆ.

ವಿದ್ಯುತ್ ಕಳ್ಳತನ ಹಾಗೂ ದುರಪಯೋಗವನ್ನು ತಡೆಗಟ್ಟುವ ನಿಟ್ಟಿನಲ್ಲಿ ಇಂತಹ ವಿಶೇಷ ಕಾರ್ಯಾಚರಣೆಗಳು ಮುಂದುವರಿಯಲಿದ್ದು, ಗ್ರಾಹಕರು ವಿದ್ಯುತ್ ಅನ್ನು ಕಾನೂನುಬದ್ಧವಾಗಿ ಬಳಸುವ ಮೂಲಕ ಸಂಸ್ಥೆಯೊಂದಿಗೆ ಸಹಕರಿಸಬೇಕು ಎಂದು ಜೆಸ್ಕಾಂ ಮನವಿ ಮಾಡಿದೆ.

## ಸಬ್ ರಿಜಿಸ್ಟರ್ ಕಚೇರಿಯಲ್ಲಿ ದಲ್ಲಾಳಿ ಹಾವಳಿ..!

• ಎಂ.ಜಂಬುನಾಥ, ವರದಿಗಾರ, ಬಳ್ಳಾರಿ

ಸಾರ್ವಜನಿಕರ ಆಸ್ತಿ ನೋಂದಣಿ, ಮಾರಾಟ ಪತ್ರ, ದಾನ ಪತ್ರ, ಅಡಮಾನ ಪತ್ರ, ವಿವಾಹ ನೋಂದಣಿ ಸೇರಿದಂತೆ ವಿವಿಧ ದಾಖಲೆಗಳ ನೋಂದಣಿಗಾಗಿ ಪ್ರತಿದಿನ ನೂರಾರು ಜನರು ಕುರುಗೋಡು ಸಬ್ ರಿಜಿಸ್ಟರ್ ಕಚೇರಿಗೆ ಆಗಮಿಸುತ್ತಿದ್ದಾರೆ. ಆದರೆ, ಕಚೇರಿಯಲ್ಲಿ ದಲಾಳಿಗಳ ಹಾವಳಿ ಮಿತಿ ಮೀರಿ ಸಾರ್ವಜನಿಕರು ಹಲವು ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ ಎಂದು ನಾಗರಿಕರು ಆರೋಪಿಸುತ್ತಿದ್ದಾರೆ.

**ಹೆಚ್ಚುವರಿ ಹಣ ವಸೂಲಿ:** ಸಾರ್ವಜನಿಕರ ಆರೋಪಗಳ ಪ್ರಕಾರ, ಕಚೇರಿ ಆವರಣದಲ್ಲೇ ದಲಾಳಿಗಳ ಪ್ರಭಾವ ಹೆಚ್ಚಾಗಿದ್ದು, ಯಾವುದೇ ದಾಖಲೆ ನೋಂದಣಿ ಅಥವಾ ಪ್ರಮಾಣ ಪತ್ರ ಪಡೆಯಲು ಅವರ ಸಹಾಯವಿಲ್ಲದೆ ಕೆಲಸವೇ ಆಗುವುದಿಲ್ಲ ಎಂಬ ವಾತಾವರಣ ನಿರ್ಮಾಣವಾಗಿದೆ ಎನ್ನಲಾಗುತ್ತಿದೆ.

**ಜನರಿಗೆ ಆರ್ಥಿಕ ಹೊರೆ:** ಸಾಮಾನ್ಯವಾಗಿ ಸರ್ಕಾರ ನಿಗದಿಪಡಿಸಿರುವ ಶುಲ್ಕದ ಹೊರತಾಗಿ ಹೆಚ್ಚುವರಿ ಹಣವನ್ನು ವಸೂಲಿ ಮಾಡಲಾಗುತ್ತಿದೆ ಎಂಬ ದೂರುಗಳು ವ್ಯಾಪಕವಾಗಿ ವ್ಯಕ್ತವಾಗಿವೆ? ಇದರಿಂದ ಬಡ ಹಾಗೂ ಮಧ್ಯಮ ವರ್ಗದ ಜನರು ಅನಗತ್ಯ ಆರ್ಥಿಕ ಹೊರೆ ಹೊರುವಂತಾಗಿದೆ ಎಂದು ಸಾರ್ವಜನಿಕರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಪಂಚಾಯಿತಿ ಫಜೀತಿ






ಸಬ್–ರಿಜಿಸ್ಟಾರ್ ಕಚೇರಿಯಲ್ಲಿ ಸಾರ್ವಜನಿಕರಿಗೆ ಪಾರದರ್ಶಕ ಹಾಗೂ ತ್ವರಿತ ಸೇವೆ ದೊರೆಯುವಂತೆ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು. ಕಚೇರಿ ಆವರಣದಲ್ಲಿ ಅನಧಿಕೃತವಾಗಿ ಸಂಚರಿಸುವ ದಲ್ಲಾಳಿಗಳ ವಿರುದ್ಧ ಕಟ್ಟುನಿಟ್ಟಿನ ಕ್ರಮ ಜರುಗಿಸಿ, ಸಾರ್ವಜನಿಕರು ನೇರವಾಗಿ ಅಧಿಕಾರಿಗಳನ್ನು ಸಂಪರ್ಕಿಸಿ ತಮ್ಮ ಕೆಲಸಗಳನ್ನು ಮಾಡಿಸಿಕೊಳ್ಳುವಂತಹ ವಾತಾವರಣ ನಿರ್ಮಿಸಬೇಕು.

–ಬಸವರಾಜ, ದಲಿತ ಸಂಘರ್ಷ ಸಮಿತಿ, ತಾಲೂಕು ಸಂಚಾಲಕರು ಕುರುಗೋಡು

### ಕಂದಾಯ ಸಚಿವರೇ ಇತ್ತ ಗಮನಿಸಿ..!

ಕುರುಗೋಡು ಸಬ್ ರಿಜಿಸ್ಟರ್ ಕಚೇರಿನಲ್ಲಿ ನಡೆಯುತ್ತಿರುವ ಅವ್ಯವಹಾರ ಹಾಗೂ ಸಾರ್ವಜನಿಕರ ಸಮಸ್ಯೆಗಳ ಬಗ್ಗೆ ಅಧಿಕಾರಿ ಸಂತೋಷ್ ಕುಮಾರ್ ಪಾಟೀಲ್ ರವರನ್ನು ತಿಳಿದುಕೊಳ್ಳುವುದಕ್ಕೆ ಬೆಳಗ್ಗೆಯಿಂದ ಸಾಯಂಕಾಲದ ವರೆಗೆ ಫೋನ್ ಕರೆ ಮಾಡಿದರೆ ಕರೆ ಸ್ವೀಕರಿಸಲಿಲ್ಲ. ಇದಕ್ಕೆ ಕಾರಣ ಏನೆಂಬುದು ಸಂಬಂಧಿತ ಇಲಾಖೆಯ ಸಚಿವರೇ ಉತ್ತರಿಸಬೇಕು ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.

### ಅಧಿಕೃತ ಅನುಮತಿ ಇಲ್ಲದೆ ವ್ಯವಹಾರ

ಕಚೇರಿಯಲ್ಲಿ ದಲಾಳಿಗಳು ನಿರಂತರವಾಗಿ ಓಡಾಡುತ್ತಿದ್ದು, ಕೆಲವರು ಯಾವುದೇ ಅಧಿಕೃತ ಅನುಮತಿ ಇಲ್ಲದೇ ಸಾರ್ವಜನಿಕರೊಂದಿಗೆ ವ್ಯವಹಾರ ನಡೆಸುತ್ತಿದ್ದಾರೆ ಎಂಬ ಆರೋಪವೂ ಕೇಳಿಬಂದಿದೆ. ಕಚೇರಿ ಆವರಣದಲ್ಲೇ ಈ ರೀತಿಯ ಚಟುವಟಿಕೆಗಳು ನಡೆಯುತ್ತಿದ್ದರೂ, ಸಂಬಂಧಪಟ್ಟ ಅಧಿಕಾರಿಗಳು ಯಾವುದೇ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುತ್ತಿಲ್ಲ ಎಂಬ ಟೀಕೆಗಳು ವ್ಯಕ್ತವಾಗಿವೆ. ಇದರಿಂದ ಆಡಳಿತದ ಕಾರ್ಯವೈಖರಿ ಕುರಿತು ಸಾರ್ವಜನಿಕರಲ್ಲಿ ಅನುಮಾನಗಳು ಮೂಡಿವೆ.

### ವಿವಾಹ ಪ್ರಮಾಣ ಪತ್ರಕ್ಕೂ ಅಲೆದಾಟ

ವಿವಾಹ ಪ್ರಮಾಣ ಪತ್ರ ಪಡೆಯಲು ಬರುವ ಸಾರ್ವಜನಿಕರು ಹೆಚ್ಚು ಸಂಕಷ್ಟ ಅನುಭವಿಸುತ್ತಿದ್ದಾರೆ ಎಂಬ ಆರೋಪವೂ ಕೇಳಿಬರುತ್ತಿದೆ. ಅಗತ್ಯ ದಾಖಲೆಗಳನ್ನು ಸಲ್ಲಿಸಿದ ಬಳಿಕವೂ ಪ್ರಮಾಣ ಪತ್ರವನ್ನು ಸಮಯಕ್ಕೆ ನೀಡದೆ, ವಾರಗಳ ಕಾಲ ಹಾಗೂ ಕೆಲವೊಮ್ಮೆ ತಿಂಗಳಗಟ್ಟಲೆ ಕಚೇರಿಗೆ ಅಲೆದಾಡುವಂತೆ ಮಾಡಲಾಗುತ್ತಿದೆ ಎಂದು ಹಲವರು ದೂರಿದ್ದಾರೆ. ಇದರಿಂದ ಉದ್ಯೋಗ, ವೀಸಾ, ಬ್ಯಾಂಕ್ ಹಾಗೂ ಇತರ ಸರ್ಕಾರಿ ಕೆಲಸಗಳಿಗೆ ಪ್ರಮಾಣ ಪತ್ರ ಅಗತ್ಯವಿರುವವರಿಗೆ ತೀವ್ರ ತೊಂದರೆ ಉಂಟಾಗುತ್ತಿದೆ ಎಂದು ಸಾರ್ವಜನಿಕರು ಹೇಳಿದ್ದಾರೆ.

**ಸಚಿವ ಸಂಪುಟ ವಿಸ್ತರಣೆಯಾದರೆ ಸರ್ಕಾರದ ಬುಡ ಅಲುಗಾಡಬಹುದು; ಮೂರನೇ CM ಬರಲು ಸಾಧ್ಯವಿಲ್ಲ; ಸತೀಶ್ ಜಾರಕಿಹೊಳಿ**

## ವಿಶ್ವಗುರು ಬಸವೇಶ್ವರರ ಆದರ್ಶ ಪಾಲಿಸಿದರೆ ಜೀವನದಲ್ಲಿ ನೆಮ್ಮದಿ, ಶಾಂತಿ

ಮಾನವ ಸಮಾಜಕ್ಕೆ ಸಮಾನತೆ, ಕಾಯಕ, ದಾಸೋಹ ಮತ್ತು ಸತ್ಯದ ಮಾರ್ಗವನ್ನು ತೋರಿದ ವಿಶ್ವಗುರು ಬಸವೇಶ್ವರರು ಇಂದಿಗೂ ಕೋಟ್ಯಾಂತರ ಜನರಿಗೆ ಆದರ್ಶಪ್ರಾಯರಾಗಿದ್ದಾರೆ. ಅವರು ಬೋಧಿಸಿದ ತತ್ವಗಳು ಕೇವಲ ಒಂದು ಧರ್ಮ ಅಥವಾ ಸಮುದಾಯಕ್ಕೆ ಸೀಮಿತವಾಗದೆ, ಇಡೀ ಮಾನವಕುಲದ ಕಲ್ಯಾಣಕ್ಕಾಗಿ ರೂಪುಗೊಂಡ ಜೀವನ ಮೌಲ್ಯಗಳಾಗಿವೆ.

## ಸಂಪಾದಕೀಯ

ಮಾಣಿಕರೆಡ್ಡಿ ಕೌಡಾಳೆ
ಪ್ರಧಾನ ಸಂಪಾದಕರು
ಮೊ: 9845028349



ಬಸವೇಶ್ವರರು ಹೇಳಿದ "ಕಾಯಕವೇ ಕೈಲಾಸ" ಎಂಬ ಸಂದೇಶವು ಪ್ರತಿಯೊಬ್ಬರೂ ಪ್ರಾಮಾಣಿಕವಾಗಿ ದುಡಿದು ಬದುಕಬೇಕು ಎಂಬುದನ್ನು ಸಾರುತ್ತದೆ. ದುಡಿಮೆಯಿಂದ ಗಳಿಸಿದ ಸಂಪತ್ತನ್ನು ಸಮಾಜದ ಒಳಿತಿಗಾಗಿ ಬಳಸುವ ದಾಸೋಹ ತತ್ವವು ಮಾನವೀಯತೆ ಮತ್ತು ಪರೋಪಕಾರದ ಮಹತ್ವವನ್ನು ಎತ್ತಿಹಿಡಿಯುತ್ತದೆ.

ಇಂದಿನ ಸಮಾಜದಲ್ಲಿ ಅಶಾಂತಿ, ಭ್ರಷ್ಟಾಚಾರ, ಜಾತಿ-ಮತ ಭೇದಭಾವ ಮತ್ತು ದ್ವೇಷ ಹೆಚ್ಚುತ್ತಿರುವ ಸಂದರ್ಭದಲ್ಲಿ ಬಸವಣ್ಣನವರ ಆದರ್ಶಗಳು ಅತ್ಯಂತ ಪ್ರಸ್ತುತವಾಗಿವೆ. ಅವರ ಸಮಾನತೆ ಮತ್ತು ಸಹಬಾಳ್ವೆಯ ಸಂದೇಶವನ್ನು ಪ್ರತಿಯೊಬ್ಬರೂ ಅಳವಡಿಸಿಕೊಂಡರೆ ಸಮಾಜದಲ್ಲಿ ಶಾಂತಿ, ಸೌಹಾರ್ದತೆ ಮತ್ತು ನೆಮ್ಮದಿ ನೆಲೆಸುತ್ತದೆ.

ವಿಶ್ವಗುರು ಬಸವೇಶ್ವರರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವುದು ಕೇವಲ ವೈಯಕ್ತಿಕ ಬೆಳವಣಿಗೆಗೆ ಮಾತ್ರವಲ್ಲ, ಉತ್ತಮ ಸಮಾಜ ನಿರ್ಮಾಣಕ್ಕೂ ಅಗತ್ಯವಾಗಿದೆ. ಅವರ ವಚನಗಳು ಮತ್ತು ಜೀವನ ಸಂದೇಶಗಳು ಇಂದಿನ ಯುವಜನತೆಗೆ ದಾರಿದೀಪವಾಗಿದ್ದು, ಪ್ರತಿಯೊಬ್ಬರೂ ಅವುಗಳನ್ನು ಅನುಸರಿಸಿದರೆ ಜೀವನದಲ್ಲಿ ಶಾಂತಿ ಸಿಗಲಿದೆ.




## ಹಳೆಯ ವಿದ್ಯಾರ್ಥಿಗಳಿಂದ ಕೆಎಸ್‌ಪಿ ಮಂಡಳ ಅಧ್ಯಕ್ಷ ಅನೀಲ ಶಿಂದೆಗೆ ಭವ್ಯ ಗೌರವ ಸನ್ಮಾನ

• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ಕಲ್ಯಾಣ ಕರ್ನಾಟಕದ ಬಡ ಹಾಗೂ ಮಧ್ಯಮ ವರ್ಗದ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ಒದಗಿಸಬೇಕು ಎಂಬ ಮಹತ್ತರ ಕನಸಿನೊಂದಿಗೆ ದಿವಂಗತ ಬಾಬಾರಾವ್ ಪಾಟೀಲ್ ಶಿಂದೆ ಅವರು ಐದು ದಶಕಗಳ ಹಿಂದೆ ಸ್ಥಾಪಿಸಿದ ಕಿಸಾನ್ ಶಿಕ್ಷಣ ಪ್ರಸಾರಕ ಮಂಡಳ (ಕೆಎಸ್‌ಪಿ) ಇಂದು ಸಾವಿರಾರು ವಿದ್ಯಾರ್ಥಿಗಳ ಬದುಕಿಗೆ ದಾರಿದೀಪವಾಗಿದ್ದು, ಈ ಭಾಗದ ಶಿಕ್ಷಣ ಕ್ಷೇತ್ರದಲ್ಲಿ ಅಳಿಸಲಾಗದ ಛಾಪು ಮೂಡಿಸಿದೆ ಎಂದು ಸಂಸ್ಥೆಯ ಅಧ್ಯಕ್ಷ ಅನೀಲ ಬಿ. ಶಿಂದೆ ಹೇಳಿದರು.

ಪಟ್ಟಣದ ಶಿವಾಜಿ ಮಹಾವಿದ್ಯಾಲಯದಲ್ಲಿ 1998ನೇ ಸಾಲಿನ ಹಳೆಯ ವಿದ್ಯಾರ್ಥಿಗಳ ಸಂಘದ ವತಿಯಿಂದ ಆಯೋಜಿಸಿದ್ದ ಗೌರವ ಸನ್ಮಾನ ಸಮಾರಂಭದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು, ಸಂಸ್ಥೆಯಲ್ಲಿ ವಿದ್ಯಾಭ್ಯಾಸ ಮಾಡಿದ ವಿದ್ಯಾರ್ಥಿಗಳು ಇಂದು ದೇಶ-ವಿದೇಶಗಳಲ್ಲಿ ವಿವಿಧ ಉನ್ನತ ಹುದ್ದೆಗಳನ್ನು ಅಲಂಕರಿಸಿ ಸಮಾಜದ ಅಭಿವೃದ್ಧಿಗೆ ತಮ್ಮದೇ ಆದ ಕೊಡುಗೆ ನೀಡುತ್ತಿರುವುದು ಸಂಸ್ಥೆಯ ಗುಣಮಟ್ಟದ ಶಿಕ್ಷಣ, ಶಿಸ್ತು ಹಾಗೂ ಮೌಲ್ಯಾಧಾರಿತ ಸಂಸ್ಕಾರದ ಪ್ರತಿಫಲವಾಗಿದೆ ಎಂದರು.

ದಿವಂಗತ ಬಾಬಾರಾವ್ ಹೊನ್ನಾಳಿಕರ್ ಅವರ ತ್ಯಾಗ, ಪರಿಶ್ರಮ ಹಾಗೂ ದೂರದೃಷ್ಟಿಯ ಫಲವಾಗಿ ಸಂಸ್ಥೆ ಇಂದು ಶಿಕ್ಷಣ ಕ್ಷೇತ್ರದಲ್ಲಿ ಮಾದರಿಯಾಗಿ ಬೆಳೆದಿದೆ. ಹಿರಿಯರು ಹಾಕಿಕೊಟ್ಟ ಆದರ್ಶ ಮಾರ್ಗದಲ್ಲಿಯೇ ಸಂಸ್ಥೆಯನ್ನು ಮುನ್ನಡೆಸಲಾಗುತ್ತಿದ್ದು, ಮುಂದಿನ ದಿನಗಳಲ್ಲಿ ಇನ್ನಷ್ಟು ಶೈಕ್ಷಣಿಕ ಸಾಧನೆಗಳನ್ನು ಮಾಡುವ ಸಂಕಲ್ಪ ಹೊಂದಿದ್ದೇವೆ. ಸಂಸ್ಥೆಯ ಅಭಿವೃದ್ಧಿಗೆ ಹಳೆಯ ವಿದ್ಯಾರ್ಥಿಗಳು ಮತ್ತು ಸಮಾಜದ ಸಹಕಾರ ನಿರಂತರವಾಗಿ ಅಗತ್ಯ ಎಂದು ಅವರು ತಿಳಿಸಿದರು.



ಮುಖ್ಯ ಅತಿಥಿಯಾಗಿ ಮಾತನಾಡಿದ ಕರ್ನಾಟಕ ರಾಜ್ಯ ಪ್ರೌಢಶಾಲಾ ಸಹ ಶಿಕ್ಷಕರ ಸಂಘದ ಭಾಲ್ಕಿ ತಾಲೂಕು ಅಧ್ಯಕ್ಷ ದತ್ತು ಕಾಟ್ಕರ್, ಕಿಸಾನ್ ಶಿಕ್ಷಣ ಪ್ರಸಾರಕ ಮಂಡಳವು ಕೇವಲ ಶಿಕ್ಷಣ ನೀಡುವ ಸಂಸ್ಥೆಯಲ್ಲ; ಸಾವಿರಾರು ಕುಟುಂಬಗಳ ಭವಿಷ್ಯ ರೂಪಿಸಿದ ಜ್ಞಾನ ದೇಗುಲವಾಗಿದೆ. ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಶಿಕ್ಷಣದ ಜೊತೆಗೆ ಸಂಸ್ಕಾರ, ಶಿಸ್ತು ಮತ್ತು ಸಾಮಾಜಿಕ ಜವಾಬ್ದಾರಿಯನ್ನು ಬೆಳೆಸುವ ಮೂಲಕ ವೈದ್ಯರು, ಇಂಜಿನಿಯರ್‌ಗಳು, ಶಿಕ್ಷಕರು, ಆಡಳಿತಾಧಿಕಾರಿಗಳು ಸೇರಿದಂತೆ ಅನೇಕ ಸಾಧಕರನ್ನು ಸಮಾಜಕ್ಕೆ ನೀಡಿರುವ ಹೆಗ್ಗಳಿಕೆ ಈ ಸಂಸ್ಥೆಯದು ಎಂದು ಪ್ರಶಂಸಿಸಿದರು.

ಸಮಾರಂಭದಲ್ಲಿ ಸಂಸ್ಥೆಯ ನಿರ್ದೇಶಕರಾದ ವೆಂಕಟರಾವ್ ನೆಲವಾಡೆ, ಪ್ರತಾಪರಾವ್ ಪಾಟೀಲ್, ಕೃಷ್ಣಕಾಂತ ಶಿಂದೆ, ಅನಂತ ಪಿ. ಪಾಟೀಲ್, ಪ್ರದೀಪ್ ಮನೆ, ಮಾಧವ್ ಜಾಧವ್, ಸುವರ್ಣ ಡಗೆ, ನರಸಿಂಗ್ ಬೊರೋಳೆ, ಸುಶೀಲ್ ಶರ್ಮಾ, ರಾಣಾ ಪ್ರತಾಪ್ ಯಾದವ್, ವಿಶ್ವಂಭರ ಬಿರಾದಾರ್, ವಿಲಾಸ್ ದಾವಲಜಿ, ಕಿರಣ್ ಶಿಗಳೆ, ನೀಲಕಂಠರಾವ್ ಕಾಳೆ ಹಾಗೂ ಆರ್.ಎಂ. ಬಿರಾದಾರ್ ಉಪಸ್ಥಿತರಿದ್ದರು.

ಕಾರ್ಯಕ್ರಮವನ್ನು ಪ್ರೊ. ಚಂದ್ರಕಾಂತ ಬಿರಾದಾರ್ ನಿರೂಪಿಸಿದರು.

## ತಿಪ್ಪಣ್ಣಪ್ಪ ಕಮಕನೂರಗೆ ಸಚಿವ ಸ್ಥಾನ ನೀಡುವಂತೆ ಸುನೀಲ ಭಾವಿಕಟ್ಟಿ ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ಕಲ್ಯಾಣ ಕರ್ನಾಟಕ ಭಾಗದ ಟೋಕ್ರೆ ಕೋಳಿ (ಕೋಲಿ-ಕಬ್ಬಲಿಗ) ಸಮಾಜದ ಪ್ರಭಾವಿ ನಾಯಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ತಿಪ್ಪಣ್ಣಪ್ಪ ಕಮಕನೂರ ಅವರಿಗೆ ರಾಜ್ಯ ಸಚಿವ ಸಂಪುಟದಲ್ಲಿ ಸಚಿವ ಸ್ಥಾನ ನೀಡುವಂತೆ ಅಂಬಿಗರ ಚೌಡಯ್ಯ ಯುವ ಸೇನೆಯ ಸಂಸ್ಥಾಪಕ ಅಧ್ಯಕ್ಷರಾದ ಸುನೀಲ್ ಭಾವಿಕಟ್ಟಿ ಆಗ್ರಹಿಸಿದ್ದಾರೆ.



ಈ ಕುರಿತು ಎಐಸಿಸಿ ರಾಷ್ಟ್ರೀಯ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆ, ರಾಜ್ಯದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಉಪ ಮುಖ್ಯಮಂತ್ರಿ ಜಿ.ಪರಮೇಶ್ವರ್, ಕೆಪಿಸಿಸಿ ರಾಜ್ಯಾಧ್ಯಕ್ಷ ಬಿ.ಕೆ ಹರಿಪ್ರಸಾದ್, ಗೃಹ ಮಂತ್ರಿ ಪ್ರಿಯಾಂಕ್ ಖರ್ಗೆ, ಪಂಚಾಯತ್ ರಾಜ್ ಸಚಿವರಾದ ಈಶ್ವರ ಬಿ. ಖಂಡ್ರೆ ಸೇರಿದಂತೆ ಇನ್ನಿತರ ಪಕ್ಷದ ವರಿಷ್ಠರಿಗೆ ಪತ್ರಿಕಾ ಪ್ರಕಟಣೆ ಮೂಲಕ ಮನವಿ ಮಾಡಿದ್ದಾರೆ.

ತಿಪ್ಪಣ್ಣಪ್ಪ ಕಮಕನೂರ ಅವರು ಕೋಲಿ ಸಮಾಜದ ಅಭಿವೃದ್ಧಿ, ಶೈಕ್ಷಣಿಕ ಪ್ರಗತಿ ಹಾಗೂ ಸಾಮಾಜಿಕ ಏಳಿಗೆಗಾಗಿ ಅವರು ಹಗಲಿರುಳು ಶ್ರಮಿಸುತ್ತಿದ್ದು, ಸಮಾಜದ ಸಮಸ್ಯೆಗಳಿಗೆ ಸ್ಪಂದಿಸುವ ಮೂಲಕ ಜನ ನಾಯಕನಾಗಿ ಗುರುತಿಸಿಕೊಂಡಿದ್ದಾರೆ. ಅವರ ಸರಳತೆ, ಜನಪರ ಕಾಳಜಿ ಮತ್ತು ಸಂಘಟನಾ ಸಾಮರ್ಥ್ಯದಿಂದ ಸಮಾಜದ ಎಲ್ಲ ವರ್ಗದ ಜನರ ಮೆಚ್ಚುಗೆಗೆ ಪಾತ್ರರಾಗಿದ್ದಾರೆ.

ಕಲ್ಯಾಣ ಕರ್ನಾಟಕ ಭಾಗಕ್ಕೆ ಹಾಗೂ ಕೋಲಿ ಸಮಾಜಕ್ಕೆ ನ್ಯಾಯಯುತ ಪ್ರಾತಿನಿಧ್ಯ ದೊರಕಬೇಕಾದರೆ ತಿಪ್ಪಣ್ಣಪ್ಪ ಕಮಕನೂರ ಅವರಿಗೆ ಸಚಿವ ಸ್ಥಾನ ನೀಡುವುದು ಅತ್ಯಂತ ಅಗತ್ಯವಾಗಿದೆ. ಅವರ ಅನುಭವ ಮತ್ತು ಜನ ಸೇವೆಯ ಮನೋಭಾವ ರಾಜ್ಯದ ಅಭಿವೃದ್ಧಿಗೆ ಸಹಕಾರಿಯಾಗಲಿದ್ದು, ಕಾಂಗ್ರೆಸ್ ಪಕ್ಷವು ಅವರಿಗೆ ಸಚಿವ ಸ್ಥಾನ ನೀಡಿ ಗೌರವಿಸಬೇಕು ಎಂದು ಸುನೀಲ ಭಾವಿಕಟ್ಟಿ ಮನವಿ ಮಾಡಿದ್ದಾರೆ.

## ಹೆಣ್ಣುಮಕ್ಕಳು ಸ್ವಾವಲಂಬಿ ಬದುಕು ಕಟ್ಟಿಕೊಳ್ಳಲಿ: ಸೂರ್ಯಕಾಂತ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ಹೆಣ್ಣುಮಕ್ಕಳು ಸ್ವಾವಲಂಬಿ ಬದುಕು ಕಟ್ಟಿಕೊಳ್ಳಬೇಕು ಎಂದು ಜಿಲ್ಲಾ ಪದವಿಪೂರ್ವ ಉಪನ್ಯಾಸಕರ ಸಂಘದ ಪ್ರಧಾನ ಕಾರ್ಯದರ್ಶಿ ಸೂರ್ಯಕಾಂತ ಐನಾಪುರೆ ಹೇಳಿದರು.

ಇಲ್ಲಿಯ ಕರ್ನಾಟಕ ರಾಜ್ಯ ಅಕ್ಕ ಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ ಪ್ರಾದೇಶಿಕ ಕೇಂದ್ರದಲ್ಲಿ ಬುಧವಾರ ನಡೆದ ಎಂ.ಎ. ಕನ್ನಡ, ಅರ್ಥಶಾಸ್ತ್ರ, ಎಂ.ಕಾಂ. ಹಾಗೂ ಬಿ.ಎಸ್ಸಿ ಗಣಿತ ವಿಭಾಗದ ವಿದ್ಯಾರ್ಥಿನಿಯರ ಬೀಳ್ಕೊಡುಗೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.






ಹೆಣ್ಣುಮಕ್ಕಳು ತಾವು ಕಲಿತ ವಿದ್ಯೆಯನ್ನು ವ್ಯರ್ಥ ಮಾಡಿಕೊಳ್ಳಬಾರದು. ಅದನ್ನು ಇತರರಿಗೆ ಧಾರೆ ಎರೆಯಬೇಕು ತಿಳಿಸಿದರು.

ಶ್ರೀ ಚಂದ್ರಪ್ಪ ಗೌರಶೆಟ್ಟಿ ಪದವಿಪೂರ್ವ ಕಾಲೇಜು ಪ್ರಾಚಾರ್ಯ ಡಾ. ಚಂದ್ರಪ್ಪ ಭತಮುರ್ಗೆ ಮಾತನಾಡಿ, ಅಕ್ಕ ಮಹಾದೇವಿ ಸಮಾಜದ ಉದ್ಧಾರಕ್ಕೆ ತಮ್ಮ ಬದುಕು ಮೀಸಲಾಗಿಟ್ಟಿದ್ದರು. ವಿದ್ಯಾರ್ಥಿಯರು ಯಾವುದೇ ಕಾಯಕ ಮಾಡಿದರೂ, ಭಕ್ತಿ, ಶ್ರದ್ಧೆಯಿಂದ ಮಾಡಬೇಕು ಎಂದು ಹೇಳಿದರು.

ಸದ್ಗುರು ಸಿದ್ಧಾರೂಢ ಮಹಿಳಾ ಪದವಿ ಕಾಲೇಜಿನ ಪ್ರಾಚಾರ್ಯ ನಾಗಪ್ಪ ಜಾನಕನೋರ ಮಾತನಾಡಿ, ಸ್ನಾತಕೋತ್ತರ ಪದವಿ ಪಡೆದ ಹೆಣ್ಣುಮಕ್ಕಳಿಗೆ ಬಹಳಷ್ಟು ಅವಕಾಶಗಳು ಇವೆ. ಮಹಿಳೆಯರು ಅವುಗಳ ಸದುಪಯೋಗ ಪಡೆದು, ಸಮಾಜದಲ್ಲಿ ತಮ್ಮದೇ ಆದ ಛಾಪು ಮೂಡಿಸಬೇಕು ಎಂದು ಹೇಳಿದರು. ಅಧ್ಯಕ್ಷತೆ ವಹಿಸಿದ್ದ ಪ್ರಾದೇಶಿಕ ಕೇಂದ್ರದ ನಿರ್ದೇಶಕ ಡಾ. ಆರ್.ವಿ. ಗಂಗಶೆಟ್ಟಿ ಮಾತನಾಡಿ, ಸ್ನಾತಕೋತ್ತರ ಪದವಿ ಪೂರೈಸಿದ ಹೆಣ್ಣುಮಕ್ಕಳಿಗೆ ಸಂಶೋಧನೆಗೆ ಹೆಚ್ಚಿನ ಅವಕಾಶಗಳು ಇವೆ ಎಂದು ತಿಳಿಸಿದರು. ಹೆಣ್ಣುಮಕ್ಕಳು ಉನ್ನತ ಶಿಕ್ಷಣ ಪಡೆಯುವ ಜತೆಗೆ, ಜ್ಞಾನ ಹಾಗೂ ಕೌಶಲ ಹೆಚ್ಚಿಸಿಕೊಳ್ಳಬೇಕು ಎಂದು ತಿಳಿಸಿದರು. ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯವು ಹೆಣ್ಣುಮಕ್ಕಳ ಶಿಕ್ಷಣಕ್ಕೆ ಉತ್ತೇಜನ ನೀಡುತ್ತಿದೆ. ಮಹಿಳಾ ಸಬಲೀಕರಣಕ್ಕೆ ಶ್ರಮಿಸುತ್ತಿದೆ ಎಂದು ಹೇಳಿದರು.

ಉಪನ್ಯಾಸಕರಾದ ಡಾ. ಪಂಡಿತ, ಡಾ. ಸಂಗಪ್ಪ ತೌಡಿ, ಈಶ್ವರ ರೆಡ್ಡಿ, ಶ್ರೀಲತಾ, ಪ್ರೇಮಲತಾ, ಸಿಬ್ಬಂದಿ ಮನೋಹರ ಶೆಟ್ಟಿ, ಮಹೇಶ, ಲಕ್ಷ್ಮಿ, ಮಲ್ಲಿಕಾರ್ಜುನ ಮತ್ತಿತರರು ಇದ್ದರು.

ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ಅಂತಿಮ ವರ್ಷದ ವಿದ್ಯಾರ್ಥಿನಿಯರಿಗೆ ಬಹುಮಾನ ವಿತರಿಸಲಾಯಿತು. ಧನಲಕ್ಷ್ಮಿ ನಿರೂಪಿಸಿದರು. ಶ್ರುತಿ ಸ್ವಾಗತಿಸಿದರು. ದೀಪಿಕಾ ವಂದಿಸಿದರು.

## ಎಸ್‌ಐಆರ್ ಅರ್ಜಿ ಭರ್ತಿಗೆ ಬಿಎಲ್‌ಒಗಳಿಗೆ ಸಹಕರಿಸಿ: ಭಗವಂತ ಖೂಬಾ ಮನವಿ



**ಬೀದರ್:** ಮಾಜಿ ಕೇಂದ್ರ ಸಚಿವರು ಹಾಗೂ ಮಾಜಿ ಸಂಸದರಾದ ಭಗವಂತ ಖೂಬಾ ಅವರು ಬುಧವಾರ ನಗರದ ವಾರ್ಡ್ ಸಂಖ್ಯೆ 30, 23 ಹಾಗೂ 1ರ ವಿವಿಧ ಬಡಾವಣೆಗಳಿಗೆ ಭೇಟಿ ನೀಡಿ, ವಿಶೇಷ ತೀವ್ರ ಪರಿಷ್ಕರಣೆ (SIR) ಕಾರ್ಯಕ್ರಮದ ಕುರಿತು ಸಾರ್ವಜನಿಕರಿಗೆ ಮಾಹಿತಿ ನೀಡಿದರು.

ಈ ವೇಳೆ ಮಾತನಾಡಿದ ಅವರು, ರಾಜ್ಯದ ಎಲ್ಲ ಮತದಾರರು ಸರ್ಕಾರದ ಬಿಎಲ್‌ಒ (Booth Level Officer) ಅಧಿಕಾರಿಗಳಿಗೆ ಸಹಕರಿಸಿ, ಎಸ್‌ಐಆರ್‌ಗೆ ಸಂಬಂಧಿಸಿದ ಅರ್ಜಿಗಳನ್ನು ಸರಿಯಾಗಿ ಭರ್ತಿ ಮಾಡಿ ನಿಗದಿತ ಅವಧಿಯೊಳಗೆ ಬಿಎಲ್‌ಒಗಳಿಗೆ ಸಲ್ಲಿಸಬೇಕು ಎಂದು ಮನವಿ ಮಾಡಿದರು.

ಮತದಾರರ ಪಟ್ಟಿಯನ್ನು ಸಮರ್ಪಕವಾಗಿ ಪರಿಷ್ಕರಿಸುವ ನಿಟ್ಟಿನಲ್ಲಿ ಸಾರ್ವಜನಿಕರ ಸಹಕಾರ ಅತ್ಯಗತ್ಯವಾಗಿದ್ದು, ಪ್ರತಿಯೊಬ್ಬ ಅರ್ಹ ಮತದಾರರು ಈ ಅಭಿಯಾನದಲ್ಲಿ ಸಕ್ರಿಯವಾಗಿ ಭಾಗವಹಿಸುವಂತೆ ಕರೆ ನೀಡಿದರು.

ಈ ಸಂದರ್ಭದಲ್ಲಿ ಬಿಜೆಪಿ ಮುಖಂಡರಾದ ಶಶಿಧರ್ ಹೊಸಳ್ಳಿ, ಸುನಿಲ್ ಗೌಳಿ, ಮಹೇಶ್ ಪಾಲಂ ಸೇರಿದಂತೆ ವಾರ್ಡ್‌ಗಳ ಪ್ರಮುಖರು ಉಪಸ್ಥಿತರಿದ್ದರು.

## ಸೋಲಾರ್ ಹಾಗೂ ವಿಂಡ್ ಕಂಪನಿಗಳ ವಿರುದ್ಧ ಕ್ರಮ ವಹಿಸದ ಸ್ಥಳೀಯ ಜನಪ್ರತಿನಿಧಿಗಳು

• ಮಲ್ಲಮ್ಮ ನುಡಿ ವಾರ್ತೆ ಕುಕನೂರ

ಪಟ್ಟಣದ ಪ್ರವಾಸಿ ಮಂದಿರ ದಲ್ಲಿ ಆಯೋಜಿಸಿದ್ದ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಎಸ್ ವಿ ಸೋಮರೆಡ್ಡಿ ಮಾತನಾಡುತ್ತಾ ಯಲಬುರ್ಗಾ ವಿಧಾನಸಭಾ ಕ್ಷೇತ್ರಾದ್ಯಂತ ಕಾನೂನು ಬಾಹಿರವಾಗಿ ಸ್ಥಾಪನೆಗೊಳ್ಳುತ್ತಿರುವ ಪವನ ಶಕ್ತಿ ಮತ್ತು ಸೌರಶಕ್ತಿ ವಿದ್ಯುತ್ ಉತ್ಪಾದನಾ ಘಟಕಗಳ ಹಾವಳಿಯಿಂದ ರೈತರು ಹಲವಾರು ಸಂಕಷ್ಟಗಳನ್ನು ಎದುರಿಸುತ್ತಿದ್ದು ಇದನ್ನೆಲ್ಲಾ ನೋಡಿಕೊಂಡು ಆಡಳಿತರೂಢ ಜನಪ್ರತಿನಿಧಿಗಳು ಹಾಗೂ ವಿರೋಧ ಪಕ್ಷದ ಜನಪ್ರತಿನಿಧಿಗಳಿಬ್ಬರು ಜಾಣ ಕುರುಡುತನ ಪ್ರದರ್ಶಿಸುತ್ತಿದ್ದು ಇವರನ್ನು ನಂಬಿಕೊಂಡು ಆಯ್ಕೆ ಮಾಡಿದ ರೈತರ ಮಾತ್ರ ಸಂಕಷ್ಟ ಎದುರಿಸುತ್ತಿದ್ದಾರೆ.

ಅವಳಿ ತಾಲೂಕುಗಳನ್ನು ಒಳಗೊಂಡ ಯಲಬುರ್ಗಾ ವಿಧಾನಸಭಾ ಕ್ಷೇತ್ರದ ಸಾವಿರಾರು ಎಕರೆ ಕೃಷಿ ಜಮೀನಿನಲ್ಲಿ ವಿದ್ಯುತ್ ಉತ್ಪಾದನಾ ಘಟಕ ಅಳವಡಿಸುತ್ತಿದ್ದು ಇದೆಲ್ಲಾ ಗೊತ್ತಿದ್ದರೂ ಸಹ ಏನು ಕ್ರಮ ಕೈಗೊಳ್ಳದ ಜನಪ್ರತಿನಿಧಿಗಳು ಹಾಗೂ ಶಾಸಕರ ಮೇಲೆ ಸಾರ್ವಜನಿಕರಲ್ಲಿ ಹಲವಾರು ಅನುಮಾನ ಮೂಡಲು ಕಾರಣವಾಗಿದೆ ಎಂದು ಮುಖಂಡರಾದ ಎಸ್ ವಿ ಸೋಮರೆಡ್ಡಿ ಹೇಳಿದರು.

ಕ್ಷೇತ್ರದ ಶಾಸಕ ಬಸವರಾಜ ರಾಯರೆಡ್ಡಿ ತಮ್ಮ ಕಾರ್ಯನಿರ್ವಹಿಸುವಲ್ಲಿ ಸಂಪೂರ್ಣವಾಗಿ ವಿಫಲರಾಗಿದ್ದು ರೈತರ ಬಗ್ಗೆ ಕಿಂಚಿತ್ತು ಕಾಳಜಿ ಇಲ್ಲದ ತೋರಿಸುತ್ತಿದ್ದಾರೆ. ಮೊದಲೇ ಕಾರ್ಯಪ್ರವೃತ್ತರಾಗಬೇಕಾಗಿದ್ದ ಶಾಸಕರು ಕೊಳ್ಳೆ ಹೊಡೆದ ಮೇಲೆ ಕೋಟೆ ಬಾಗಿಲು ಹಾಕಿದರು ಎಂಬಂತೆ ಕ್ಷೇತ್ರದಲ್ಲಿ ಸಾವಿರಾರು ಕೃಷಿ ಭೂಮಿಯಲ್ಲಿ ವಿದ್ಯುತ್ ಉತ್ಪಾದನಾ ಘಟಕ ಸ್ಥಾಪನೆಯಾದ ಮೇಲೆ ರೈತರಿಗೆ ಭೂಮಿ ನೀಡಬೇಡಿ ಎಂದು ಪತ್ರ ಬರೆದಿರುವುದು ಯಾವ ಯಾವ ಪ್ರಯೋಜನಕ್ಕಾಗಿ ಎಂದು ಹೇಳುತ್ತಾ ಬಸವರಾಜ ರಾಯರೆಡ್ಡಿ ಅವರಿಗೆ ಚುನಾವಣೆ ನೀಡಿದ



ಚೆನ್ನಾಗಿ ಗೊತ್ತಿದ್ದು ಚುನಾವಣಾ ಹಾಗೂ ಮತ ಸೆಳೆಯುವ ನಿಟ್ಟಿನಲ್ಲಿ ಮಾತ್ರ ಆಲೋಚನೆ ಮಾಡುತ್ತಾರೆ. ಸಾರ್ವಜನಿಕ ಸಭೆ ಸಮಾರಂಭಗಳಲ್ಲಿ ಭ್ರಷ್ಟಾಚಾರ ತುಂಬಿತುಳುಕುತ್ತಿದೆ ಎಂದು ಹೇಳುವ ಶಾಸಕರು ತಾವು ಕ್ಷೇತ್ರದ ಪ್ರತಿನಿಧಿಯಾಗಿ ಭ್ರಷ್ಟಾಚಾರ ನಿಯಂತ್ರಿಸಲು ಯಾವ ಕ್ರಮ ತೆಗೆದು-ಕೊಂಡಿದ್ದಾರೆ ಎಂದು ತಿಳಿಸಲಿ ಆಗ ಅವರ ಮಾತನ್ನು ಒಪ್ಪಿಕೊಳ್ಳಬಹುದು ಅದನ್ನು ಬಿಟ್ಟು ರೈತರ ಮೇಲೆ ಆಗುತ್ತಿರುವ ಅನ್ಯಾಯಕ್ಕೆ ದುನಿಯಾ ಆಗಬೇಕಾದವರು ಕೇವಲ ರಾಜಕಾರಣ ಮಾಡುತ್ತಾ ಹೊರಟಿರೋದು ಕ್ಷೇತ್ರದ ಜನತೆಗೆ ಗೊತ್ತಿರುವ ವಿಷಯವಾಗಿದ್ದು ಮುಂದಿನ ದಿನಗಳಲ್ಲಿ ಅವರಿಗೆ ತಕ್ಕ ಪಾಠ ಕಲಿಸುತ್ತಾರೆ ಎಂದು ಹೇಳಿದರು.

## ಆರ್‌ಎಸ್‌ಎಸ್ ಕಡ್ಡಾಯ ನೋಂದಣಿಗೆ ಆಗ್ರಹಿಸಿ ಪ್ರತಿಭಟನೆ



• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಆರ್‌ಎಸ್‌ಎಸ್ ಸಂಘಟನೆಯ ಕಡ್ಡಾಯ ನೋಂದಣಿ, ಹಣಕಾಸು ಪಾರದರ್ಶಕತೆ ಹಾಗೂ ಕಾನೂನು ಪಾಲನೆಗೆ ಆಗ್ರಹಿಸಿ ಕರ್ನಾಟಕ ರಾಜ್ಯ ಕೋಲಿ ಕಬ್ಬಲಿಗ ಎಸ್‌ಟಿ ಹೋರಾಟ ಸಮಿತಿಯ ರಾಜ್ಯಾಧ್ಯಕ್ಷ ಲಚ್ಚಪ್ಪ ಎಸ್. ಜಮಾದಾರ ಅವರ ನೇತೃತ್ವದಲ್ಲಿ ಗುರುವಾರ ನಗರದ ಎಸ್‌ವಿಪಿ ವೃತ್ತದಿಂದ ಪ್ರತಿಭಟನೆ ನಡೆಸಿ, ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಮನವಿ ಸಲ್ಲಿಸಲಾಯಿತು. ಮನವಿಯಲ್ಲಿ, ಸಾರ್ವಜನಿಕರಿಂದ ದೇಣಿಗೆ ಸ್ವೀಕರಿಸುವ ಎಲ್ಲಾ ಸಂಘ-ಸಂಸ್ಥೆಗಳು, ಟ್ರಸ್ಟ್‌ಗಳು ಹಾಗೂ ಸರ್ಕಾರೇತರ ಸಂಸ್ಥೆಗಳಂತೆ ಆರ್‌ಎಸ್‌ಎಸ್ ಕೂಡ ಕಡ್ಡಾಯವಾಗಿ ನೋಂದಣಿ ಮಾಡಿಕೊಂಡು ಹಣಕಾಸು ಲೆಕ್ಕಪತ್ರಗಳನ್ನು ಪಾರದರ್ಶಕವಾಗಿ ನಿರ್ವಹಿಸಬೇಕು ಎಂದು ಒತ್ತಾಯಿಸಲಾಗಿದೆ. ದೇಶದ ಎಲ್ಲ ಸಂಘಟನೆಗಳಿಗೆ ಒಂದೇ ರೀತಿಯ ನೋಂದಣಿ, ಲೆಕ್ಕಪರಿಶೋಧನೆ ಹಾಗೂ ಹಣಕಾಸು ಬಹಿರಂಗಪಡಿಸುವ ನಿಯಮಗಳನ್ನು ಜಾರಿಗೆ ತರಬೇಕೆಂದು ಆಗ್ರಹಿಸಲಾಗಿದೆ. ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರು ಆರ್‌ಎಸ್‌ಎಸ್ ನೋಂದಣಿ ಕುರಿತು ಕೇಳಿರುವ ಪ್ರಶ್ನೆ ನ್ಯಾಯಸಮ್ಮತವಾಗಿದ್ದು, ಅವರಿಗೆ ಬೆದರಿಕೆ ಹಾಕಿದವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಹಾಗೂ ಅವರ ಭದ್ರತೆಯನ್ನು ಹೆಚ್ಚಿಸಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ. ಪ್ರತಿಭಟನೆಯ ಪ್ರಮುಖ ಬೇಡಿಕೆಗಳಲ್ಲಿ ಆರ್‌ಎಸ್‌ಎಸ್ ಕಡ್ಡಾಯ ನೋಂದಣಿ, ನೋಂದಣಿಯಿಲ್ಲದೆ ಸಂಘಟನೆ ಚಟುವಟಿಕೆ ನಡೆಸದಂತೆ ಕ್ರಮ, ಹಾಗೂ ನೋಂದಣಿ ಮತ್ತು ಹಣಕಾಸು ಪಾರದರ್ಶಕತೆ ಕುರಿತ ನಿಯಮಗಳನ್ನು ಎಲ್ಲ ಸಂಘಟನೆಗಳಿಗೆ ಸಮಾನವಾಗಿ ಅನ್ವಯಿಸುವುದು ಸೇರಿವೆ. ಪ್ರತಿಭಟನೆಯಲ್ಲಿ, ಭೀಮಶಾ ಖನ್ನಾ, ರಾಮಲಿಂಗ ಬಾನರೋ, ಹಣಮಂತ ಸಂಕನೂರ್, ಬಸವರಾಜ ಚಿನಮಳ್ಳಿ, ಮಲ್ಲಿಕಾರ್ಜುನ ಗುಡ್ಡಾ, ಪರಮೇಶ್ವರ ಅಷ್ಟಂದ, ಸತೀಶ ಜಮಾದಾರ, ಉಮೇಶ ಕುರಿಕೋಟ, ಅಭಿಷೇಕ್ ಉಪಾಧ್ಯಾಯ, ವಿಜಯ, ಮಡಿವಾಳಪ್ಪ ಕಟ್ಟಿಮನಿ, ಅರುಣಕುಮಾರ ಇನಾಮದಾರ್, ರಾಮು ಉಮ್ಮರಗಿ, ರಾಣು ಮುದ್ದಣಕರ್, ಅಂಬಾರಾಯ ಜವಳಗಾ ಸೇರಿದಂತೆ ವಿವಿಧ ಸಂಘಟನೆಗಳ ಮುಖಂಡರು ಭಾಗವಹಿಸಿದ್ದರು.

**: C I T A T I O N :**

**IN THE COURT OF THE PRL. CIVIL JUDGE AND JMFC., AT HUMNABAD.**

**CRL. MISC. No.2395/2026.**

**Petitioners:**

1. Chand Sab Jamadar S/o late Kareem Sab, Age: 78-yrs. Occu: Agriculture, R/o Village Dhumansur. Tq. Humnabad. Dist. Bidar.
2. Mohammed Afsar S/o late Kareem Sab, Age: 55-yrs. Occu: Agriculture, R/o Village Dhumansur. Tq. Humnabad. Dist. Bidar.

**Respondent:**

The Registrar of Birth and Death through The Tahasildar Humnabad. Dist. Bidar.

**Sub: Petition U/Sec. 13(3) of Birth and Death Registration Act-1969**

Whereas, the above mentioned petitioner has filed the petition under section 13(3) of Birth and Death Registration Act-1969 praying this Honorable Court to issue Death Certificate of Father of petitioner NO.1 and 2 by namely LATE. KAREEMSAB S/O HUSSAIN SAB, he was died on 10.08.1992 at Village Dhumansur. Tq. Humnabad, Dist. Bidar. The petitioner claiming the Death Certificate of said for transfer of property and other official purpose and home record.

Therefore, it is hereby proclaimed that if any persons have got any objection in this regard, may approach to this Court on 10.08.2026 at 11.00 AM in person or any authorized pleader to answer such claim otherwise the matter will be heard and determined in your absence as per law.

Given under my hand and seal of he court, this the 25-06-2026.

//By order of the court//
Chief Ministerial Officer,
Prl. Civil Judge & JMFC Court,
Humnabad.

# ಪ್ರತಿಯೊಬ್ಬ ಅರ್ಹ ನಾಗರಿಕರ ಹೆಸರು ಮತದಾರರ ಪಟ್ಟಿಯಲ್ಲಿ ಇರಲಿ: ಹರ್ಷಾ ಗುತ್ತೇದಾರ

ಆಳಂದ:ಪ್ರಜಾಪ್ರಭುತ್ವದ ಬುನಾದಿಯಾಗಿರುವ ಮತದಾರರ ಪಟ್ಟಿಯನ್ನು ಶುದ್ಧ, ನಿಖರ ಹಾಗೂ ವಿಶ್ವಾಸಾರ್ಹವಾಗಿಡುವ ಉದ್ದೇಶದಿಂದ ಭಾರತ ಚುನಾವಣಾ ಆಯೋಗ ಕೈಗೊಂಡಿರುವ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ನಿಟ್ಟಿನಲ್ಲಿ ನಿಂಬರ್ಗಾ ಗ್ರಾಮದಲ್ಲಿ ಬಿಜೆಪಿ ಮುಖಂಡ ಹರ್ಷಾ ಗುತ್ತೇದಾರ ಅವರ ನೇತೃತ್ವದಲ್ಲಿ ಎಸ್‌ಐಆರ್ ಜಾಗೃತಿ ಅಭಿಯಾನ ನಡೆಯಿತು.

ಗ್ರಾಮದ ವಿವಿಧ ಬೀದಿಗಳಲ್ಲಿ ಕಾರ್ಯಕರ್ತರೊಂದಿಗೆ ಸಂಚರಿಸಿದ ಹರ್ಷಾ ಗುತ್ತೇದಾರ ಅವರು ಮನೆ–ಮನೆಗೆ ಭೇಟಿ ನೀಡಿ ಮತದಾರರಿಗೆ ಎಸ್‌ಐಆರ್ ಪ್ರಕ್ರಿಯೆಯ ಮಹತ್ವವನ್ನು ವಿವರಿಸಿದರು. ಹೊಸ ಮತದಾರರ ನೋಂದಣಿ, ಮೃತರಾದ ಅಥವಾ ಸ್ಥಳಾಂತರಗೊಂಡವರ ಹೆಸರುಗಳ ಪರಿಷ್ಕರಣೆ, ವಿಳಾಸ ಬದಲಾವಣೆ, ಹೆಸರು ಅಥವಾ ಇತರ ವಿವರಗಳ ತಿದ್ದುಪಡಿ ಸೇರಿದಂತೆ ಮತದಾರರ ಪಟ್ಟಿಯನ್ನು ನವೀಕರಿಸಿಕೊಳ್ಳುವ ಕುರಿತು ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, "ಪ್ರಜಾಪ್ರಭುತ್ವದಲ್ಲಿ ಪ್ರತಿಯೊಂದು ಮತಕ್ಕೂ ಅಪಾರ ಮೌಲ್ಯವಿದೆ. ಆದ್ದರಿಂದ ಯಾವುದೇ ಅರ್ಹ ನಾಗರಿಕರ ಹೆಸರು ಮತದಾರರ ಪಟ್ಟಿಯಿಂದ ಹೊರಗುಳಿಯಬಾರದು. ಅದೇ ವೇಳೆ ಅನರ್ಹ ವ್ಯಕ್ತಿಗಳ ಹೆಸರು ಪಟ್ಟಿಯಲ್ಲಿ ಸೇರದಂತೆ ಎಲ್ಲರೂ ಜಾಗರೂಕರಾಗಬೇಕು. ಚುನಾವಣಾ ಆಯೋಗದ ಎಸ್‌ಐಆರ್ ಪ್ರಕ್ರಿಯೆಗೆ ಸಾರ್ವಜನಿಕರು ಸಂಪೂರ್ಣ



ಸಹಕಾರ ನೀಡುವುದು ಪ್ರತಿಯೊಬ್ಬ ನಾಗರಿಕನ ಜವಾಬ್ದಾರಿಯಾಗಿದೆ" ಎಂದು ಹೇಳಿದರು.

ಮತದಾರರ ಪಟ್ಟಿಯ ಪರಿಶೀಲನೆ ಮಾಡುವಾಗ ಕುಟುಂಬದ ಪ್ರತಿಯೊಬ್ಬ ಸದಸ್ಯರ ಹೆಸರು ಸರಿಯಾಗಿದೆಯೇ ಎಂಬುದನ್ನು ಖಚಿತಪಡಿಸಿಕೊಳ್ಳಬೇಕು. ಯಾವುದೇ ಲೋಪದೋಷ ಕಂಡುಬಂದರೆ ನಿಗದಿತ ನಮೂನೆಗಳ ಮೂಲಕ ತಕ್ಷಣವೇ ತಿದ್ದುಪಡಿಗೆ ಅರ್ಜಿ ಸಲ್ಲಿಸಬೇಕು. ಯುವ ಮತದಾರರು ಮೊದಲ ಬಾರಿಗೆ ಮತದಾರರ ಪಟ್ಟಿಗೆ ಸೇರ್ಪಡೆಯಾಗುವ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಅವರು ತಿಳಿಸಿದರು.ಜಾಗೃತಿ ಅಭಿಯಾನದ ವೇಳೆ ಬಿಜೆಪಿ ಕಾರ್ಯಕರ್ತರು ಎಸ್‌ಐಆರ್ ಪ್ರಕ್ರಿಯೆಗೆ ಸಂಬಂಧಿಸಿದ ಮಾಹಿತಿ ಪತ್ರಿಕೆಗಳನ್ನು ವಿತರಿಸಿ, ಮತದಾರರ ಪಟ್ಟಿಯಲ್ಲಿ ಹೆಸರು ಪರಿಶೀಲಿಸುವ ವಿಧಾನ, ಅಗತ್ಯ ದಾಖಲೆಗಳು ಹಾಗೂ ಅರ್ಜಿ ಸಲ್ಲಿಸುವ ಕ್ರಮದ ಕುರಿತು ಸಾರ್ವಜನಿಕರಿಗೆ ಮಾಹಿತಿ ನೀಡಿದರು. ಗ್ರಾಮಸ್ಥರು ಕೇಳಿದ ಪ್ರಶ್ನೆಗಳಿಗೆ ಕಾರ್ಯಕರ್ತರು ಹಾಗೂ ಮುಖಂಡರು ಸಮಗ್ರವಾಗಿ ಉತ್ತರಿಸಿದರು.ಗ್ರಾಮದ ಹಿರಿಯರು, ಮಹಿಳೆಯರು ಹಾಗೂ ಯುವಕರು ಅಭಿಯಾನದಲ್ಲಿ ಉತ್ಸಾಹದಿಂದ ಪಾಲ್ಗೊಂಡು ಮತದಾರರ ಪಟ್ಟಿಯ ಪರಿಷ್ಕರಣೆಯ ಮಹತ್ವವನ್ನು ತಿಳಿದುಕೊಂಡರು. ಶುದ್ಧ ಮತದಾರರ ಪಟ್ಟಿಯೇ ನ್ಯಾಯಸಮ್ಮತ ಹಾಗೂ ಪಾರದರ್ಶಕ ಚುನಾವಣೆಗೆ ಮೂಲಾಧಾರವಾಗಿದ್ದು, ಪ್ರತಿಯೊಬ್ಬ ಅರ್ಹ ಮತದಾರರೂ ಈ ಪ್ರಕ್ರಿಯೆಯಲ್ಲಿ ಭಾಗವಹಿಸಬೇಕು ಎಂದು ಕರೆ ನೀಡಲಾಯಿತು. ನಂತರ ನಿಂಬರ್ಗಾ ಗ್ರಾಮಸ್ಥರು ಹರ್ಷಾ ಎಸ್ ಗುತ್ತೇದಾರ ಅವರಿಗೆ ಸನ್ಮಾನಿಸಿದರು. ಕಾರ್ಯಕ್ರಮದಲ್ಲಿ ಬಿಜೆಪಿ ಮುಖಂಡರು, ಪದಾಧಿಕಾರಿಗಳು, ಕಾರ್ಯಕರ್ತರು ಹಾಗೂ ಗ್ರಾಮಸ್ಥರು ಭಾಗವಹಿಸಿದ್ದರು.

ಈ ಸಂದರ್ಭದಲ್ಲಿ ಬಿಜೆಪಿ ಮುಖಂಡರು ವಿವಿಧ ಮೋರ್ಚಾಗಳ ಪದಾಧಿಕಾರಿಗಳು, ಬೂತ್ ಅಧ್ಯಕ್ಷರು, ಶಕ್ತಿ ಕೇಂದ್ರದ ಪ್ರಮುಖರು, ಯುವ ಕಾರ್ಯಕರ್ತರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದು, ಎಸ್‌ಐಆರ್ ಜಾಗೃತಿ ಅಭಿಯಾನಕ್ಕೆ ಬೆಂಬಲ ವ್ಯಕ್ತಪಡಿಸಿದರು.

# ಕಮಲನಗರದಲ್ಲಿ ಡಿವೈಎಸ್‌ಪಿ ಬಲ್ಲಪ್ಪ ನಂದಗಾಂವ್ ಭೇಟಿ: ಸಿಸಿಟಿವಿ ಪರಿಶೀಲನೆ, ಸಾರ್ವಜನಿಕರಿಗೆ ಜಾಗೃತಿ

• ಮಲ್ಲಮ್ಮ ನುಡಿ ವಾರ್ತೆ ಕಮಲನಗರ

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳÀ(SP)ಸೂಚನೆ ಮೇರೆಗೆ ಭಾಲ್ಕಿ ಉಪವಿಭಾಗದ ಡಿವೈಎಸ್‌ಪಿ ಬಲ್ಲಪ್ಪ ನಂದಗಾಂವ್ ಅವರು ಗುರುವಾರ ಕಮಲನಗರ ಪಟ್ಟಣಕ್ಕೆ ಭೇಟಿ ನೀಡಿ, ಅಪರಾಧ ತಡೆ ಹಾಗೂ ಮುಂದಿನ ತನಿಖೆಗಳಿಗೆ ಸಹಕಾರಿಯಾಗುವ ನಿಟ್ಟಿನಲ್ಲಿ ನಗರದ ವಿವಿಧೆಡೆ ಅಳವಡಿಸಲಾಗಿರುವ ಸಿಸಿಟಿವಿ ಕ್ಯಾಮೆರಾಗಳ ಕಾರ್ಯಕ್ಷಮತೆಯನ್ನು ಖುದ್ದಾಗಿ ಪರಿಶೀಲಿಸಿದರು.ಮಳೆಗಾಲದ ಹಿನ್ನೆಲೆಯಲ್ಲಿ ಹಾಗೂ ಕಳ್ಳತನ ಪ್ರಕರಣಗಳಿಗೆ ಬ್ರೇಕ್ ಹಾಕಲು ಸಾರ್ವಜನಿಕರು ಮತ್ತು ವ್ಯಾಪಾರಸ್ಥರು ಕೈಗೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳ ಬಗ್ಗೆ ಅವರು ಇದೇ ವೇಳೆ ಮಹತ್ವದ ಮಾರ್ಗದರ್ಶನ ನೀಡಿದರು. ಡಿವೈಎಸ್‌ಪಿ ನೀಡಿದ ಪ್ರಮುಖ ಸಲಹೆಗಳು *ಸಿಸಿಟಿವಿ ಕಡ್ಡಾಯ ಪರಿಶೀಲನೆ:*

ಮಳೆಗಾಲ ಇರುವುದರಿಂದ ಹೊರಗಡೆ ಅಳವಡಿಸಲಾಗಿರುವ ಸಿಸಿಟಿವಿ ಕ್ಯಾಮೆರಾಗಳು ಸರಿಯಾಗಿ ಕೆಲಸ ಮಾಡುತ್ತಿವೆಯೇ ಇಲ್ಲವೇ



ಎಂಬುದನ್ನು ಅಂಗಡಿ ಮಾಲೀಕರು ಮತ್ತು ಸಾರ್ವಜನಿಕರು ತಕ್ಷಣ ಪರಿಶೀಲಿಸಿಕೊಳ್ಳಬೇಕು.

*30 ದಿನಗಳ ಸ್ಟೋರೇಜ್ ಕಡ್ಡಾಯ:*ಅಪರಾಧಗಳ ಪತ್ತೆ ಹಾಗೂ ತನಿಖೆಯ ದೃಷ್ಟಿಯಿಂದ ಕನಿಷ್ಠ 30 ದಿನಗಳ ಬ್ಯಾಕಪ್ (Storage)ಸಂಗ್ರಹವಿರುವಂತೆ ಡಿವಿಆರ್ ವ್ಯವಸ್ಥೆಯನ್ನು ಕಾಪಾಡಿಕೊಳ್ಳಬೇಕು.

*ಕಳ್ಳತನದ ಮುಂಜಾಗ್ರತೆ:*

ಸಾರ್ವಜನಿಕರು ತಮ್ಮ ಮನೆ, ಅಂಗಡಿ–ಮುಂಗಟ್ಟುಗಳ ಸುರಕ್ಷತೆಗೆ ಆದ್ಯತೆ ನೀಡಬೇಕು. ರಾತ್ರಿ ವೇಳೆ ಕಡ್ಡಾಯವಾಗಿ ಸೂಕ್ತ ಬೆಳಕಿನ ವ್ಯವಸ್ಥೆ ಹಾಗೂ ಸಿಸಿಟಿವಿಗಳನ್ನು ಆನ್‌ನಲ್ಲಿಡಬೇಕು.

ಯಾವುದೇ ಸಂಶಯಾಸ್ಪದ ವ್ಯಕ್ತಿಗಳು ಅಥವಾ ಚಟುವಟಿಕೆಗಳು ಕಂಡುಬಂದಲ್ಲಿ ತಕ್ಷಣವೇ ಪೊಲೀಸ್ ಇಲಾಖೆಗೆ ಮಾಹಿತಿ ನೀಡುವಂತೆ ಡಿವೈಎಸ್‌ಪಿ ಬಲ್ಲಪ್ಪ ನಂದಗಾಂವ್ ಅವರು ಜನರಲ್ಲಿ ಮನವಿ ಮಾಡಿದ್ದಾರೆ.ಬ್ಯಾಂಕ್ ಮತ್ತು ಬಂಗಾರದ ಅಂಗಡಿಗಳಿಗೆ ಭೇಟಿ ನೀಡಿ ಅಲಖಿಗಿ ಮತ್ತು ಸೆಕ್ಯೂರಿಟಿ ಗಾರ್ಡ ಕುರಿತು ಭೇಟಿ ಮಾಡಿ ಕಡ್ಡಾಯವಾಗಿ ವ್ಯವಸ್ಥೆ ಮಾಡುವ ಬಗ್ಗೆ ನೋಟಿಸ್ ನಿಡಲಾಯಿತು.

ಈ ಸಂದರ್ಭದಲ್ಲಿ ಕಮಲನಗರ ಸಿ.ಪಿ.ಐ ಶ್ರೀಕಾಂತ ಅಲ್ಲಾಪುರ, ಪೊಲೀಸ ಸಿಬ್ಬಂದಿ ಮಹಾದೇವ ಬಿರಾದಾರ, ನರೇಶ್ ಸೇರಿದಂತೆ ಅಂಗಡಿ ಮಾಲೀಕರು, ಸಾರ್ವಜನಿಕರು ಇದ್ದರು.

## ಎಸ್‌ಡಿಎಂಸಿ ಅಧ್ಯಕ್ಷರಾಗಿ ಪಲ್ಲವಿ ಆಯ್ಕೆ

• ಮಲ್ಲಮ್ಮ ನುಡಿ ವಾರ್ತೆ ಹುಣಸೂರು




ನಗರದ ಹೃದಯ ಭಾಗದಲ್ಲಿರುವ 11ನೇ ವಾರ್ಡಿನ ಹೆಚ್ ಪಿ ಬಿ ಎಸ್ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಎಸ್ ಡಿ ಎಂ ಸಿ ಅಧ್ಯಕ್ಷರು ಶುಭ ತೆರವು ಸ್ಥಾನಕ್ಕೆ ನೂತನವಾಗಿ ಅಧ್ಯಕ್ಷರ ಎಸ್ ಡಿ ಎಂ ಸಿ ಅಧ್ಯಕ್ಷರಾಗಿ ಪಲ್ಲವಿ ಚುನಾವಣೆಯ ಮೂಲಕ ಆಯ್ಕೆ ಆಗಿದ್ದಾರೆ ಎಂದು ಎಸ್‌ಡಿಎಂಸಿಯ ಕಾರ್ಯದರ್ಶಿ ಹಾಗೂ ಶಾಲೆಯ ಮುಖ್ಯ ಶಿಕ್ಷಕರಾದ ಸುರೇಶ್ ತಿಳಿಸಿದ್ದಾರೆನಂತರ ಶಾಲೆಯ ಮುಖ್ಯ ಶಿಕ್ಷಕರಾದ ಸುರೇಶ್ ರವರು ಸುದ್ದಿಗಾರರೊಂದಿಗೆ ಮಾತನಾಡಿ ಇಂದು ನಡೆದ ಚುನಾವಣೆಯಲ್ಲಿ ಅಧ್ಯಕ್ಷರ ತೆರವು ಸ್ಥಾನಕ್ಕೆ ಅಧ್ಯಕ್ಷ ಸ್ಥಾನ ತುಂಬಲು ಇಂದು ನಡೆದ ಚುನಾವಣೆಯ ಎಸ್ ಡಿ ಎಂ ಸಿ ಯ ಸದಸ್ಯರ ಬೆಂಬಲದಿಂದ ಅಧ್ಯಕ್ಷ ಸ್ಥಾನಕ್ಕೆ ಪಲ್ಲವಿ ರವರ ಆಯ್ಕೆಆಗಿದ್ದಾರೆ ಹಾಗೂ

ಎಸ್ ಡಿ ಎಂ ಸಿ ಅಧ್ಯಕ್ಷ ಸ್ಥಾನ ಮೂರ್ ಅಭ್ಯರ್ಥಿ ಸ್ಪರ್ಧಿಸಿದರು ಅದರಲ್ಲಿ ಚುನಾವಣೆ ಮುಖಾಂತರ ಎಸ್ ಡಿ ಎಂ ಸಿ ಸದಸ್ಯರ ಬೆಂಬಲದಿಂದ ಪಲ್ಲವಿ ಅವರನ್ನು ಅಧ್ಯಕ್ಷರಾಗಿ ಆಯ್ಕೆಯಾಗಿದ್ದಾರೆ ಎಂದು ತಿಳಿಸಿದ್ದಾರೆ

ನಂತರ ನೂತನ ಅಧ್ಯಕ್ಷರಾಗಿ ಪಲ್ಲವಿ ಮಾತನಾಡಿ ನನಗೆ ಸದಸ್ಯರ ಬೆಂಬಲದಿಂದ ನನ್ನನ್ನು ಸೂಚಿಸಿರುವ ಆಯ್ಕೆಯಾಗಿರುವುದು ಬಹಳ ಸಂತೋಷದ ವಿಷಯ ಹಾಗೂ ಶಾಲೆಯ ಅಭಿವೃದ್ಧಿ ಬಗ್ಗೆ ಸಮಸ್ಯೆಗಳು ಇರುವುದರಿಂದ ಸಂಪೂರ್ಣವಾಗಿ ಸದಸ್ಯರು ಹಾಗೂ ಶಿಕ್ಷಕರಿಂದ ಮಾರ್ಗದರ್ಶನದಲ್ಲಿ ಪಡೆದು ಅವರ ಸಂಪೂರ್ಣ ಸಹಕರಿಸುತ್ತೇನೆ ಎಂದು ತಿಳಿಸಿದರು

ಈ ಚುನಾವಣೆಯನ್ನು ಉಸ್ತುವಾರಿ ವಹಿಸಿಕೊಂಡ ಸಂಪೂರ್ಣವಾಗಿ ಡಾ ಸಾಹಿತಿ ಮಾಧು ಪ್ರಸಾದ್ ನರಸಿಂಹಯ್ಯ ನಡೆಸಿಕೊಟ್ಟಿದ್ದಾರೆ ಹಾಗೂ ಶಾಲೆಯ ಶಿಕ್ಷಕರು ಮತ್ತು ಎಸ್ ಡಿ ಎಂ ಸಿ ಸದಸ್ಯರು ಹಾಜರಿದ್ದರು

# ಕಲ್ಲುಗಳಿಗೆ ಮೂರ್ತಿ ರೂಪ ನೀಡುವ : ಶಂಕರ ಪವಾರ





> ಶಿಲ್ಪಕಲೆಯು ಕೇವಲ ಕಲ್ಲನ್ನು ಕೆತ್ತುವ ಪ್ರಕ್ರಿಯೆಯಲ್ಲ, ಬದಲಾಗಿ ಅದಕ್ಕೊಂದು ಜೀವ ಮತ್ತು ಭಾವನೆಯನ್ನು ತುಂಬುವ ಅದ್ಭುತ ಕಲೆಯಾಗಿದೆ. ಕಲ್ಲಿನ ಪ್ರತಿಮೆಯು ತನ್ನದೇ ಆದ ಭಾಷೆಯನ್ನು ಹೊಂದಿರುತ್ತದೆ ಧಾರ್ಮಿಕ ಹಬ್ಬಗಳು ಸಮೀಪಿಸುವ ದಿನಗಳಲ್ಲಿ ನಾವು ತಯಾರಿಸುವ ಮೂರ್ತಿಗಳು ಹೆಚ್ಚಾಗಿ ಮಾರಾಟ ಆಗುತ್ತವೆ. ಒಂದು ಮೂರ್ತಿ ನಿರ್ಮಿಸಲು ಕನಿಷ್ಠ 20ರಿಂದ 25 ದಿನಗಳು ಬೇಕಾಗುತ್ತವೆ. ತಿಂಗಳಿಗೆ ಸುಮಾರು 20ರಿಂದ 25 ಸಾವಿರ ಗಳಿಸುತ್ತೇವೆ
>
> **ಶಂಕರ ಪವಾರ್ ಶಿಲ್ಪಿ ಕಲೆಗಾರ**

• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ಸಾಮಾನ್ಯರಿಗೆ ಕೇವಲ ಕಲ್ಲಾಗಿ ಕಂಡುಬರುವ ಕಲ್ಲಿನಲ್ಲಿ ಶಿಲ್ಪ ಕಲಾವಿದನಿಗೆ ಮಹಾಪುರುಷರ, ದೇವತೆಗಳ ಮೂರ್ತಿಗಳು ಕಾಣುತ್ತವೆ.

ಇಂತಹ ವಿಶಿಷ್ಟ ಕಲೆಯಲ್ಲಿ ನಿಪುಣರಾಗಿರುವ ತಾಲ್ಲೂಕಿನ ಬ್ಯಾಲಹಳ್ಳಿ(ಕೆ) ಗ್ರಾಮದ ಶಿಲ್ಪಕಲಾವಿದ ಶಂಕರ ಪವಾರ್ ಅವರು ಸುಮಾರು ಎರಡು ದಶಕಗಳಿಂದ ಶಿಲ್ಪಕಲಾ ಕೃತಿಯ ರಚನೆಯಲ್ಲಿ ತೊಡಗಿಸಿಕೊಂಡಿದ್ದು, ನಿರ್ಜೀವ ಕಲ್ಲುಗಳಿಗೆ ತಮ್ಮ ಶಿಲ್ಪಕಲಾ ಕೈಚಳಕದ ಮೂಲಕ ಮೂರ್ತಿಯ ರೂಪ ನೀಡುವುದರ ಮೂಲಕ ಜೀವಕಳೆ ನೀಡುತ್ತಿದ್ದಾರೆ.

ಇವರ ಕುಟುಂಬವು ಸುಮಾರು ಮೂರು ತಲೆಮಾರುಗಳಿಂದ ಶಿಲ್ಪಕಲಾ ಕೃತಿಗಳ ರಚನೆಯಲ್ಲಿ ತೊಡಗಿಸಿಕೊಂಡಿದ್ದು, ಜಿಲ್ಲೆಯಾದ್ಯಂತ ಶಿಲ್ಪಕಲೆಗೆ ಹೆಸರುವಾಸಿಯಾಗಿದ್ದಾರೆ.

ನಮ್ಮ ಅನೇಕ ತಿಂಗಳುಗಳ ಪರಿಶ್ರಮ ಮತ್ತು ಕೈಚಳಕದ ಫಲವಾಗಿ ಮೂರ್ತಿಗೆ ಅನುಗುಣವಾಗಿ ಕೆತ್ತನೆ ಮಾಡಬೇಕಾದಸೂಕ್ಷ್ಮವಾದ ಆಭರಣಗಳು, ಮುಖದ ಭಾವನೆಗಳಾದ ಕೋಪ, ನಗು, ಶಾಂತಿ ಮತ್ತು ಭಂಗಿಗಳನ್ನು ಕಲ್ಲಿನಲ್ಲಿ ಮೂರ್ತ ರೂಪ ಪಡೆದುಕೊಳ್ಳುತ್ತವೆ. ನಮ್ಮ ಇಡೀ ಕುಟುಂಬವು ಶಿಲ್ಪಕಲಾ ಕೃತಿಗಳ ಕೆತ್ತನೆಯಲ್ಲಿ ತೊಡಗಿಸಿಕೊಂಡಿದೆ. ನಾವು ಶಿಲ್ಪ ಕಲೆಗಾಗಿ ಕಲಬುರಗಿಯ ಕರಿ ಕಲ್ಲು, ಬಾಗಲಕೋಟೆಯ ಕಲ್ಲು ಬಳಸುತ್ತೇವೆ. ನಂದಿ ವಿಗ್ರಹ, ಶಿವಲಿಂಗ, ತುಳಜಾಭವಾನಿ, ಭಾಗ್ಯವಂತಿ ದೇವಿ, ಬಸವಣ್ಣ, ಅಕ್ಕಮಹಾದೇವಿ, ಅಂಬಿಗರ ಚೌಡಯ್ಯ, ಅಂಬೇಡ್ಕರ್, ಗೌತಮ ಬುದ್ಧ, ಆಂಜನೇಯ, ವೀರಭದ್ರೇಶ್ವರ ಮಾಳಿಂಗರಾಯ ಸೇರಿದಂತೆ ವಿವಿಧ ದೇವರುಗಳ ಮೂರ್ತಿಗಳನ್ನು ನಿರ್ಮಿಸುತ್ತೇವೆ' ಎಂದು ತಿಳಿಸಿದರು.

ನಮ್ಮಲ್ಲಿ ನಂದಿ, ಶಿವಲಿಂಗ, ಶಿವಲಿಂಗದ ಮೇಲೆ ತಲೆಯೆತ್ತಿರುವ ನಾಗರ ಹೆಡೆಗಳ ಮೂರ್ತಿಗಳಿಗೆ ಹೆಚ್ಚಿನ ಬೇಡಿಕೆ ಬರುತ್ತದೆ. ಹನುಮಾನ ಜಯಂತಿ, ದಸರಾ, ಬಸವ ಜಯಂತಿ, ದೀಪಾವಳಿ ಸೇರಿದಂತೆ ಧಾರ್ಮಿಕ ಹಬ್ಬಗಳು ಸಮೀಪಿಸುವ ದಿನಗಳಲ್ಲಿ ನಾವು ತಯಾರಿಸುವ ಮೂರ್ತಿಗಳು ಹೆಚ್ಚಾಗಿ ಮಾರಾಟ ಆಗುತ್ತವೆ. ಒಂದು ಮೂರ್ತಿ ನಿರ್ಮಿಸಲು ಕನಿಷ್ಠ 20ರಿಂದ 25 ದಿನಗಳು ಬೇಕಾಗುತ್ತವೆ. ತಿಂಗಳಿಗೆ ಸುಮಾರು 20ರಿಂದ 25 ಸಾವಿರ ಗಳಿಸುತ್ತೇವೆ' ಎಂದು ವಿವರಿಸಿದರು.

'ಶಿಲ್ಪಕಲಾ ಕೆತ್ತನೆಯಲ್ಲಿ ಹೆಚ್ಚಿನ ಲಾಭ ಸಿಗುವುದಿಲ್ಲ. ಆದರೂ ಬೇರೆಯವರ ಬಳಿ ಕೆಲಸ ಮಾಡುವುದಕ್ಕಿಂತ ಸ್ವಂತ ಉದ್ಯೋಗ ಮಾಡುವುದು ಒಳಿತು ಎಂದು. ನಮ್ಮ ಹಿರಿಯರು ಮಾಡಿಕೊಂಡು ಬಂದ ಶಿಲ್ಪಕಲಾ ಕಾರ್ಯವನ್ನು ಮುಂದುವರೆಸಿಕೊಂಡು ಹೋಗುತ್ತಿದ್ದೇವೆ'

# ಕರ ವಸೂಲಾತಿ ಪ್ರಗತಿ ಪರಿಶೀಲನಾ ಸಭೆ: ನಿರ್ಲಕ್ಷ್ಯ ತೋರಿದರೆ ಕಠಿಣ ಕ್ರಮ

• ಮಲ್ಲಮ್ಮ ನುಡಿ ವಾರ್ತೆ ಕಮಲನಗರ

:ತಾಲೂಕಿನ ಪಂಚಾಯತ ಸಭಾಂಗಣದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯಯೋಜನಾಧಿಕಾರಿಗಳು ಹಾಗೂ ಕಮಲನಗರ ತಾಲೂಕಿನಲ್ಲಿ ಕರ ವಸೂಲಾತಿ ಅಭಿಯಾನದ ನೋಡಲ್ ಅಧಿಕಾರಿಗಳಾದ ಶ್ರೀ ಕಿಶೋರ್ ಕುಮಾರ್ ದುಬೆ ಅವರ ಅಧ್ಯಕ್ಷತೆಯಲ್ಲಿ ತಾಲ್ಲೂಕಿನ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು (ಪಿಡಿಓ) ಮತ್ತು ಕರ ವಸೂಲಿಗಾರರ ಪ್ರಗತಿ ಪರಿಶೀಲನಾ ಸಭೆಯನ್ನು ನಡೆಸಲಾಯಿತು.

ಸಭೆಯನ್ನುದ್ದೇಶಿಸಿ ಮಾತನಾಡಿದ ಮುಖ್ಯಯೋಜನಾಧಿಕಾರಿಗಳು, ಕಡಿಮೆ ಪ್ರಗತಿ ಸಾಧಿಸಿರುವ ಗ್ರಾಮ ಪಂಚಾಯತಿಗಳು ಶೀಘ್ರವಾಗಿ ಹೆಚ್ಚಿನ ಪ್ರಗತಿ ಸಾಧಿಸಬೇಕು ಎಂದು ಕಟ್ಟುನಿಟ್ಟಿನ ಸೂಚನೆ ನೀಡಿದರು. "ಗ್ರಾಮಗಳಲ್ಲಿ ಬೀದಿದೀಪ, ರಸ್ತೆ ಹಾಗೂ ಚರಂಡಿ ಸೇರಿದಂತೆ ಅಗತ್ಯ ಮೂಲಸೌಕರ್ಯಗಳು ನಿರಂತರವಾಗಿ ಸಿಗಬೇಕಾದರೆ ಸಾರ್ವಜನಿಕರು ಸಕಾಲಕ್ಕೆ ತೆರಿಗೆ ಪಾವತಿಸಬೇಕು.

ಅಧಿಕಾರಿಗಳು ಹಾಗೂ ಸಿಬ್ಬಂದಿ ಮನೆ ಮನೆಗೆ ಭೇಟಿ ನೀಡಿ ಜನರಿಗೆ ಈ ಬಗ್ಗೆ ಮನವರಿಕೆ ಮಾಡಿಕೊಟ್ಟು, ಕರವಸೂಲಾತಿಯಲ್ಲಿ ಸಾರ್ವಜನಿಕರು ಸಹಕರಿಸುವಂತೆ ನೋಡಿಕೊಳ್ಳಬೇಕು. ಬಿಲ್ ಕಲೆಕ್ಟರ್ ಇಲ್ಲದ ಕಡೆಗಳಲ್ಲಿ ವಾಟರ್ ಮನ್‌ಗಳ ಸಹಾಯ ಪಡೆದು ತೆರಿಗೆ ವಸೂಲಿ ಮಾಡಬೇಕು" ಎಂದು ನಿರ್ದೇಶನ ನೀಡಿದರು.



ಸರ್ಪ್ರೈಸ್ ವಿಸಿಟ್ ಎಚ್ಚರಿಕೆ:

"ಗ್ರಾಮ ಪಂಚಾಯತಿಗಳಿಗೆ ನಾನು ದಿಢೀರ್ ಭೇಟಿ ನೀಡಿದಾಗ ತೆರಿಗೆ ವಸೂಲಾತಿಯಲ್ಲಿ ಯಾವುದೇ ಅವ್ಯವಸ್ಥೆ ಕಂಡುಬಂದಲ್ಲಿ, ನೇರವಾಗಿ ಜನರನ್ನು ಕರೆಸಿ ಮಾತುಕತೆ ನಡೆಸಲಾಗುವುದು. ಪ್ರತಿದಿನ ಇಂತಿಷ್ಟೇ ಕರ ವಸೂಲಿ ಮಾಡಬೇಕು ಎಂಬ ಗುರಿ (ಟಾರ್ಗೆಟ್) ಇಟ್ಟುಕೊಂಡು ಕೆಲಸ ಮಾಡಿ. ನಿಗದಿತ ದಿನದಂದು ಗುರಿ ತಲುಪಲು ಸಾಧ್ಯವಾಗದಿದ್ದರೆ, ಮಾರನೇ ದಿನ ಹೆಚ್ಚಿನ ಶ್ರಮವಹಿಸಿ ಅದನ್ನು ಪೂರ್ಣಗೊಳಿಸಬೇಕು.

ಕರ ವಸೂಲಾತಿಯಲ್ಲಿ ನಿರ್ಲಕ್ಷ್ಯ ತೋರುವ ಸಿಬ್ಬಂದಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು" ಎಂದು ಅಧಿಕಾರಿಗಳು ಎಚ್ಚರಿಸಿದರು. ಕಡಿಮೆ ಪ್ರಗತಿ ಇರುವ ಪಂಚಾಯತಿಗಳ ಪಿಡಿಓ ಹಾಗೂ ಬಿಲ್ ಕಲೆಕ್ಟರ್‌ಗಳು ವೈಯಕ್ತಿಕ ಕಾಳಜಿ ವಹಿಸಿ ಪ್ರಗತಿ ತರಲು ತಿಳಿಸಿದರು.

ಈ ಸಂದರ್ಭದಲ್ಲಿ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳಾದ ಹಣಮಂತರಾಯ ಕೌಟಗೆ, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರಾದ ಸುನೀಲ, ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಾದ ಮಲ್ಲೇಶ, ಮನೋಹರ, ಸಂಧ್ಯಾರಾಣಿ, ಮಹಾದೇವ ರಾಮದಾಸ, ರಂಗಾಚಾರ್ಯ, ಪ್ರಶಾಂತ, ವೆಂಕಟೇಶ ಹಾಗೂ ವಿವಿಧ ಪಂಚಾಯತಿಗಳ ಕಾರ್ಯದರ್ಶಿಗಳು, ಬಿಲ್ ಕಲೆಕ್ಟರ್‌ಗಳು ಉಪಸ್ಥಿತರಿದ್ದರು. ತಾ.ಪಂ. ಸಿಬ್ಬಂದಿಗಳಾದ ಸೋಮಶೇಖರ, ಗಣೇಶ, ಸ್ವಪ್ನಾ, ಆದಿತ್ಯ ಸೇರಿದಂತೆ ಇತರರು ಭಾಗವಹಿಸಿದ್ದರು.

# ಗುಡ್ಡದ ದೇವರು ಶಿಲಾ ಸ್ಮಾರಕ ಸಂರಕ್ಷಣೆಗೆ ಮುಂದಾದ ಹಿಂದೂ ಯುವ ಘರ್ಜನೆ ಸಮಿತಿ

• ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್



ಜೂನ್ 9: ಪಟ್ಟಣದ ಬಸ್ ನಿಲ್ದಾಣದಿಂದ ಕಾಕಲವಾರ್ ರಸ್ತೆಗೆ ಹೊಂದಿಕೊಂಡಿರುವ ಐತಿಹಾಸಿಕ ಗುಡ್ಡದ ದೇವರು ಶಿಲಾ ಸ್ಮಾರಕದ ಸಂರಕ್ಷಣೆಗಾಗಿ ಹಿಂದೂ ಯುವ ಘರ್ಜನೆ ಸಮಿತಿ ಯುವಕರ ತಂಡ ಮಹತ್ವದ ಹೆಜ್ಜೆ ಇಟ್ಟಿದೆ.ಸ್ಮಾರಕದ ಸುತ್ತ ಶಾಶ್ವತ ಕಟ್ಟೆ ನಿರ್ಮಿಸಿ ಸಂರಕ್ಷಿಸುವ ನಿರ್ಮಾಣ ಕಾರ್ಯಕ್ಕೆ ಮುಂದಾಗಿದ್ದು, ನಿರ್ಮಾಣ ಹಂತ ಕೊನೆಯ ಹಂತದಲ್ಲಿದೆ ಎಂದು ಹಿಂದೂ ಯುವ ಘರ್ಜನೆ ಅಧ್ಯಕ್ಷ ವೆಂಕಟೇಶ್ ಮುದಿರಾಜ್ ತಿಳಿಸಿದ್ದಾರೆ.ಈ ಐತಿಹಾಸಿಕ ಶಿಲಾ ಸ್ಮಾರಕವು ನಮ್ಮ ನಾಡಿನ ಸಂಸ್ಕೃತಿ, ಪರಂಪರೆ ಹಾಗೂ ಇತಿಹಾಸದ ಅಮೂಲ್ಯ ಸಂಕೇತವಾಗಿದ್ದು, ಇದರ ಸಂರಕ್ಷಣೆ ಪ್ರತಿಯೊಬ್ಬ ನಾಗರಿಕನ ಜವಾಬ್ದಾರಿಯಾಗಿದೆ. ನಿರ್ಮಾಣ ಹಂತ ಮುಗಿದ ಮೇಲೆ ಅಕ್ಕಮಹಾದೇವಿ ಸ್ಮಾರಕ ಸೇರಿದಂತೆ ಉಳಿದ ಸ್ಮರಕಗಳಿಗೆ ಕಟ್ಟೆ ನಿರ್ಮಾಣ ಸ್ಥಳೀಯರ ಸಹಕಾರದೊಂದಿಗೆ ಮಾಡಲಾಗುವುದು ಎಂದು ಹೇಳಿದರು. ಈ ಸಂದರ್ಭದಲ್ಲಿ ಹಿಂದೂ ಯುವ ಘರ್ಜನೆ ಸಮಿತಿ ಕಾರ್ಯಕರ್ತರು ಜೊತೆಗಿದ್ದರು.

# ಮಾಕಾಪೂರು ಆಸ್ಪತ್ರೆಗೆ NQAS ತಂಡ ಭೇಟಿ



• ಮಲ್ಲಮ್ಮ ನುಡಿ ವಾರ್ತೆಮುದಗಲ್

NQASತಂಡ (ರಾಷ್ಟ್ರೀಯ ಗುಣಮಟ್ಟ ಭರವಸೆ ಮಾನದಂಡಗಳು) ಮಂಗಳವಾರ ಪಟ್ಟಣ ಸಮೀಪದ ಮಾಕಾಪೂರು ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರದ ಉಪ ಕೇಂದ್ರಕ್ಕೆ ಭೇಟಿ ನೀಡಿ ಪರಿಶೀಲಿಸಿದರು.

ಅಧಿಕಾರಿ ಡಾ : ದೌವಲಸಾಬ ಆಸ್ಪತ್ರೆಗಳಲ್ಲಿ ರೋಗಿಗಳಿಗೆ ಸಿಗುವ ಚಿಕಿತ್ಸೆ ಮತ್ತು ಸೌಲಭ್ಯಗಳ ಗುಣಮಟ್ಟವನ್ನು ಮೌಲ್ಯಮಾಪನ ಮಾಡಿ ಹಾಗೂ ಮೂಲಸೌಕರ್ಯ, ವೈದ್ಯಕೀಯ ಸೇವೆಗಳು, ಸೋಂಕು ನಿಯಂತ್ರಣ ಹಾಗೂ ರೋಗಿಗಳ ಹಕ್ಕುಗಳ ಪರಿಶೀಲನೆ ಮಾಡಿದರು.

ಡಾ! ಲಕ್ಷ್ಮಿಕಾಂತ, ಆರೋಗ್ಯ ಇಲಾಖೆ ಸಿಬ್ಬಂದಿ ದೀಪಾ, ಮಹೇಶ್ವರಿ, ಲಿಂಗರಾಜ ವಿಶ್ವಕರ್ಮ, ಸಮುದಾಯ ಆರೋಗ್ಯ ಅಧಿಕಾರಿ ಲೋಕೇಶ ದೇಸಾಯಿಭೋಗಾಪೂರು, ರವಿರಾಜ ನಾಗಲಾಪೂರು ಸೇರಿದಂತೆ ಇತರರಿದ್ದರು.

# ವಿದ್ಯಾರ್ಥಿಗಳಿಗೆ 18 ವರ್ಷದ ನಂತರದ ಲೈಸೆನ್ಸ್ ಪಡೆದು ವಾಹನ ಚಲಾಯಿಸಲು ವಿಜಯಕುಮಾರ್ ಸಲಹೆ

• ಮಲ್ಲಮ್ಮ ನುಡಿ ವಾರ್ತೆಬಸವಕಲ್ಯಾಣ

ರಸ್ತೆಯ ಮೇಲೆ ಬರುವಾಗ ಎಲ್ಲ ವಿದ್ಯಾರ್ಥಿಗಳು ಏಡಬದಿಯಿಂದ ನಡೆದುಕೊಂಡು ಬರಬೇಕು. ಈ ಮೂಲಕ ಸಂಚಾರ ನಿಯಮಗಳ ಪಾಲನೆ ಮಾಡಬೇಕು ಎಂದು ಬಸವಕಲ್ಯಾಣದ ಮೋಟಾರು ವಾಹನ ನಿರೀಕ್ಷಕರಾದ ವಿಜಯಕುಮಾರ ಉಮರ್ಗೆ ಅವರು ನುಡಿದರು.

ಜುಲೈ 8ರಂದು ಹುಲಸೂರು ಪಟ್ಟಣದಲ್ಲಿ ಸಹಾಯಕ ಪ್ರಾದೇಶಿಕ ಸಾರಿಗೆ ಕಚೇರಿ ಬಸವಕಲ್ಯಾಣ ಹಾಗೂ ಇಕಬಾಲ್ ಪಟೇಲ ಪಿ.ಯು.ಕಾಲೇಜ ಹಾಗೂ ಕಾಳೆ ಮೋಟಾರ ವಾಹನ ತರಬೇತಿ ಶಾಲೆಯ ಸಹಯೋಗದಲ್ಲಿ ನಡೆದ ರಸ್ತೆ ಸುರಕ್ಷತಾ ಹಾಗೂ ಸಂಚಾರಿ ಚಿಹ್ನೆಗಳ ಅರಿವು ಕಾರ್ಯಕ್ರಮವನ್ನು ಸಸಿಗೆ ನೀರುಣಿಸುವ ಮೂಲಕ ಉದ್ಘಾಟಿಸಿ ಮಾತನಾಡಿದರು.

ರಸ್ತೆ ಅಪಘಾತದಲ್ಲಿ ಹೆಚ್ಚಿನ ಜನ ಯುವಕರೇ ಬಲಿಯಾಗುತ್ತಿದ್ದಾರೆ. ಎಷ್ಟೋ ಯುವಕರು ಅಂಗವಿಕಲ ಆಗುತ್ತಿದ್ದಾರೆ. ಹಾಗಾಗಿ, ರಸ್ತೆ ಮೇಲೆ ಬರುವಾಗ ಸಂಚಾರಿ ಚಿಹ್ನೆ ನೋಡಿ ವಾಹನ ಚಲಿಸುವ ಹವ್ಯಾಸ ಬೆಳೆಸಿಕೊಳ್ಳಬೇಕು. ಅಪಘಾತವಾದರೆ ತಲೆಗೆ ಪೆಟ್ಟು ಬೀಳುತ್ತದೆ. ಹೀಗಾಗಿ ಯಾರೆ ಆಗಲಿ ಬೈಕ್ ಓಡಿಸುವಾಗ ಕಡ್ಡಾಯವಾಗಿ ಹೆಲ್ಮೇಟ್ ಧರಿಸಬೇಕು ಎಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ವಿದ್ಯಾರ್ಥಿಗಳು 18 ವರ್ಷ ಮುಗಿದ ಬಳಿಕವೆ ಲೈಸೆನ್ಸ್ ಪಡೆದು-ಕೊಂಡು, ವಾಹನ ಚಲಾಯಿಸಬೇಕು. ಲೈಸೆನ್ಸ್ ಇಲ್ಲದೇ ಇದ್ದರೆ ವಾಹನ ಚಲಾಯಿಸಬಾರದು. ಲೈಸೆನ್ಸ್ ಇಲ್ಲದೆ ವಾಹನ ಓಡಿಸಿದರೆ





ಕಾನೂನಿನಡಿ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಹುಲಸೂರು ಪೊಲೀಸ್ ಠಾಣೆಯ ಅಪರಾಧ ವಿಭಾಗದ ಪಿಎಸ್ಐ ಪಂಡಿತ ಸರ್ ಮಾತನಾಡಿ,ವಿದ್ಯಾರ್ಥಿಗಳು ಅತೀ ವೇಗದಲ್ಲಿ ಬೈಕ್ ಓಡಿಸಬಾರದು. ಅಲ್ಲದೆ ಬೈಕ್ ಮೇಲೆ ಇಬ್ಬರಿಗಿಂತ ಹೆಚ್ಚು ಜನರು ಕೂರಬಾರದು ಎಂದು ಸೂಚಿಸಿದರು.

ಇಕಬಾಲ್ ಪಟೇಲ್ ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ಫಯಾಜ ಪಟೇಲ ಮಾತನಾಡಿ, ದ್ವಿಚಕ್ರ ವಾಹನ ನಡೆಸುವಾಗ ಹೆಡ್ ಫೋನ್, ಬ್ಲೂಟೂತ್, ಮೊಬೈಲ್ ಫೋನ್ ಬಳಸಬಾರದು. ರಸ್ತೆಯ ಮೇಲೆ ಬರುವಾಗ ವಾಹನದ ದಾಖಲಾತಿಗಳನ್ನು ಇಟ್ಟುಕೊಂಡಿರಬೇಕು. ವಿದ್ಯಾರ್ಥಿಗಳು ತಮ್ಮ ಮನೆಯಲ್ಲಿರುವ ವಾಹನ ದಾಖಲೆಗಳನ್ನು ಸರಿಯಾದ ಸಮಯಕ್ಕೆ ನವೀಕರಣಗೊಳಿಸಬೇಕು. ಜತೆಗೆ ಕುಟುಂಬದ ಇತರರಿಗೆ ಈ ಕುರಿತು ಮಾಹಿತಿ ನೀಡಬೇಕು ಎಂದರು.

ಹುಲಸೂರು ಕಾಳೆ ಮೋಟಾರು ವಾಹನ ತರಬೇತಿ ಶಾಲೆಯ ಪ್ರಾಚಾರ್ಯ ಪ್ರಾಶಾಂತ ಕಾಳೆ ಮಾತನಾಡಿ, ವಿದ್ಯಾರ್ಥಿಗಳು ಮದುವೆ ಹಾಗೂ ಹುಟ್ಟು ಹಬ್ಬಗಳಿಗೆ ಹೆಲ್ಮೆಟ್ ಉಡುಗೊರೆಯಾಗಿ ನೀಡುವ ಹವ್ಯಾಸ ಬೆಳೆಸಿಕೊಳ್ಳಬೇಕು ಎಂದು ಹೇಳಿದರು.

ಇಕಬಾಲ್ ಪಟೇಲ್ ಶಿಕ್ಷಣ ಸಂಸ್ಥೆಯ ಪ್ರಿನ್ಸಿಪಾಲ ಸಬಿಯಾ ಫಯಾಜ್ ಪಟೇಲ ಹಾಗೂ ಇತರರು ಇದ್ದರು. ಲಕ್ಷ್ಮಣ ಎ. ಸೂರ್ಯವಂಶಿ ನಿರೂಪನೆ ಮಾಡಿದರು. ವಂದಿಸಿದರು. ಕಾರ್ಯಕ್ರಮದಲ್ಲಿ ಕಾಲೇಜಿನ ವಿದ್ಯಾರ್ಥಿಗಳು ಮತ್ತು ಸಿಬ್ಬಂದಿ ಪಾಲ್ಗೊಂಡಿದ್ದರು.

# ಮದಕಟ್ಟಿ ಗ್ರಾಮದಲ್ಲಿ ಎಸ್‌ಆರ್ ಕುರಿತು ಜನಜಾಗೃತಿ



• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ಚುನಾವಣಾ ಆಯೋಗವು ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆ, ತಿದ್ದುಪಡಿ ಮತ್ತು ಅನರ್ಹರ ಹೆಸರುಗಳನ್ನು ಪರಿಷ್ಕರಣೆ ಮಾಡುತ್ತಿದ್ದು, ಸಾರ್ವಜನಿಕರು ಇದರಲ್ಲಿ ಪಾಲ್ಗೊಂಡು ಎಸ್ಐಆರ್ ಅಭಿಯಾನ ಯಶಸ್ವಿಗೊಳಿಸಬೇಕು ಎಂದು ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಸೂರ್ಯಕಾಂತ ಬಿರಾದಾರ ಹೇಳಿದರು.

ತಾಲ್ಲೂಕಿನ ಮದಕಟ್ಟಿ ಗ್ರಾಮದಲ್ಲಿ ಗುರುವಾರ ಮತದಾರರ ಸಮಗ್ರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಕುರಿತು ಆಯೋಜಿಸಿದ್ದ ಜನಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಪ್ಲಾಸ್ಟಿಕಯುಕ್ತ ವಸ್ತುಗಳು ಮಣ್ಣು ಮತ್ತು ಜಲಮೂಲಗಳನ್ನು ಕಲುಷಿತಗೊಳಿಸಿ ಪ್ರಾಣಿಗಳಿಗೆ ಮತ್ತು ಮಾನವನ ಆರೋಗ್ಯಕ್ಕೆ ತೀವ್ರ ಹಾನಿ ಉಂಟು ಮಾಡುತ್ತವೆ.

ಹಾಗಾಗಿ ಪ್ಲಾಸ್ಟಿಕ್ ಬಳಕೆ ನಿಷೇಧಿಸಿ ಪ್ಲಾಸ್ಟಿಕ್ ಮುಕ್ತ ಗ್ರಾಮವನ್ನಾಗಿ ನಿರ್ಮಿಸಲು ಸಾರ್ವಜನಿಕರು ಸಹಕರಿಸಬೇಕು ಎಂದರು.ನರೇಗಾ ಸಹಾಯಕ ನಿರ್ದೇಶಕ ಬಾಲಾಜಿ ಕೋಟೆ ಮಾತನಾಡಿ, ವಿಕಸಿತ ಭಾರತ ಉದ್ಯೋಗ ಖಾತ್ರಿ ಮತ್ತು ಜೀವನೋಪಾಯ ಅಭಿಯಾನ (ಗ್ರಾಮೀಣ) (ವಿಬಿ-ಜಿ ರಾಮ್ ಜಿ) ಈ ಹೊಸ ಯೋಜನೆಯಡಿ 318 ಕಾಮಗಾರಿಗಳು ಇವೆ. ನೋಂದಾಯಿತ ಗ್ರಾಮೀಣ ಕೂಲಿ ಕಾರ್ಮಿಕರಿಗೆ ವರ್ಷದಲ್ಲಿ 125 ದಿನ ಕೂಲಿ ಕೆಲಸ ಹಾಗೂ 382 ರೂಪಾಯಿ ದಿನಗೂಲಿ ನೀಡಲಾಗುತ್ತಿದೆ. ರೈತರು ಹಾಗೂ ಕಾರ್ಮಿಕರು ಇದರ ಲಾಭ ಪಡೆದುಕೊಳ್ಳಬೇಕು ಎಂದರು.ಗ್ರಾಮ ಪಂಚಾಯಿತಿ ಪಿಡಿಒ ಅನುರಾಜ್ ಪೂಜಾರಿ, ಟಿಎಇ ಶ್ರೀಕಾಂತ್ ಪಾಟೀಲ, ಲಿಂಗರಾಜ ಖಂಡಾಳೆ, ಕಾಯಕ ಬಂಧುಗಳಾದ ಮಹಾದೇವ, ರವಿ ಭಾವಿದೊಡ್ಡೆ, ಅಭಿಷೇಕ ಕೊಕಣೆ, ಹರಿಶ್, ವಿಶಾಲ ಸೇರಿದಂತೆ ಇತರರು ಇದ್ದರು.

ನಂತರ ವಿಬಿ ಜಿ ರಾಮ್ ಜಿ ಯೋಜನೆಯ ಹಿರಿಯ ಕೂಲಿ ಕಾರ್ಮಿಕರಿಗೆ ಸನ್ಮಾನಿಸಲಾಯಿತು. ಇದೇ ಸಂದರ್ಭದಲ್ಲಿ ಗ್ರಾಮದ ಹೊರವಲಯದಲ್ಲಿ ಗ್ರಾಮ ವನ ನಿರ್ಮಾಣಕ್ಕಾಗಿ ಕಾರ್ಯನಿರ್ವಾಹಕ ಅಧಿಕಾರಿ ಸ್ಥಳ ಪರಿಶೀಲಿಸಿದರು.

# ರಾಷ್ಟ್ರೀಯ ಓರಲ್ ಹೆಲ್ತ್ ಹಾಗೂ ಹದಿಹರೆಯದವರ ಆರೋಗ್ಯ ಜಾಗೃತಿ

• ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು

ಜು.09.ಸ್ಥಳೀಯ ಸರ್ಕಾರಿ ಪ್ರಥಮ ದರ್ಜೆ ಪದವಿ ಮಹಾವಿದ್ಯಾಲಯದಲ್ಲಿ ತಾಲೂಕು ಸಾರ್ವಜನಿಕ ಆಸ್ಪತ್ರೆ, ತಾಲೂಕು ಆರೋಗ್ಯ ಅಧಿಕಾರಿಗಳ ಕಾರ್ಯಾಲಯ ಹಾಗೂ ಮಹಾವಿದ್ಯಾಲಯದ ಸಂಯುಕ್ತ ಆಶ್ರಯದಲ್ಲಿ 'ರಾಷ್ಟ್ರೀಯ ಓರಲ್ ಹೆಲ್ತ್'ದಂತ ಆರೋಗ್ಯ ಕಾರ್ಯಕ್ರಮ, ರಾಷ್ಟ್ರೀಯ ಕಿಶೋರ್ ಸ್ವಾಸ್ಥ್ಯ ಕಾರ್ಯಕ್ರಮದಡಿ ಹದಿಹರೆಯದವರ ಆರೋಗ್ಯ ಮತ್ತು ಕ್ಷೇಮ ದಿನಾಚರಣೆ ಹಾಗೂ ಉಚಿತ ದಂತ ತಪಾಸಣಾ ಶಿಬಿರವನ್ನು ಇತ್ತೀಚೆಗೆ ಹಮ್ಮಿಕೊಳ್ಳಲಾಗಿತ್ತು.ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ



ಸಾರ್ವಜನಿಕ ಆಸ್ಪತ್ರೆಯ ದಂತ ವೈದ್ಯರಾದ ಡಾ. ನಾಗವೇಣಿ ಹಲ್ಲು ಮತ್ತು ವಸಡುಗಳ ಆರೋಗ್ಯ ಕಾಪಾಡಿಕೊಳ್ಳುವುದು ಅತ್ಯಗತ್ಯ. ಹಲ್ಲು ಕೊಳೆಯುವುದನ್ನು ತಡೆಯಲು ಮತ್ತು ವಸಡುಗಳ ರೋಗನಿಯಂತ್ರಣಕ್ಕೆ ಮುನ್ನೆಚ್ಚರಿಕೆ ಕ್ರಮಗಳು ಮುಖ್ಯ. ಹಲ್ಲಿನ ಸೋಂಕು ನರಗಳಿಗೆ ತಲುಪಿದಾಗ ಹಲ್ಲು ಕಿತ್ತು ಹಾಕುವ ಬದಲು, ಆಧುನಿಕ 'ರೂಟ್ ಕೆನಾಲ್' ಚಿಕಿತ್ಸೆಯ ಮೂಲಕ ಹಲ್ಲನ್ನು ಉಳಿಸಿಕೊಳ್ಳಬಹುದು ಹಾಗೂ ಕಾಸ್ಮೆಟಿಕ್ ದಂತ ಚಿಕಿತ್ಸೆಗಳ ಕುರಿತೂ ಮಾಹಿತಿ ನೀಡಿದರು. ಜೊತೆಗೆ ತಾಲೂಕು ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಶ್ರೀಮತಿ ಗೀತಾ ಹಿರೇಮಠ ಮಾತನಾಡಿ, "ಋತುಚಕ್ರವು ಮಹಿಳೆಯರ ಒಂದು ಸ್ವಾಭಾವಿಕ ಪ್ರಕ್ರಿಯೆ. ಈ ಬಗ್ಗೆ ಯಾವುದೇ ಮುಜುಗರ ಪಡದೆ, ವೈಜ್ಞಾನಿಕವಾಗಿ ಅರ್ಥೈಸಿಕೊಳ್ಳಬೇಕು. ಮೂಢನಂಬಿಕೆಗಳನ್ನು ಬಿಟ್ಟು ತಾರ್ಕಿಕವಾಗಿ ಚಿಂತಿಸಬೇಕು.ಅಲ್ಲದೆ, ಬಾಲ್ಯವಿವಾಹದ ದುಷ್ಪರಿಣಾಮಗಳು, ಮಹಿಳೆಯರ ಸಂತಾನೋತ್ಪತ್ತಿ ಆರೋಗ್ಯ ಹಾಗೂ ಜನಸಂಖ್ಯೆ ನಿಯಂತ್ರಣದ ಅಗತ್ಯತೆಯ ಕುರಿತು ವಿದ್ಯಾರ್ಥಿನಿಯರಿಗೆ ಜಾಗೃತಿ ಮೂಡಿಸಿದರು.ಈ ಕಾರ್ಯಕ್ರಮದಲ್ಲಿ ರಾಮಾಂಜನ ಕುಮಾರ್, ಮಹಾವಿದ್ಯಾಲಯದ ಉಪನ್ಯಾಸಕರಾದ ಡಾ. ವೈಜನಾಥ ಸಗರಮಠ್, ಪ್ರೊ.ಜಾಜಿದೇವೇಂದ್ರಪ್ಪ, ಕಾಲೇಜಿನ ಪ್ರಾಚಾರ್ಯರು, ಡಾ. ಪುಷ್ಪಾ, ದಿವ್ಯ, ರೇಣುಕಾ, ಇರ್ಶಾತ್ ಬೇಗಂ, ಕೀರ್ತನ್, ಸಂಧ್ಯಾ, ಲಕ್ಷ್ಮಿದೇವಿ ಸೇರಿದಂತೆ ಹಲವು ಉಪನ್ಯಾಸಕರು ಮತ್ತು ನೂರಾರು ವಿದ್ಯಾರ್ಥಿನಿಯರು ಪಾಲ್ಗೊಂಡಿದ್ದರು.

# ವಿ.ಬಿ.ಜಿ ರಾಮ್.ಜಿ ಯೋಜನೆಯ ಸದುಪಯೋಗ ಪಡಿಸಿಕೊಳ್ಳಲು ಕಾರ್ಯನಿರ್ವಾಹಕ ಅಧಿಕಾರಿ ಬೆಟದೇಶ್ ಸಲಹೆ



• ಮಲ್ಲಮ್ಮ ನುಡಿ ವಾರ್ತೆ ಕುಕನೂರು

ಗ್ರಾಮೀಣ ಭಾಗದ ಕೂಲಿಕಾರರಿಗೆ ಜೀವನೋಪಾಯದ ಭದ್ರತೆ ಒದಗಿಸುವ ವಿಕ್ಷಿತ್ ಭಾರತ ಗ್ಯಾರಂಟಿ ರೋಜಗಾರ ಮತ್ತು ಆಜೀವಿಕ ಮಿಷನ್ (ಗ್ರಾಮೀಣ). ಯೋಜನೆಯು ಇದೇ ಜುಲೈ-1 ರಿಂದ ಜಾರಿಯಲ್ಲಿದ್ದು ಗ್ರಾಮೀಣ ಭಾಗದ ಕೂಲಿಕಾರ ಕುಟುಂಬಗಳಿಗೆ ಹೆಚ್ಚಿನ ಬಲ ತಂದಿದೆ. ಹಿಂದೆ ನರೇಗಾ ಯೋಜನೆಯಲ್ಲಿ 100 ಮಾನವ ದಿನಗಳ ಕೂಲಿ ಕೆಲಸ ನೀಡಲಾಗುತ್ತಿತ್ತು ಆದರೆ ಗಿಃಉಖಂಒಉ ನಲ್ಲಿ 125 ಮಾನವ ದಿನಗಳ ಅಕುಷಲ ಕೂಲಿ ಕೆಲಸ ನೀಡಲಾಗುತ್ತಿದೆ. ಇಗಾಗಲೇ ಚಾಲ್ತಿಯಲ್ಲಿದ್ದ ಕಾಮಗಾರಿಗಳಲ್ಲಿ ಕೂಲಿ ಕೆಲಸ ನೀಡಲಾಗುತ್ತಿದ್ದು, 318 ಮಾದರಿ ಕಾಮಗಾರಿಗಳನ್ನು ಅನುಷ್ಠಾನ ಮಾಡಲಾಗುತ್ತಿದೆ. ಕೂಲಿ ದರ ಹೆಚ್ಚಳ ಹಿಂದೆ ರೂ.370 ಇದ್ದ ಕೂಲಿ ದರ ಈಗ ರೂ. 382 ಆಗಿದ್ದು ಗ್ರಾಮೀಣ ಭಾಗದ ಕೂಲಿಕಾರರು ಇನ್ನೂ ಆರ್ಥಿಕವಾಗಿ ಸದೃಡ ಹೊಂದಲು ಕೂಲಿದರ ನೆರವಾಗಲಿದೆ. ಯೋಜನೆಯಡಿ ನೊಂದಾಯಿತ ಕೂಲಿಕಾರರಿಗೆ e-KYC ಕಡ್ಡಾಯ ಗೊಳಿಸಲಾಗಿದ್ದು ನೈಜ ಕೂಲಿಕಾರರಿಗೆ ಯೋಜನೆಯ ಸದುಪಯೋಗ ಪಡಿಸಿಕೊಳ್ಳಬಹುದು ಓಒಒಖ ಮೋಬೈಲ್ ತಂತ್ರಾಂಶದ ಮೂಲಕ ದೈನಂದಿನ ಹಾಜರಾತಿ ತೆಗೆದುಜೊಳ್ಳಲು ಅವಕಾಶ ಕಲ್ಪಿಸಲಾಗಿದ್ದು, ಇದ-ರಿಂದಾಗಿ ರೀಯಲ್ ಟೈಮ್ ನಲ್ಲಿ ಹಾಜರಾತಿ ಪಡೆದುಕೊಳ್ಳಲು ಅವಕಾಶವಿದೆ.ತೋಟಗಾರಿಕೆ, ರೇಷ್ಮೆ, ಜಾನುವಾರು ಶೇಡ್ ಸೇರಿದಂತೆ ಇತರೆ ವೈಯಕ್ತಿಕ ಕಾಮಗಾರಿಗಳನ್ನು ಅನುಷ್ಠಾನಿಸಲು ರೂ. 5.00 ಲಕ್ಷದ ವರೆಗೆ ನೆರವು ಸಿಗಲಿದೆ.ಇಸ್ರೋ ಅಭಿವೃದ್ಧಿ ಪಡಿಸಿದ ಯುಕ್ತಧಾರ ಮಾದರಿಯಲ್ಲಿ ಉಐಖ ತಂತ್ರಜ್ಞಾನ ಬಳಸಿಕೊಂಡು ಕ್ರಿಯಾ ಯೋಜನೆ ತಯಾರಿಸುತ್ತಿದ್ದು, ಇದರಿಂದಾಗಿ ಸರಿಯಾದ ಸ್ಥಳದಲ್ಲಿ ಸೂಕ್ತವಾದ ಕಾಮಗಾರಿ ಅನುಷ್ಠಾನ ಮಾಡಲು ಅವಕಾಶವಿದೆ. ಇದರಿಂದಾಗಿ ನೈಸರ್ಗಿಕ ಸಂಪನ್ಮೂಲಗಳ ಸಂರಕ್ಷಣೆ ಮತ್ತು ಅಭಿವೃದ್ಧಿ ಸೇರಿದಂತೆ ಗ್ರಾಮ ಪಂಚಾಯತಿಗಳ ಮೂಲಕ ಗ್ರಾಮೀಣ ಅಭಿವೃದ್ಧಿ ಜನ ಸಹಭಾಗಿತ್ವದೊಂದಿಗೆ ಆಗಲಿದೆ ಎಂದು ತಾಲೂಕು ಪಂಚಾಯತ್ ಕಾರ್ಯ ನಿರ್ವಾಹಕ ಅಧಿಕಾರಿ ಬೆಟದೀಶ್ ಮಾಳಕೊಪ್ಪ ಹೇಳಿದರು.

# ಗೃಹ ಸಚಿವ ಪ್ರಿಯಾಂಕ್ ಖರ್ಗೆಗೆ ಪ್ರೌಢಶಾಲಾ ಸಹ ಶಿಕ್ಷಕರ ಸಂಘದಿಂದ ಅಭಿನಂದನೆ



• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ರಾಜ್ಯದ ನೂತನ ಗೃಹ ಸಚಿವರಾಗಿ ಅಧಿಕಾರ ಸ್ವೀಕರಿಸಿದ ಬಳಿಕ ಮೊದಲ ಬಾರಿಗೆ ಕಲಬುರಗಿ ನಗರಕ್ಕೆ ಆಗಮಿಸಿದ ಜಿಲ್ಲಾ ಉಸ್ತುವಾರಿ ಸಚಿವರಾದ ಪ್ರಿಯಾಂಕ್ ಖರ್ಗೆ ಅವರಿಗೆ ಕರ್ನಾಟಕ ರಾಜ್ಯ ಪ್ರೌಢಶಾಲಾ ಸಹ ಶಿಕ್ಷಕರ ಸಂಘದ ಕಲಬುರಗಿ ಜಿಲ್ಲಾ ಘಟಕದ ವತಿಯಿಂದ ಅಭಿನಂದಿಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ರಾಜ್ಯದಲ್ಲಿಯೇ ಮಾದರಿಯಾಗುವ ರೀತಿಯಲ್ಲಿ ಪ್ರೌಢಶಾಲಾ ಸಹ ಶಿಕ್ಷಕರ ಸಂಘದ ಕಲಬುರಗಿ ಜಿಲ್ಲಾ ಘಟಕಕ್ಕೆ ಕಲಬುರಗಿ ನಗರ ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ನಗರದ ಹೃದಯ ಭಾಗವಾದ ಆಳಂದ ಚೆಕ್‌ಪೋಸ್ಟ್ ಸಮೀಪ 2.39 ಕೋಟಿ ರೂ. ಮೌಲ್ಯದ ನಾಗರಿಕ ಸೌಲಭ್ಯ ನಿವೇಶನವನ್ನು ಸಚಿವ ಸಂಪುಟ ಸಭೆಯ ಅನುಮೋದನೆಯೊಂದಿಗೆ ಶೇ.90 ರಿಯಾಯಿತಿ ದರದಲ್ಲಿ ಕೇವಲ 23.90 ಲಕ್ಷ ರೂ.ಗೆ ಮಂಜೂರು ಮಾಡಿಸಿರುವುದಕ್ಕೆ ಸಚಿವ ಪ್ರಿಯಾಂಕ್ ಖರ್ಗೆ ಅವರಿಗೆ ಸಂಘದ ಪದಾಧಿಕಾರಿಗಳು ಕೃತಜ್ಞತೆ ಸಲ್ಲಿಸಿದರು.ರಾಜ್ಯದ ಇತಿಹಾಸದಲ್ಲಿಯೇ ಶಿಕ್ಷಕರ ಸಂಘಟನೆಯ ಹೆಸರಿನಲ್ಲಿ ನಿವೇಶನ ಪಡೆದ ಮೊದಲ ಘಟಕ ಎಂಬ ಹೆಗ್ಗಳಿಕೆಗೆ ಕಲಬುರಗಿ ಜಿಲ್ಲಾ ಘಟಕ ಪಾತ್ರವಾಗಿದ್ದು, ನೋಂದಣಿ ಸೇರಿದಂತೆ ಸುಮಾರು 25.50 ಲಕ್ಷ ರೂ. ಪಾವತಿಸಿ, 2026ರ ಜುಲೈ 1ರಂದು ಉಪನೋಂದಣಾಧಿಕಾರಿಗಳ ಕಚೇರಿಯಲ್ಲಿ ಸಂಘದ ಹೆಸರಿಗೆ ನಿವೇಶನ ನೋಂದಣಿಯಾಗಿದೆ ಎಂದು ತಿಳಿಸಲಾಯಿತು.

ಈ ಸಾಧನೆಗೆ ಕಾರಣಕರ್ತರಾದ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರಿಗೆ ಸಿಹಿ ಹಂಚಿ ಅಭಿನಂದಿಸಲಾಯಿತು.

ಕಾರ್ಯಕ್ರಮದಲ್ಲಿ ಶಾಸಕರಾದ ಅಲ್ಲಮಪ್ರಭು ಪಾಟೀಲ್, ಎಂ.ವೈ. ಪಾಟೀಲ್, ತಿಪ್ಪಣ್ಣಪ್ಪ ಕಮಕನೂರ, ಸಂಘದ ಜಿಲ್ಲಾ ಅಧ್ಯಕ್ಷ ಮಹೇಶ್ ಹೂಗಾರ, ಜಿಲ್ಲಾ ಕಾರ್ಯದರ್ಶಿ ಜಮೀಲ್ ಇಮ್ರಾನ್ ಅಹಮದ್, ರಾಜೇಶ್ ನೀಲಹಳ್ಳಿ, ಮಹಮ್ಮದ್ ರಫೀಕ್, ಮುರಳೀಧರ ತೊಣಪೆ, ವಿಜಯಕುಮಾರ್ ಪಾಟೀಲ್, ವಿಳಾಸರಾವ್ ಸಿನ್ನೂರ್ಕರ್, ಸತೀಶ ಜಾಮಗೊಂಡ್, ಮಲ್ಲಿಕಾರ್ಜುನ ಶಿರಸಿಗಿ, ಸೂರ್ಯಕಾಂತ, ರಾಜು ಹಂಚಾಟೆ, ಶ್ರೀನಿವಾಸ ಮರಿ, ಜೆ.ಎಚ್. ಪಟೇಲ್ ಸೇರಿದಂತೆ ಸಂಘದ ಪದಾಧಿಕಾರಿಗಳು ಹಾಗೂ ಸದಸ್ಯರು ಉಪಸ್ಥಿತರಿದ್ದರು.

# ಇಂದು ಯಾದಗಿರಿ ನಗರದಲ್ಲಿ ನೀರು ಸರಬರಾಜಿನಲ್ಲಿ ವ್ಯತ್ಯಯ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಜುಲೈ. 09 : ಜಾಕವೇಲ್‌ನಿಂದ ಫೀಲ್ಟರ್‌ಬೆಡ್‌ಗೆ ಹೋಗುವ ಶಾಸ್ತ್ರೀ ವೃತ್ತದ ಹತ್ತಿರ ಮುಖ್ಯ ರೈಸಿಂಗ್ ಪೈಪಲೈನ್ ಲಿಕೇಜ ಆಗುತ್ತಿರುವುದರಿಂದ ಅಪಾರ ಪ್ರಮಾಣದ ನೀರು ಪೋಲಾಗುತ್ತಿದೆ. ಕಾರಣ ಸದರಿ ಲಿಕೇಜನ್ನು ರಿಪೇರಿ ಮಾಡುವ ಅವಶ್ಯಕತೆ ಇರುವುದರಿಂದ ದಿನಾಂಕ: 10-07-2026 ರಂದು ಯಾದಗಿರಿ ನಗರದಲ್ಲಿ ನೀರು ಸರಬರಾಜು ಮಾಡಲು ಸಾಧ್ಯವಾಗುವುದಿಲ್ಲ. ನಗರದ ಸಾರ್ವಜನಿಕರು ಹಾಗೂ ನಾಗರೀಕರು ನಗರಸಭೆಯೊಂದಿಗೆ ಸಹಕರಿಸಬೇಕೆಂದು ಯಾದಗಿರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# 17 ರಂದು ಡಾಕ್ ಅದಾಲತ್

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಜುಲೈ. 09 : ಯಾದಗಿರಿ ವಿಭಾಗದ ಅಂಚೆ ಅಧೀಕ್ಷಕರು ದಿನಾಂಕ: 17-07-2026 ರಂದು ಬೆಳಿಗ್ಗೆ 11 ಗಂಟೆಗೆ ಅಂಚೆ ಅಧೀಕ್ಷಕರು, ಯಾದಗಿರಿ ವಿಭಾಗ, ಯಾದಗಿರಿ-585201 ಯಲ್ಲಿ ಅಂಚೆ ದೂರುಗಳ ಕುರಿತು ಡಾಕ್ ಅದಾಲತ್‌ನ್ನು ನಡೆಸಲಿದ್ದಾರೆ.

ಯಾದಗಿರಿ ವಿಭಾಗದ ವ್ಯಾಪ್ತಿಗೆ ಒಳಪಡುವ ಅಂಚೆ ಕಚೇರಿಗಳಿಗೆ ಸಂಬಂಧಿಸಿದಂತೆ ಸಾರ್ವಜನಿಕರು ತಮ್ಮಲ್ಲಿರುವ ಯಾವುದೇ ಕುಂದುಕೊರತೆಗಳು ಅಥವಾ ದೂರುಗಳನ್ನು ಈ ಅದಾಲತ್‌ನಲ್ಲಿ ಪ್ರಸ್ತುತಪಡಿಸಲು ಅವಕಾಶ ಕಲ್ಪಿಸಲಾಗಿದೆ.

ದೂರು ಸಲ್ಲಿಸಬಯಸುವವರು ದಿನಾಂಕ: 16-07-2026 ರ ಸಂಜೆ 4 ಯೊಳಗಾಗಿ ಅಂಚೆ ಅಧೀಕ್ಷಕರು, ಯಾದಗಿರಿ ವಿಭಾಗ ಯಾದಗಿರಿ-585201 ರವರಿಗೆ ಸಲ್ಲಿಸಬೇಕು. ಅಥವಾ ಇಮೇಲ್ doyadgiri.ka@indiapost.gov.in ಗೆ ಕೂಡ ಸಲ್ಲಿಸಬಹುದಾಗಿದೆ. ಅಂಚೆ ಸೇವೆಗಳಿಗೆ ಸಂಬಂಧಿಸಿದ ಸಮಸ್ಯೆಗಳನ್ನು ಹೊಂದಿರುವ ಸಾರ್ವಜನಿಕರು ನಿಗದಿತ ಸಮಯದೊಳಗೆ ತಮ್ಮ ಅಹವಾಲುಗಳನ್ನು ಸಲ್ಲಿಸಿ ಈ ಅದಾಲತ್‌ನ ಸದುಪಯೋಗ ಪಡೆದುಕೊಳ್ಳಬೇಕಾಗಿ ಅಂಚೆ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮುಂಗಾರು ಹಂಗಾಮಿನ ಬೆಳೆ ವಿಮೆ ಯೋಜನೆಗೆ ಅರ್ಜಿ ಆಹ್ವಾನ


• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಜುಲೈ. 09 : ಜಿಲ್ಲೆಯಲ್ಲಿ 2026-27ನೇ ಸಾಲಿನ ಮುಂಗಾರು ಹಂಗಾಮಿಗೆ 'ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ (ವಿಮಾ) ಯೋಜನೆ'ಯನ್ನು ಅನುಷ್ಠಾನಗೊಳಿಸಲು ಸರ್ಕಾರವು ಮಂಜೂರಾತಿ ನೀಡಿದ್ದು, ಅರ್ಹ ರೈತರಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಯಾದಗಿರಿ ಜಿಲ್ಲೆಯ ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪ್ರಸ್ತುತ ಜಿಲ್ಲೆಯಲ್ಲಿ ಬರಡಿನ ಛಾಯೆ ಆವರಿಸಿರುವ ಕಾರಣ, ರೈತರ ಹಿತದೃಷ್ಟಿಯಿಂದ ಈ ಯೋಜನೆ ಅತ್ಯಂತ ಸಹಕಾರಿಯಾಗಲಿದ್ದು, ಬಾಕಿ ಇರುವ ಎಲ್ಲಾ ರೈತರು ಇದರ ಸದುಪಯೋಗ ಪಡೆದುಕೊಳ್ಳಬೇಕು. ಜಿಲ್ಲೆಯಲ್ಲಿ ಇದುವರೆಗೆ ಒಟ್ಟು 7026 ರೈತರು ವಿವಿಧ ಬೆಳೆಗಳಿಗೆ ವಿಮೆ ನೊಂದಾಯಿಸಿಕೊಂಡಿದ್ದಾರೆ. ಬೆಳೆಗಳು ಮತ್ತು ವಿಮೆ ಕಂತು ಪಾವತಿಸಲು ಕೊನೆಯ ದಿನಾಂಕಗಳು: ಉದ್ದು (ಮಳೆ ಆಶ್ರಿತ) ಮತ್ತು ಹೆಸರು (ಮಳೆ ಆಶ್ರಿತ) ಬೆಳೆಗಳಿಗೆ ವಿಮಾ ಕಂತು ಪಾವತಿಸಲು ಜುಲೈ.15, ತೊಗರಿ (ನೀರಾವರಿ), ಸೂರ್ಯಕಾಂತಿ (ಮಳೆ ಆಶ್ರಿತ), ಹತ್ತಿ (ನೀರಾವರಿ ಮತ್ತು ಮಳೆ ಆಶ್ರಿತ) ಹಾಗೂ ಸಜ್ಜೆ (ನೀರಾವರಿ ಮತ್ತು ಮಳೆ ಆಶ್ರಿತ) ಬೆಳೆಗಳಿಗೆ ವಿಮಾ ಕಂತು ಪಾವತಿಸಲು ಜುಲೈ 31, ಭತ್ತ (ನೀರಾವರಿ) ಮತ್ತು ತೊಗರಿ (ಮಳೆ ಆಶ್ರಿತ) ಬೆಳೆಗಳಿಗೆ ವಿಮಾ ಕಂತು ಪಾವತಿಸಲು ಆಗಸ್ಟ್ 14 ಕೊನೆಯ ದಿನಾಂಕವಾಗಿರುತ್ತದೆ.

ಯಾದಗಿರಿ ಜಿಲ್ಲೆಗೆ ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಇಫ್ಕೋ ಟೋಕಿಯೋ ಜನರಲ್ ಇನ್ಶೂರೆನ್ಸ್ ಕಂಪನಿ ಸಂಸ್ಥೆಯನ್ನು ಆಯ್ಕೆ ಮಾಡಲಾಗಿದೆ. ಬೆಳೆ ಸಾಲ ಪಡೆದ ಮತ್ತು ಪಡೆಯದ ಉಭಯ ರೈತರಿಗೂ ಬೆಳೆ ವಿಮೆ ಮಾಡಿಸುವುದು ಐಚ್ಛಿಕವಾಗಿರುತ್ತದೆ.ಆಸಕ್ತ ರೈತರು ತಮ್ಮ ಹತ್ತಿರದ ಬ್ಯಾಂಕುಗಳು, ಕೃಷಿ ಪತ್ತಿನ ಸಹಕಾರ ಸಂಘಗಳು (PACS) ಅಥವಾ ಸಾಮಾನ್ಯ ಸೇವಾ ಕೇಂದ್ರಗಳಿಗೆ (CSC) ಭೇಟಿ ನೀಡಿ ವಿಮೆ ಮಾಡಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ರೈತರು ತಮ್ಮ ವ್ಯಾಪ್ತಿಯ ರೈತ ಸಂಪರ್ಕ ಕೇಂದ್ರ ಅಥವಾ ಆಯಾ ತಾಲೂಕಿನ ಸಹಾಯಕ ಕೃಷಿ ನಿರ್ದೇಶಕರನ್ನು ಸಂಪರ್ಕಿಸಬಹುದಾಗಿದೆ ಎಂದು ತಿಳಿಸಿದ್ದಾರೆ.

# ಪ್ರತಿಭಾನ್ವಿತ ವಿದ್ಯಾರ್ಥಿನಿಗೆ ಉಚಿತ ಲ್ಯಾಪ್ ಟಾಪ್



• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಜಿಲ್ಲಾ ಪಂಚಾಯತ್ ಮಾಜಿ ಸದಸ್ಯ ಹಾಗೂ ತಾಲೂಕಿನ ಮಾಜಿ ಶಾಸಕ ಶಿವಶರಣಪ್ಪಗೌಡ ಪಾಟೀಲ್ ಅವರ ಪುತ್ರ ಅರವಿಂದ್ ಗೌಡ ಪಾಟೀಲ್ ಗುಡುಗುಂಟಿ ಗ್ರಾಮದ ಬಡ ಪ್ರತಿಭಾನ್ವಿತ ಎಂಜಿನಿಯರಿಂಗ್ ವಿದ್ಯಾರ್ಥಿನಿ ಕುಮಾರಿ ಬೇಗಂ ಖಾಸಿಂ ಸಾಬ್ ಇವರಿಗೆ ಉಚಿತ ಲ್ಯಾಪ್ ಟಾಪ್ ವಿತರಣೆ ಮಾಡಿದರು.

ಯಲಬುರ್ಗಾ ತಾಲೂಕಿನ ಕುಡಗುಂಟಿ ಗ್ರಾಮದ ಸರ್ಕಾರಿ ಸಮುದಾಯ ಭವನದಲ್ಲಿ ಬುಧವಾರ ರಂದು ಲ್ಯಾಪ್‌ಟಾಪ್ ವಿತರಣೆ ಮಾಡಿ ಮಾತನಾಡಿದ ಅರವಿಂದಗೌಡ ಪಾಟೀಲ್,

ತಾಲೂಕಿನಲ್ಲಿ ಪ್ರತಿಭಾನ್ವಿತ ಅನೇಕ ಬಡ ವಿದ್ಯಾರ್ಥಿಗಳಿದ್ದಾರೆ.ಅವರ ವಿದ್ಯಾಭ್ಯಾಸ, ಉಜ್ವಲ ಭವಿಷ್ಯಕ್ಕೆ ಆರ್ಥಿಕ ನೆರವು ಅವಶ್ಯಕತೆ ಇದ್ದು ಅಂತಹ ನಿಟ್ಟಿನಲ್ಲಿ ನೆರವಿನ ಕಾರ್ಯ ಇದಾಗಿದೆ ಎಂದರು.

ತಮ್ಮ ತಂದೆಯವರ ಆದರ್ಶಗಳು ಮತ್ತು ಸೇವಾ ಮನೋಭಾವವನ್ನು ಅನುಸರಿಸಿಕೊಂಡು, ಶಿಕ್ಷಣಕ್ಕೆ ಉತ್ತೇಜನ ನೀಡುವ ಉದ್ದೇಶದಿಂದ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ನಿರಂತರವಾಗಿ ಬೆಂಬಲ, ಸಹಾಯ ಮಾಸುವುದರಲ್ಲಿ ನಿಜವಾದ ಸಾರ್ಥಕತೆ ಇದೆ ಎಂದು ಅರವಿಂದ್ ಗೌಡ ಪಾಟೀಲ್ ಹೇಳಿದರು.

ಈ ಸಂದರ್ಭದಲ್ಲಿ ಸಿದ್ದಯ್ಯ ಹಿರೇಮಠ್, ಕಲ್ಲನಗೌಡ ಪಾಟೀಲ್, ಬಸಪ್ಪ ರಾವಣಕಿ, ಶರಣಪ್ಪ ಹಾದಿಮನಿ, ರಾಜಾಸಾಬ್ ಹುಡೇದ್, ಉಮೇಶಪ್ಪ ಹೊಸಮನಿ, ಶರಣಪ್ಪ ಕುರಿ, ಗದ್ದೆಪ್ಪ ಛಲವಾದಿ, ಅಶೋಕ್ ಕೋಳಿಹಾಳ್, ಶಂಕರಗೌಡ ಪಾಟೀಲ್ ಇತರರು ಉಪಸ್ಥಿತರಿದ್ದರು.

# ಶೌಚಾಲಯ ಹಾಗೂ ಬಿಸಿಯೂಟ ಕೊಠಡಿ ಕಾಮಗಾರಿ ಅಪೂರ್ಣ: ವಿದ್ಯಾರ್ಥಿನಿಯರ ಸಂಕಷ್ಟ, ಗ್ರಾಮಸ್ಥರ ಆಕ್ರೋಶ





• **ಮಲ್ಲಮ್ಮ ನುಡಿ ವಾರ್ತೆ ಕುಕನೂರು**

: ತಾಲೂಕಿನ ಕುದರಿಮೋತಿ ಗ್ರಾಮದ ಸರ್ಕಾರಿ ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜಿನಲ್ಲಿ ವಿದ್ಯಾರ್ಥಿನಿಯರ ಸಂಖ್ಯೆ ಹೆಚ್ಚಿದ್ದರೂ, ಅಗತ್ಯ ಪ್ರಮಾಣದ ಶೌಚಾಲಯಗಳ ಕೊರತೆಯಿಂದ ಅವರು ಪ್ರತಿನಿತ್ಯ ತೀವ್ರ ಸಂಕಷ್ಟ ಅನುಭವಿಸುತ್ತಿದ್ದಾರೆ ಎಂದು ಗ್ರಾಮಸ್ಥರು ಹಾಗೂ ಪಾಲಕರು ಆರೋಪಿಸಿದ್ದಾರೆ.ಕಾಲೇಜು ಆವರಣದಲ್ಲಿ ಮಹಾತ್ಮಾ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ (ನರೇಗಾ) ಅಡಿಯಲ್ಲಿ 2020–21ನೇ ಸಾಲಿನಲ್ಲಿ ಸುಮಾರು 4.30 ಲಕ್ಷ ವೆಚ್ಚದಲ್ಲಿ ಶೌಚಾಲಯ ನಿರ್ಮಾಣ ಕಾಮಗಾರಿ ಹಾಗೂ ಸುಮಾರು 5 ಲಕ್ಷ ವೆಚ್ಚದ ಬಿಸಿಯೂಟ ಕೊಠಡಿ ನಿರ್ಮಾಣ ಕಾಮಗಾರಿ ಆರಂಭಿಸಲಾಗಿತ್ತು. ಆದರೆ ಹಲವು ವರ್ಷಗಳು ಕಳೆದರೂ ಕಾಮಗಾರಿ ಪೂರ್ಣಗೊಳ್ಳದೇ ಅಪೂರ್ಣ ಸ್ಥಿತಿಯಲ್ಲೇ ಉಳಿದಿದೆ ಎಂದು ಗ್ರಾಮಸ್ಥರು ದೂರಿದ್ದಾರೆ.

ಶೌಚಾಲಯದ ಕೊರತೆಯಿಂದ ವಿದ್ಯಾರ್ಥಿನಿಯರು ಪಾಠದ ವೇಳೆಯಲ್ಲೇ ತೀವ್ರ ಮುಜುಗರ ಮತ್ತು ಆರೋಗ್ಯ ಸಮಸ್ಯೆಗಳನ್ನು ಎದುರಿಸುತ್ತಿದ್ದು, ಇದು ಅವರ ಶಿಕ್ಷಣದ ಮೇಲೂ ಪ್ರತಿಕೂಲ ಪರಿಣಾಮ ಬೀರುತ್ತಿದೆ. ಸರ್ಕಾರವು ವಿದ್ಯಾರ್ಥಿಗಳ ಮೂಲಭೂತ ಸೌಲಭ್ಯಗಳಿಗಾಗಿ ಲಕ್ಷಾಂತರ ರೂಪಾಯಿ ಅನುದಾನ ಬಿಡುಗಡೆ ಮಾಡಿದ್ದರೂ, ಕಾಮಗಾರಿ ಪೂರ್ಣಗೊಳಿಸದಿರುವುದು ಅಧಿಕಾರಿಗಳ ನಿರ್ಲಕ್ಷ್ಯಕ್ಕೆ ಸಾಕ್ಷಿಯಾಗಿದೆ ಎಂದು ಗ್ರಾಮಸ್ಥರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಇನ್ನೊಂದೆಡೆ, ಅಪೂರ್ಣವಾಗಿರುವ ಬಿಸಿಯೂಟ ಕೊಠಡಿ ಬಳಕೆಗೆ ಬಾರದ ಕಾರಣ ವಿದ್ಯಾರ್ಥಿಗಳಿಗೆ ಸೂಕ್ತ ವ್ಯವಸ್ಥೆ ಇಲ್ಲದಂತಾಗಿದೆ. ಸಾರ್ವಜನಿಕರ ತೆರಿಗೆ ಹಣದಿಂದ ನಿರ್ಮಿಸಲಾಗುತ್ತಿರುವ ಕಾಮಗಾರಿಗಳು ವರ್ಷಗಳ ಕಾಲ ಅಪೂರ್ಣವಾಗಿ ಬಿದ್ದಿರುವುದು ಆಡಳಿತ ವ್ಯವಸ್ಥೆಯ ವೈಫಲ್ಯವನ್ನು ಎತ್ತಿ ತೋರಿಸುತ್ತಿದೆ ಎಂದು ಸ್ಥಳೀಯರು ಆರೋಪಿಸಿದ್ದಾರೆ.

ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ ಹಾಗೂ ಸಂಬಂಧಪಟ್ಟ ಅಧಿಕಾರಿಗಳು ಕೂಡಲೇ ಸ್ಥಳಕ್ಕೆ ಭೇಟಿ ನೀಡಿ ಕಾಮಗಾರಿಗಳ ಗುಣಮಟ್ಟ ಮತ್ತು ವಿಳಂಬಕ್ಕೆ ಕಾರಣವಾದ ಅಂಶಗಳನ್ನು ಪರಿಶೀಲಿಸಬೇಕು. ನಿರ್ಲಕ್ಷ್ಯ ತೋರಿದ ಅಧಿಕಾರಿಗಳು ಹಾಗೂ ಗುತ್ತಿಗೆದಾರರ ವಿರುದ್ಧ ಸೂಕ್ತ ಕ್ರಮ ಕೈಗೊಂಡು, ಶೌಚಾಲಯ ಮತ್ತು ಬಿಸಿಯೂಟ ಕೊಠಡಿ ಕಾಮಗಾರಿಯನ್ನು ತುರ್ತಾಗಿ ಪೂರ್ಣಗೊಳಿಸಿ ವಿದ್ಯಾರ್ಥಿಗಳ ಬಳಕೆಗೆ ಮುಕ್ತಗೊಳಿಸಬೇಕು ಎಂದು ಗ್ರಾಮಸ್ಥರು, ಪಾಲಕರು ಹಾಗೂ ಎಸ್‌ಡಿಎಂಸಿ ಸದಸ್ಯರು ಒತ್ತಾಯಿಸಿದ್ದಾರೆ.

"ವಿದ್ಯಾರ್ಥಿಗಳಿಗೆ ಮೂಲಭೂತ ಸೌಲಭ್ಯ ಒದಗಿಸುವುದು ಸರ್ಕಾರ ಮತ್ತು ಅಧಿಕಾರಿಗಳ ಜವಾಬ್ದಾರಿಯಾಗಿದೆ. ವಿದ್ಯಾರ್ಥಿನಿಯರ ಗೌರವ, ಆರೋಗ್ಯ ಹಾಗೂ ಶಿಕ್ಷಣದ ಹಿತದೃಷ್ಟಿಯಿಂದ ಈ ಸಮಸ್ಯೆಯನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಿ ತಕ್ಷಣ ಕ್ರಮ ಕೈಗೊಳ್ಳಬೇಕು" ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.

# ರೋಟರಿ ಕ್ಲಬ್ ನೂತನ ಅಧ್ಯಕ್ಷರಿಗೆ ಅಧಿಕಾರ ಹಸ್ತಾಂತರ




• **ಮಲ್ಲಮ್ಮ ನುಡಿ ವಾರ್ತೆ ಹುಣಸೂರು**

ಅಕ್ಷರ,ಆರೋಗ್ಯ, ಹಸಿವು ನೀಗಿಸುವ ಮುಖ್ಯ ಧ್ಯೇಯ ಅಂತರಾಷ್ಟ್ರೀಯ ರೋಟರಿ ಸಂಸ್ಥೆಯದಾಗಿದೆ ಎಂದು 2027,28 ರ 3181 ನಿಯೋಜಿತ ಜಿಲ್ಲಾ ಗವರ್ನರ್ ಯಶಸ್ವಿ ಸೋಮಶೇಖರ್ ತಿಳಿಸಿದರು.

ನಗರದ ರೋಟರಿ ಭವನದಲ್ಲಿ. 25,26ನೇ ಸಾಲಿನ ರೋಟರಿ ಕ್ಲಬ್ ನೂತನ ಅಧ್ಯಕ್ಷರಿಗೆ ಅಧಿಕಾರ ಹಸ್ತಾಂತರ ಮಾಡಿ. ಪದಗ್ರಹಣ ಅಧಿಕಾರಿಯಾಗಿ ಮಾತನಾಡಿದ ಅವರು, 120. ವರ್ಷಗಳ ಇತಿಹಾಸವಿರುವ ರೋಟರಿ ಸಂಸ್ಥೆ. ಆರೋಗ್ಯ ವಿಶ್ವಸಂಸ್ಥೆಯೊಂದಿಗೆ ಕೈಜೋಡಿಸಿ. ವಿಶ್ವದೆಲ್ಲೆಡೆ ಪೋಲಿಯೋ ನಿರ್ಮೂಲನೆಯಲ್ಲಿ ಪ್ರಮುಖ ಪಾತ್ರವಹಿಸಿದೆ ಎಂದರು.

ರೋಟರಿ ಸಂಸ್ಥೆ ಎಂದರೆ, ಬರಿ ಸಭೆ, ಸಮಾರಂಭ, ಬರಿ ಯೋಜನೆ ರೂಪಿಸುವುದಲ್ಲ, ನಿರ್ಗತಿಕರಿಗೆ ನೆರವು,ವಿದ್ಯಾರ್ಥಿಗಳಿಗೆ ಪುಸ್ತಕ,ರೋಗಿಗಳ ಜೀವನದಲ್ಲಿ ಆರೋಗ್ಯ, ಯುವಕರಲ್ಲಿ ನಾಯಕತ್ವ, ರೈತರಿಗೆ ಆಶಾಭಾವನೆ ಹಾಗೂ ಸಮಾಜದಲ್ಲಿ ಶಾಂತಿ,ನೆಮ್ಮದಿ ಸ್ಥಾಪಿಸುವ ಕಾರ್ಯ ರೋಟರಿಯಿಂದಾಗಲಿ ಎಂದರು.

ಸಹಾಯಕ ಗವರ್ನರ್ ರಾಘವೇಂದ್ರ ಮಾತನಾಡಿ, ಹುಣಸೂರು ರೋಟರಿ ಕ್ಲಬ್ 25,26ನೇ ಅವಧಿಯಲ್ಲಿ. ಅಧ್ಯಕ್ಷರಾಗಿದ್ದ ಹೆಚ್.ಆರ್. ಕೃಷ್ಣಕುಮಾರ್, ಅತ್ಯುತ್ತಮ ಅವಾರ್ಡ್ ಡೈಮಂಡ್ ಪ್ಲಸ್ ಪಡೆದು ಕ್ಲಬ್ ಗೆ ಹಿರಿಮೆ ತಂದಿದ್ದಾರೆ. ಅದೇ ರೀತಿ ನೂತನ ಅಧ್ಯಕ್ಷ ಶ್ಯಾಮಣ್ಣ , ಹಾಗೂ ಲೂಯಿಸ್ ಪೆರೇರಾ ಅವರು, 26,27ರಲ್ಲಿ ಉತ್ತಮ ಕೆಲಸ ಮಾಡುವ ಮೂಲಕ ರೋಟರಿ ಕ್ಲಬ್ ಗೆ ಹೆಸರು ತರಬೇಕಿದೆ ಎಂದರು.

ರೋಟರಿ ಕ್ಲಬ್ ನಿರ್ಗಮಿತ ಅಧ್ಯಕ್ಷ .ಹೆಚ್.ಆರ್. ಕೃಷ್ಣಕುಮಾರ್ ಮಾತನಾಡಿ, ಒಂದು ವರ್ಷಗಳ ಕಾಲ ತಾಲೂಕಿನ ಹಲವು ವಿಭಾಗಗಳಲ್ಲಿ ನೊಂದವರ ಬದುಕಿಗೆ ಬೆಳಕು ನೀಡಲು, ಅಳಿಲು ಸೇವೆ ಮಾಡಲು ಸಹಕಾರ ನೀಡಿದ.ಎಲ್ಲಾ ರೋಟರಿ ಹಿರಿಯ ಸದಸ್ಯರು ಹಾಗೂ ಸಹಾಯಕ ಗವರ್ನರ್ ರಾಜೇಗೌಡ ತಿರುಮಲಾಪುರ ಅವರನ್ನು ಸ್ಮರಿಸಿದರು.

ನೂತನ ರೋಟರಿ ಕ್ಲಬ್ ಅಧ್ಯಕ್ಷ ಶ್ಯಾಮಣ್ಣ ಮಾತನಾಡಿ, ಮುಂದಿನ ದಿನಗಳಲ್ಲಿ ರೋಟರಿ ಕ್ಲಬ್ ನಲ್ಲಿ ಉತ್ತಮ ಕೆಲಸ ಮಾಡಲು ನನ್ನನ್ನು ಆಯ್ಕೆ ಮಾಡಿದ ಸದಸ್ಯರಿಗೆ ಧನ್ಯವಾದ ತಿಳಿಸಿ. ತಮ್ಮ ಯೋಜನೆ ಬಗ್ಗೆ ತಿಳಿಸಿದರು.

ಈ ಸಂದರ್ಭದಲ್ಲಿ ಇಬ್ಬರು ಎಸ್.ಎಸ್. ಎಲ್.ಸಿ. ವಿದ್ಯಾರ್ಥಿಗಳು ಹಾಗೂ ಮೂರು ಪಿಯುಸಿ ತಾಲೂಕು ಟಾಪರ್ಗಳನ್ನು ಗುರುತಿಸಿ ಸನ್ಮಾನಿಸಲಾಯಿತು. ನಗರದ ಸರಕಾರಿ ಮಹಿಳಾ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ನೋಟ್ ಪುಸ್ತಕ ನೀಡಲಾಯಿತು.

ವೇದಿಯಲ್ಲಿ ವಲಯ ಸೇನಾನಿ ಡಾ.ಪ್ರಸನ್ನ, ನೂತನ ಕಾರ್ಯದರ್ಶಿ ಲೂಯಿಸ್ ಪೆರೇರಾ, ಇದ್ದರು, ಕಾರ್ಯಕ್ರಮದ ನಿರೂಪಣೆಯನ್ನು ರೊ.ಚನ್ನಕೇಶವ ನಡೆಸಿಕೊಟ್ಟರು. ಪ್ರಾರ್ಥನೆ ರೊ.ಚಿಲ್ಕುಂದ ಮಹೇಶ್ , ಸಾರ್ಜೆಂಟ್ ರೊ. ಮಂಜುನಾಥ್ , ಹಾಗೂ ಎಲ್ಲಾ ರೋಟರಿ ಸದಸ್ಯರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ಸಾಮಾಜಿಕ ಜಾಲತಾಣಗಳಿಂದ ಭ್ರಮಾಲೋಕ : ನಟಿ ಯಮುನಾ ಶ್ರೀನಿಧಿ



• **ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ**

ಸಾಮಾಜಿಕ ಜಾಲತಾಣದಲ್ಲಿ ಮಗ್ನರಾಗುವ ಮಕ್ಕಳ ಮನಸ್ಸಿನಲ್ಲಿ ಭ್ರಮಾಲೋಕ ಸೃಷ್ಟಿಯಾಗುತ್ತದೆ. ಇದರಿಂದ ಬಿಡುಗಡೆಗೊಳ್ಳಲು ಕಲೆ, ಸಾಹಿತ್ಯ, ಕ್ರೀಡಾ ಚಟುವಟಿಕೆಗಳು ನೆರವಾಗುತ್ತವೆ. ಮಕ್ಕಳು ವರ್ತಮಾನದ ಅರಿವಿನ ಮೂಲಕ ಉತ್ತಮ ವ್ಯಕ್ತಿತ್ವ ಹಾಗೂ ಭವಿಷ್ಯ ರೂಪಿಸಿಕೊಳ್ಳಬೇಕು ಎಂದು ಚಲನಚಿತ್ರ ನಟಿ ಯಮುನಾ ಶ್ರೀನಿಧಿ ಹೇಳಿದರು.

ಪಟ್ಟಣದ ಗೋಖಲೆ ಸೆಂಟಿನರಿ ಕಾಲೇಜಿನಲ್ಲಿ ಬುಧವಾರ ಎನ್‌ಸಿಸಿ, ಹಾಗೂ ಎನ್‌ಎಸ್‌ಎಸ್, ಅರಣ್ಯ ಮತ್ತು ಪೊಲೀಸ್ ಇಲಾಖೆ, ಗೋವಾ ರಾಜ್ಯ ಎನ್‌ಸಿಸಿ ಅಲ್ಯುಮಿನಿ ಇವುಗಳ ಆಶ್ರಯದಲ್ಲಿ ಏರ್ಪಡಿಸಲಾಗಿದ್ದ ಕರಾವಳಿ ಸಾಮರ್ಥ್ಯ ಅಡಿಯಲ್ಲಿ ವನಮಹೋತ್ಸವ, ಡ್ರೋನ್ ತರಬೇತಿ, ಮಾಧಕ ವಸ್ತುಗಳ ಜಾಗೃತಿ ಹಾಗೂ ಆಪರೇಷನ್ ಸಿಂಧೂರ ಕುರಿತ ಚಿತ್ರಕಲೆ ಸ್ಪರ್ಧೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಪಿಎಸ್‌ಐ ಸುನೀಲ ಮಾತನಾಡಿ, ಗಾಂಜಾ ಸೇರಿದಂತೆ ಮಾಧಕ ವಸ್ತುಗಳ ಅಕ್ರಮ ಬಳಕೆ ಪ್ರಕರಣಗಳು ಹೆಚ್ಚುತ್ತಿವೆ, ವಿದ್ಯಾರ್ಥಿಗಳು ಇಂತಹ ಚಟುವಟಿಗಳಿಂದ ದೂರವಿರಬೇಕು ಎಂದರು. ಎನ್‌ಸಿಸಿ ಅಧಿಕಾರಿ ಹರಿಪ್ರಸಾದ ಸ್ವಾಗತಿಸಿದರು. ಸಿವಿಲ್ ಡಿಫೆನ್ಸ್ ಕಮಾಂಡಿಂಗ್ ಅಧಿಕಾರಿ ಗೌತಮ ಎಚ್.ಜಿ. ಅರಣ್ಯಾಧಿಕಾರಿ ಜಗದೀಶ ದೇವಾಡಿಗ ಉಪಸ್ಥಿತರಿದ್ದರು. ಪ್ರಾಚಾರ್ಯ ಸಿದ್ದಲಿಂಗಸ್ವಾಮಿ ವಸ್ತದ ಅಧ್ಯಕ್ಷತೆ ವಹಿಸಿದ್ದರು.

ವಿಜೇತರು : ಚಿತ್ರಕಲೆ ಸ್ಪರ್ಧೆಯಲ್ಲಿ ವಿಜೇತರಾದ ಪಿ.ಎಂ.ಪ್ರೌಢಶಾಲೆ ರಕ್ಷಿತ್, ಜೈಹಿಂದ್ ಪ್ರೌಢಶಾಲೆಯ ಶ್ರೇಯಾ ಎಸ್. ನಾಯ್ಕ, ಜಿ.ಸಿ. ಪಿಯುಸಿ ಕಾಲೇಜಿನ ನಿಷ್ಮಾ, ಹಿಮಾಲಯ ಕಾಲೇಜಿನ ಅನನ್ಯಾ ನಾಯ್ಕ, ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ವಿಶಾಲ್ ಬಿ. ಗೌಡ ಅವರಿಗೆ ಪ್ರಶಸ್ತಿ ಪತ್ರ ನೀಡಿ ಗೌರವಿಸಲಾಯಿತು.

# ಲಯನ್ಸ್ ಕ್ಲಬ್ ಕರಾವಳಿ ಕಾರ್ಯ ಶ್ಲಾಘನೀಯ : ರಮಾನಂದ




• **ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ**

ಲಾಯನ್ಸ್‌ಕ್ಲಬ್ ಅಂಕೋಲಾ ಕರಾವಳಿ ತನ್ನದೇ ಆದ ಹಿರಿಮೆಯನ್ನು ಹೊಂದಿದ್ದು, ಕಳೆದ 27 ವರ್ಷಗಳಿಂದ ನಿರಂತರವಾಗಿ ಜನಸೇವೆಯನ್ನು ಮಾಡುತ್ತ ಬಂದಿದೆ. ಮುಂದೆಯೂ ಕೂಡ ಇನ್ನಷ್ಟು ಸಮಾಜಮುಖಿ ಕಾರ್ಯಗಳು ನಡೆಯಲಿದೆ ಎನ್ನುವುದು ಶತಸಿದ್ಧ ಎಂದು ಉಡುಪಿ ಜಿಲ್ಲಾ ಗವರ್ನರ್ ರಮಾನಂದ ಕುಂದಾಪುರ ಹೇಳಿದರು.ಪಟ್ಟಣದ ಪಿ.ಎಂ.ಪ.ಪೂ ಕಾಲೇಜಿನಲ್ಲಿ ಬುಧವಾರ ನಡೆದ ಲಾಯನ್ಸ್ ಕ್ಲಬ್ ಅಂಕೋಲಾ ಕರಾವಳಿ ಇದರ ನೂತನ ಅಧ್ಯಕ್ಷರ ಪದಗ್ರಹಣ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ನೂತನ ಅಧ್ಯಕ್ಷ ಜಿ.ಆರ್.ತಾಂಡೇಲ ಹಾಗೂ ಅವರ ತಂಡದವರು ಸಕ್ರೀಯವಾಗಿ ತಮ್ಮನ್ನು ಸಮಾಜಸೇವೆಯಲ್ಲಿ ತೊಡಗಿಸಿಕೊಳ್ಳುವಂತಾಗಲಿ ಎಂದರು. ದಿನಕರ ವೇದಿಕೆಯ ಅಧ್ಯಕ್ಷ ರವೀಂದ್ರ ಕೇಣಿ, ಲಾಯನ್ಸ್ ಕ್ಲಬ್ ಮಾಜಿ ಅಧ್ಯಕ್ಷ ಕೆ.ವಿ.ಶೆಟ್ಟಿ ಮಾತನಾಡಿದರು. ಲಾಯನ್ಸ್ ಕ್ಲಬ್‌ನ ಗಣಪತಿ ನಾಯಕ ಅವರಿಗೆ 'ಲಾಯನ್ಸ್ ಅಂಕೋಲಾ ಕರಾವಳಿ ಸೇವಾ ರತ್ನ ಪ್ರಶಸ್ತಿ' ನೀಡಲಾಯಿತು. ಉಡುಪಿಯ ಮಾಜಿ ಪ್ರಾಂತಪಾಲ ಮಹಮ್ಮದ ಹನೀಫ್, ರಮೇಶ ಪರಮಾರ, ಕಾರ್ಯದರ್ಶಿ ಚೈನಸಿಂಗ್ ಚೌಹಾಣ ಉಪಸ್ಥಿತರಿದ್ದರು.

ಅಧ್ಯಕ್ಷತೆ ವಹಿಸಿದ ನೂತನ ಅಧ್ಯಕ್ಷ ಜಿ.ಆರ್. ತಾಂಡೇಲ ಮಾತನಾಡಿ,ನನ್ನ ಅಧಿಕಾರವಧಿಯಲ್ಲಿ ನಮ್ಮ ನಡೆ ಹಳ್ಳಿ ಕಡೆ ಎಂಬ ದ್ಯೇಯವಾಕ್ಯದಂತೆ ನಾವು ನಡೆಯಲಿದ್ದೇವೆ ಎಂದರು. ನಿಕಟಪೂರ್ವ ಕಾರ್ಯದರ್ಶಿ ಕೆ.ಎಂ.ಗೌಡ ವರದಿ ವಾಚಿಸಿದರು. ದೇವಾನಂದ ನಾಯಕ,ಚಂದ್ರಶೇಖರ ಕಡೆಮನಿ ಪರಿಚಯಿಸಿದರು. ಡಾ. ಕರುಣಾಕರ ಎಂ. ನಾಯ್ಕ ಸ್ವಾಗತಿಸಿದರು. ಮಹಾಂತೇಶ ರೇವಡಿ ನಿರೂಪಿಸಿದರು.ಸದಾನಂದ ಶೆಟ್ಟಿ ವಂದಿಸಿದರು. ನೂತನ ಕಾರ್ಯದರ್ಶಿ ಸುಧೀರ ನಾಯ್ಕ, ಖಜಾಂಚಿ ಆನಂದ ನಾಯ್ಕ ಉಪಸ್ಥಿತರಿದ್ದರು.

# ಅಂಕೋಲಾದಲ್ಲಿ ಕಂಡುಬಂದ ಎರಡು ಹುಲಿಗಳು





• **ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ**

ಹಲವು ದಶಕಗಳ ಹಿಂದೆ ಅಂಕೋಲಾದಲ್ಲಿ ಕಂಡುಬರುತ್ತಿದ್ದ ಹುಲಿಗಳು ನಾಪತ್ತೆಯಾಗಿದ್ದವು. ಹಾಗೇ ಮನುಷ್ಯನ ಮೇಲೆ ದಾಳಿ ನಡೆಸಬಹುದಾದ ಚಿರತೆ, ಕರಡಿ, ಹಂದಿ ಮಾತ್ರ ಅಪರೂಪಕ್ಕೆ ಕಂಡುಬರುತ್ತಿದ್ದವು. ಆದರೆ ಅಂಕೋಲಾದಲ್ಲಿ ಎರಡು ಹುಲಿ ಪತ್ತೆಯಾಗಿರುವುದು ಒಂದು ಕಡೆ ಅರಣ್ಯ ಇಲಾಖೆಗೆ ಸಂತಸ ಉಂಟಾದರೆ ಜನರಿಗೆ ಭೀತಿ ಆವರಿಸಿದೆ.

ಕೆನರಾ ವೃತ್ತದ ಕಾರವಾರ ಅರಣ್ಯ ವಿಭಾಗದಲ್ಲಿ ನಡೆದ 2026 ನೇ ಸಾಲಿನ ಹುಲಿ ಗಣತಿಯಲ್ಲಿ ಅಂಕೋಲಾ ಉಪ ವಿಭಾಗದ ಗುಳೆ ಮತ್ತು ಕೋಟೆಬಾವಿ ಅರಣ್ಯ ಪ್ರದೇಶದಲ್ಲಿ ಎರಡು ಹುಲಿಗಳು ಪತ್ತೆಯಾಗಿವೆ. ಒಂದು ಗಂಡು ಹುಲಿ ನಾಗರಹೊಳೆಯಿಂದ ಒಟ್ಟು 360 ಕಿ.ಮೀ.ನಷ್ಟು ಕ್ರಮಿಸಿ ವಲಸೆ ಬಂದಿದೆ. ಹಾಗೇ ಮತ್ತೊಂದು ಹೆಣ್ಣು ಹುಲಿಯು ಕಾಳಿ ಹುಲಿ ಸಂರಕ್ಷಿತ ಪ್ರದೇಶದಿಂದ ವಲಸೆ ಬಂದಿರುವುದಾಗಿ ಎನ್‌ಟಿಸಿಎ ಮತ್ತು ಡಬ್ಲ್ಯುಆರ್‌ಟಿಸಿ ಅಭಿಪ್ರಾಯ ವ್ಯಕ್ತಪಡಿಸಿದೆ. ಹಾಗೇ ಇದೇ ಮೊದಲ ಬಾರಿಗೆ ಒಂದು ಹುಲಿ 360 ಕಿ.ಮೀ. ದೂರ ಕ್ರಮಿಸುವ ಮೂಲಕ ಇತಿಹಾಸ ಸೃಷ್ಟಿಸಿದೆ ಎಂದು ಅವರು ತಿಳಿಸಿದ್ದಾರೆ.

2026 ರ ಮೇ ನಲ್ಲಿ ಹುಲಿ ಗಣತಿಗಾಗಿ ಅಂಕೋಲಾ ವಲಯದಲ್ಲಿ ನಡೆಸಿದ ಕ್ಯಾಮರಾ ಟ್ರ್ಯಾಪ್‌ನಲ್ಲಿ ಇದು ಸೆರೆಯಾಗಿದೆ. ಅಂಕೋಲಾ ವಲಯ ವ್ಯಾಪ್ತಿಯ ಸಮೀಪದಲ್ಲಿಯೇ ಈ ಎರಡು ಹುಲಿಗಳು ಪತ್ತೆಯಾಗಿರುವುದರಿಂದ ಅದು ಜತೆಯಾಗುವ ಸಾಧ್ಯತೆಯಿದೆ. ಒಟ್ಟಿನಲ್ಲಿ ಹುಲಿ ಸಂತತಿ ಏರಿಕೆಯಾಗಬೇಕು ಎನ್ನುವುದು ಪ್ರಾಣಿಪ್ರಿಯರ ಆಶಯವಾಗಿದೆ.

ಅಂಕೋಲಾ ವಲಯ ವ್ಯಾಪ್ತಿಯಲ್ಲಿ ಎರಡು ಹುಲಿಗಳು ಕಂಡುಬಂದಿರುವುದು ಹೆಮ್ಮೆಯ ಸಂಗತಿ. ಈ ಭಾಗದಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಹಸಿರು ಇರುವುದರಿಂದ ಅದು ದೂರದಿಂದಲೇ ಕ್ರಮಿಸಿ ಬಂದಿದೆ. ಪರಿಸರ ಸಮತೋಲನಕ್ಕೆ ಹುಲಿಗಳ ಸಂಖ್ಯೆಯು ಕೂಡ ಮಹತ್ವವಾದದ್ದು.

– **ಪ್ರಮೋದ ನಾಯಕ ವಲಯ ಅರಣ್ಯಾಧಿಕಾರಿ ಅಂಕೋಲಾ**

# 11ಕ್ಕೆ ನಮ್ಮಾಭಿಮಾನ ಸಮಾವೇಶ ಹಳೆಯ ಪಿಂಚಣಿ ಯೋಜನೆಗಾಗಿ ಧ್ವನಿ



• **ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು**

ಜು.09.ಬೆಂಗಳೂರಿನ ಅರಮನೆ ಮೈದಾನದ ತ್ರಿಪುರವಾಸಿನಿಯಲ್ಲಿ ಜುಲೈ 11ರಂದು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ವತಿಯಿಂದ ಹಮ್ಮಿಕೊಳ್ಳಲಾಗಿರುವ ನಮ್ಮಾಭಿಮಾನದ ಅಭಿನಂದನಾ ಸಮಾರಂಭಕ್ಕೆ ಸಕಲ ಸಿದ್ಧತೆಗಳು ಪೂರ್ಣಗೊಂಡಿದ್ದು, ಈ ಬೃಹತ್ ಸಮಾವೇಶದಲ್ಲಿ ರಾಜ್ಯದ ಮೂಲೆ ಮೂಲೆಗಳಿಂದಲೂ ಸರ್ಕಾರಿ ನೌಕರರು ಭಾಗವಹಿಸಲಿದ್ದಾರೆ ಎಂದು ಕ.ರಾ.ಸ.ನೌ.ಸಂ. ತಾಲ್ಲೂಕಾಧ್ಯಕ್ಷರು ಹಾಗೂ ವಿಭಾಗೀಯ ಉಪಾಧ್ಯಕ್ಷರಾದ ಚಂದ್ರಶೇಖರ ಹಿರೇಮಠ ಅವರು ಹೇಳಿದರು.

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಕ್ರಿಯಾಶೀಲ ರಾಜ್ಯ ಅಧ್ಯಕ್ಷರಾದ ಸಿ. ಎಸ್. ಷಡಾಕ್ಷರಿ ಅವರ ನೇತೃತ್ವದಲ್ಲಿ ನಡೆಯಲಿರುವ ಈ ಸಮಾರಂಭದಲ್ಲಿ, ರಾಜ್ಯದ ಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ್ ಮತ್ತು ಉಪ ಮುಖ್ಯಮಂತ್ರಿಗಳಾದ ಜಿ. ಪರಮೇಶ್ವರ್ ಅವರನ್ನು ಸನ್ಮಾನಿಸಿ ಅಭಿನಂದಿಸಲಾಗುವುದು.

ಈ ಸಮಾವೇಶವು ಕೇವಲ ಅಭಿನಂದನೆಗೆ ಸೀಮಿತವಾಗದೆ, ಸರ್ಕಾರಿ ನೌಕರರ ಬಹುದಿನಗಳ ಬೇಡಿಕೆಗಳಾದ 'ಹಳೆಯ ಪಿಂಚಣಿ ಯೋಜನೆಯನ್ನು ಪುನಃ ಜಾರಿಗೊಳಿಸುವುದು ಮತ್ತು 'ಕೇಂದ್ರ ಸರ್ಕಾರದ ಮಾದರಿ ವೇತನ ಶ್ರೇಣಿ'ಯನ್ನು ಅನುಷ್ಠಾನಗೊಳಿಸಬೇಕೆಂಬ ಬೃಹತ್ ಹಕ್ಕೊತ್ತಾಯವನ್ನು ಸರ್ಕಾರದ ಮುಂದೂಡಲಿದ್ದೇವೆ.

ಈ ಕಾರ್ಯಕ್ರಮಕ್ಕೆ ಆದಿಚುಂಚನಗಿರಿ ಮಠದ ಪೀಠಾಧ್ಯಕ್ಷರಾದ ಪರಮಪೂಜ್ಯ ಡಾ. ಶ್ರೀ ನಿರ್ಮಲಾನಂದನಾಥ ಮಹಾಸ್ವಾಮಿಗಳು ಹಾಗೂ ಸಿದ್ದಗಂಗಾ ಮಠಾಧ್ಯಕ್ಷರಾದ ಪರಮಪೂಜ್ಯ ಶ್ರೀ ಸಿದ್ದಲಿಂಗ ಮಹಾಸ್ವಾಮಿಗಳು ದಿವ್ಯ ಸಾನಿಧ್ಯ ವಹಿಸಿ ಆಶೀರ್ವಚನ ನೀಡಲಿದ್ದಾರೆ.

ಈ ಐತಿಹಾಸಿಕ ಸಮಾವೇಶವನ್ನು ಯಶಸ್ವಿಗೊಳಿಸಲು ರಾಯಚೂರು ಜಿಲ್ಲೆಯಿಂದಲೂ ಅಪಾರ ಸಂಖ್ಯೆಯ ಸರ್ಕಾರಿ ನೌಕರರು, ಶಿಕ್ಷಕರು ಹಾಗೂ ವಿವಿಧ ಇಲಾಖೆಯ ಸಿಬ್ಬಂದಿಗಳು ಪಾಲ್ಗೊಳ್ಳಲಿದ್ದಾರೆ. ಜಿಲ್ಲೆಯಿಂದ ಸುಮಾರು 1500ಕ್ಕೂ ಹೆಚ್ಚು ನೌಕರರು ಬೆಂಗಳೂರಿಗೆ ತೆರಳಲಿದ್ದು, ತಮ್ಮ ಬೇಡಿಕೆಗಳ ಈಡೇರಿಕೆಗಾಗಿ ಧ್ವನಿಗೂಡಿಸಲಿದ್ದಾರೆ ಎಂದು ತಿಳಿಸಿದರು.

# ಈಡಿಗ ಸಮಾಜದ ಒಳಿತಿಗಾಗಿ ಒಗ್ಗಟ್ಟಾದ ಸ್ವಾಮೀಜಿಗಳು



• **ಮಲ್ಲಮ್ಮ ನುಡಿ ವಾರ್ತೆಗೋಕರ್ಣ**

ಸಮಾಜದ ಒಳಿತಿಗಾಗಿ ಶ್ರಮಿಸಲು ಈಡಿಗ ಸಮಾಜದ ಬೆಂಗಳೂರಿನಲ್ಲಿ ಸೋಲೂರು ಮಠದ ಶ್ರೀ ವಿಖ್ಯಾತನಂದ ಸ್ವಾಮೀಜಿ ಅಧ್ಯಕ್ಷತೆಯಲ್ಲಿ ಡಾ. ಶ್ರೀ ಪ್ರಣವಾನಂದ ಸ್ವಾಮೀಜಿ, ಶ್ರೀ ಯೋಗಾನಂದ ಸ್ವಾಮೀಜಿ, ಶ್ರೀ ರೇಣುಕಾನಂದ ಸ್ವಾಮೀಜಿ, ಶ್ರೀ ಅರುಣಾನಂದ ಸ್ವಾಮೀಜಿ, ಶ್ರೀ ಭೀಮಾ ಶಂಕರ ಸ್ವಾಮೀಜಿ, ಶ್ರೀ ಶಂಕರಲಿಂಗ ಸ್ವಾಮೀಜಿ ಸೇರಿದಂತೆ ಸಮಾಜದ ಹಲವರು ಮುಖಂಡರು ಸಭೆಯಲ್ಲಿ ಭಾಗವಹಿಸಿ ಚರ್ಚೆ ನಡೆಸಿದರು.

ಈಡಿಗ ಸಮುದಾಯದ ಸಂಘಟನೆ, ಧಾರ್ಮಿಕ ಹಾಗೂ ಸಾಮಾಜಿಕ ಚಟುವಟಿಕೆಗಳ ಬಲವರ್ಧನೆ, ಯುವಜನರ ಸಬಲೀಕರಣ, ಸಮಾಜದ ಸರ್ವಾಂಗೀಣ ಅಭಿವೃದ್ಧಿಗೆ ಸಂಬಂಧಿಸಿದಂತೆ ವಿವಿಧ ವಿಷಯಗಳ ಕುರಿತು ಚರ್ಚೆ ನಡೆಸಿದರು. ಸಮಾಜದ ಏಕತೆ ಮತ್ತು ಪ್ರಗತಿಗಾಗಿ ಎಲ್ಲರೂ ಒಗ್ಗಟ್ಟಿನಿಂದ ಕಾರ್ಯನಿರ್ವಹಿಸುವ ಅಗತ್ಯವಿದೆ ಎಂದು ಸ್ವಾಮೀಜಿಯವರು ಅಭಿಪ್ರಾಯಪಟ್ಟರು. ಸಭೆಯಲ್ಲಿ ಜೆಪಿ ಪ್ರತಿಷ್ಠಾನದ ಸ್ಥಾಪಕ ಅಧ್ಯಕ್ಷ ಜೆ.ಪಿ. ಸುಧಾಕರ ಇತರರಿದ್ದರು.

# ಕೊಪ್ಪಳದ ಶ್ರೀ ಲಕ್ಷ್ಮಿ ಚಿತ್ರಮಂದಿರಕ್ಕೆ ಗ್ರಾಮಾಯಣ ಚಿತ್ರತಂಡ ಭೇಟಿ



• **ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ**

ರಾಜ್ಯಾದಾದ್ಯಂತ ಬಿಡುಗಡೆಯಾಗಿ ಪ್ರೇಕ್ಷಕ–ರಿಂದ ಉತ್ತಮ ಪ್ರತಿಕ್ರಿಯೆ ಪಡೆಯುತ್ತಿರುವ 'ಗ್ರಾಮಾಯಣ' ಚಿತ್ರದ ಪ್ರಚಾರದ ಅಂಗವಾಗಿ ನಾಯಕ ನಟ ವಿನಯ್ ರಾಜ್‌ಕುಮಾರ್ ಹಾಗೂ ಚಿತ್ರದ ನಿರ್ದೇಶಕ, ಚಿತ್ರತಂಡ ಇಂದು ಕೊಪ್ಪಳದ ಶ್ರೀ ಲಕ್ಷ್ಮಿ ಚಿತ್ರಮಂದಿರಕ್ಕೆ ಭೇಟಿ ನೀಡಿದರು.

ಚಿತ್ರಮಂದಿರಕ್ಕೆ ಆಗಮಿಸಿದ ವಿನಯ್ ರಾಜ್‌ಕುಮಾರ್ ಅವರನ್ನು ಅಭಿಮಾನಿಗಳು ಪಟಾಕಿ ಸಿಡಿಸಿ, ಹೂಮಾಲೆ ಹಾಗೂ ಘೋಷಣೆಗಳೊಂದಿಗೆ ಆತ್ಮೀಯವಾಗಿ ಸ್ವಾಗತಿಸಿದರು. ಚಿತ್ರ ವೀಕ್ಷಿಸಲು ಆಗಮಿಸಿದ್ದ ಪ್ರೇಕ್ಷಕರೊಂದಿಗೆ ಉದ್ದೇಶಿಸಿ ಮಾತನಾಡಿ ಚಿತ್ರದ ಬಗ್ಗೆ ವ್ಯಕ್ತವಾಗುತ್ತಿರುವ ಮೆಚ್ಚುಗೆಗೆ ಕೃತಜ್ಞತೆ ಸಲ್ಲಿಸಿದರು. ಉತ್ತಮ ಕಥೆ ಹಾಗೂ ಗ್ರಾಮೀಣ ಬದುಕಿನ ಸೊಗಡನ್ನು ಒಳಗೊಂಡಿರುವ 'ಗ್ರಾಮಾಯಣ' ಚಿತ್ರವನ್ನು ಕುಟುಂಬ ಸಮೇತರಾಗಿ ವೀಕ್ಷಿಸಿ ಬೆಂಬಲಿಸುವಂತೆ ಮನವಿ ಮಾಡಿದರು.

ಚಿತ್ರವನ್ನು ಮತ್ತೆ ಮತ್ತೆ ನೋಡಿ ಬೆಂಬಲಿಸುವಂತೆ ಮನವಿ ಮಾಡಿದ ಅವರು ಕನ್ನಡ ಚಿತ್ರಗಳನ್ನು ಹೆಚ್ಚು ಹೆಚ್ಚು ವೀಕ್ಷಿಸಿ ಪ್ರೋತ್ಸಾಹಿಸುವಂತೆ ಹೇಳಿದರು.

ಈ ಸಂದರ್ಭದಲ್ಲಿ ಚಿತ್ರಮಂದಿರದ ಮಾಲೀಕರಾದ ವಿಶ್ವನಾಥ್ ಮಹಾಂತಯ್ಯನ ಮಠ, ವೀರೇಶ್ ಮಹಾಂತಯ್ಯನ ಮಠ, ಹಿರಿಯ ಸಾಹಿತಿ ಹಾಗು ಚಲನಚಿತ್ರ ನಿರ್ಮಾಪಕ ಡಾ. ಮಹಾಂತೇಶ್ ಮಲ್ಲನಗೌಡರ, ಶಿವಮೂರ್ತಯ್ಯ ಮಹಾಂತಯ್ಯನ ಮಠ, ಚಿತ್ರಮಂದಿರದ ವ್ಯವಸ್ಥಾಪಕ ಶಿವಾನಂದಯ್ಯ ಉತ್ತಂಗಿ ಮಠ, ಚಿತ್ರತಂಡದ ಸದಸ್ಯರು, ಅಭಿಮಾನಿಗಳು ಉಪಸ್ಥಿತರಿದ್ದರು.

ಶ್ರೀ ಲಕ್ಷ್ಮಿ ಚಿತ್ರಮಂದಿರದಲ್ಲಿ ನೆರೆದಿದ್ದ ಅಭಿಮಾನಿಗಳು ವಿನಯ್ ರಾಜ್‌ಕುಮಾರ್ ಅವರೊಂದಿಗೆ ಸೆಲ್ಫಿ ತೆಗೆದುಕೊಂಡು, ಆಟೋಗ್ರಾಫ್ ಪಡೆದು ಸಂಭ್ರಮಿಸಿದರು. ಚಿತ್ರತಂಡದ ಭೇಟಿ ಚಿತ್ರಮಂದಿರದ ವಾತಾವರಣವನ್ನು ಇನ್ನಷ್ಟು ಉತ್ಸಾಹಭರಿತಗೊಳಿಸಿತು.

ಒಟ್ಟಾರೆಯಾಗಿ, 'ಗ್ರಾಮಾಯಣ' ಚಿತ್ರದ ಯಶಸ್ಸಿನ ಸಂಭ್ರಮದ ನಡುವೆ ಕೊಪ್ಪಳದ ಶ್ರೀ ಲಕ್ಷ್ಮಿ ಚಿತ್ರಮಂದಿರಕ್ಕೆ ಚಿತ್ರತಂಡ ನೀಡಿದ ಭೇಟಿ ಅಭಿಮಾನಿಗಳಿಗೆ ಸ್ಮರಣೀಯ ಕ್ಷಣವಾಗಿ ಪರಿಣಮಿಸಿತು.

# ಮಾವನನ್ನು ಬರ್ಬರವಾಗಿ ಹತ್ಯೆಗೈದ ಪ್ರಕರಣ:ಮೂವರು ಆರೋಪಿಗಳ ಬಂಧನ



• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ನಗರದ ಗುಗ್ಗರಹಟ್ಟಿ ಪ್ರದೇಶದಲ್ಲಿ ಪತ್ನಿ ಹಾಗೂ ಮಾವನನ್ನು ಬರ್ಬರವಾಗಿ ಹತ್ಯೆಗೈದ ಪ್ರಕರಣವನ್ನು ಎಪಿಎಂಸಿ ಯಾರ್ಡ್ ಪೊಲೀಸರು ತ್ವರಿತವಾಗಿ ಭೇದಿಸಿದ್ದು, ಪ್ರಕರಣಕ್ಕೆ ಸಂಬಂಧಿಸಿದ ಮೂವರು ಆರೋಪಿಗಳನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಸುಮನ್ ಡಿ. ಪೆನ್ನೇಕರ್, ಐಪಿಎಸ್ ತಿಳಿಸಿದರು.ನಗರದ ದುರ್ಗಮ್ಮಗುಡಿ ದೇವಸ್ಥಾನದ ಸಮೀಪದಲ್ಲಿರುವ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಚೇರಿಯಲ್ಲಿ ಗುರುವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜುಲೈ 7ರಂದು ನಡೆದ ದ್ವಿ–ಕೊಲೆ ಪ್ರಕರಣದ ತನಿಖೆಯ ವಿವರಗಳನ್ನು ಬಹಿರಂಗಪಡಿಸಿದರು.ಜುಲೈ 7ರಂದು ಮಧ್ಯಾಹ್ನ ಗುಗ್ಗರಹಟ್ಟಿ ಪ್ರದೇಶದಲ್ಲಿ ಶ್ರೀಮತಿ ನಾಗಲಕ್ಷ್ಮಿ (24) ಹಾಗೂ ಶ್ರೀನಿವಾಸ @ ವೆಂಕಟೇಶ್ (47) ಅವರನ್ನು ಮಾರಕಾಸ್ತ್ರಗಳಿಂದ ಹತ್ಯೆ ಮಾಡಲಾಗಿತ್ತು. ಈ ಕುರಿತು ಎಪಿಎಂಸಿ ಯಾರ್ಡ್ ಪೊಲೀಸ್ ಠಾಣೆಯಲ್ಲಿ ಗುನ್ನೆ ಸಂಖ್ಯೆ 137/2026ರಡಿ ಬಿಎನ್‌ಎಸ್ ಕಲಂ 103(1), 109 ಹಾಗೂ 3(5) ಅಡಿಯಲ್ಲಿ ಪ್ರಕರಣ ದಾಖಲಿಸಿ ತನಿಖೆ ಕೈಗೊಳ್ಳಲಾಗಿತ್ತು.ತನಿಖೆಯ ವೇಳೆ ಆರೋಪಿಗಳಾದ ತೇಜ (29), ವೆಂಕಟೇಶ್ (27) ಹಾಗೂ ಗುರುಶಂಕರ್ (50) ಅವರನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ. ಅಲ್ಲದೆ, ಕೃತ್ಯಕ್ಕೆ ಬಳಸಿದ್ದ ಮಾರಕಾಸ್ತ್ರ ಹಾಗೂ ಇತರೆ ಪ್ರಮುಖ ಸಾಕ್ಷ್ಯಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಎಸ್‌ಪಿ ತಿಳಿಸಿದರು.ಮೃತ ನಾಗಲಕ್ಷ್ಮಿ ಆರೋಪಿ ತೇಜನ ಪತ್ನಿಯಾಗಿದ್ದು, ಮೃತ ಶ್ರೀನಿವಾಸ @ ವೆಂಕಟೇಶ್ ಅವರು ತೇಜನ ಹೆಣ್ಣು ಕೊಟ್ಟ ಮಾವನಾಗಿದ್ದಾರೆ. ಸುಮಾರು ಏಳು ವರ್ಷಗಳ ಹಿಂದೆ ತೇಜ ಮತ್ತು ನಾಗಲಕ್ಷ್ಮಿ ವಿವಾಹವಾಗಿದ್ದು, ಅವರಿಗೆ ಇಬ್ಬರು ಮಕ್ಕಳಿದ್ದಾರೆ.ಪತ್ನಿಯ ಶೀಲದ ಬಗ್ಗೆ ಅನುಮಾನ ಹೊಂದಿದ್ದ ತೇಜ, ಮಾತುಕತೆ ನಡೆಸುವ ನೆಪದಲ್ಲಿ ನಾಗಲಕ್ಷ್ಮಿಯ ತಂದೆ–ತಾಯಿಯನ್ನು ಮನೆಗೆ ಕರೆಯಿಸಿಕೊಂಡಿದ್ದ. ಮಾತುಕತೆ ವೇಳೆ ವಾಗ್ವಾದ ತಾರಕಕ್ಕೇರಿದಾಗ ಆರೋಪಿಗಳು ಖಾರದ ಪುಡಿ ಎರಚಿ, ಬಳಿಕ ಮಾರಕಾಸ್ತ್ರಗಳಿಂದ ನಾಗಲಕ್ಷ್ಮಿ ಹಾಗೂ ಶ್ರೀನಿವಾಸ ಅವರ ಮೇಲೆ ಹಲ್ಲೆ ನಡೆಸಿ ಹತ್ಯೆಗೈದಿದ್ದಾರೆ ಎಂದು ಪ್ರಾಥಮಿಕ ತನಿಖೆಯಿಂದ ತಿಳಿದುಬಂದಿದೆ.ಈ ಘಟನೆಯಲ್ಲಿ ನಾಗಲಕ್ಷ್ಮಿಯ ತಾಯಿ ಗಾಯಗೊಂಡಿದ್ದು, ಚಿಕಿತ್ಸೆ ಪಡೆದು ಆಸ್ಪತ್ರೆಯಿಂದ ಬಿಡುಗಡೆಯಾಗಿದ್ದಾರೆ.ಪ್ರಕರಣದ ಸಮಗ್ರತನಿಖೆಗಾಗಿ ಆರೋಪಿಗಳನ್ನು ಪೊಲೀಸ್ ಕಸ್ಟಡಿಗೆ ಪಡೆಯಲಾಗುವುದು. ತನಿಖೆಯನ್ನು ಶೀಘ್ರ ಪೂರ್ಣಗೊಳಿಸಿ ನ್ಯಾಯಾಲಯಕ್ಕೆ ದೋಷಾರೋಪಣಾ ಪತ್ರ (ಚಾರ್ಜ್‌ಶೀಟ್) ಸಲ್ಲಿಸಲಾಗುವುದು. ಅಲ್ಲದೆ, ಪ್ರಕರಣದ ತ್ವರಿತ ವಿಚಾರಣೆಗೆ ನ್ಯಾಯಾಲಯಕ್ಕೆ ಮನವಿ ಸಲ್ಲಿಸಿ ಆರೋಪಿಗಳಿಗೆ ಶೀಘ್ರ ಶಿಕ್ಷೆಯಾಗುವಂತೆ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಸುಮನ್ ಡಿ. ಪೆನ್ನೇಕರ್ ತಿಳಿಸಿದರು.

# ಹೆಚ್‌ಪಿವಿ ಲಸಿಕಾ ಅಭಿಯಾನ ರಾಜ್ಯದಲ್ಲಿಯೇ ಜಿಲ್ಲೆಗೆ ಪ್ರಥಮ ಸ್ಥಾನ

• ಮಲ್ಲಮ್ಮ ನುಡಿ ವಾರ್ತೆ ವಿಜಯನಗರ(ಹೊಸಪೇಟೆ)

:ಹೆಣ್ಣು ಮಕ್ಕಳನ್ನು ಹೆಚ್‌ಪಿವಿ ಸೋಂಕಿನಿಂದ ರಕ್ಷಿಸಲು ಮತ್ತು ಗರ್ಭಕಂಠದ ಕ್ಯಾನ್ಸರ್ ತಡೆಗಟ್ಟಲು ಜಿಲ್ಲಾದ್ಯಂತ ನಡೆಸಲಾದ ತೀವ್ರ ಜಾಗೃತಿ ಅಭಿಯಾನ ಹಾಗೂ ಪರಿಣಾಮಕಾರಿ ಲಸಿಕಾ ವಿತರಣೆಯ ಫಲವಾಗಿ ಶೇಕಡಾ 95% ರಷ್ಟು ಯಶಸ್ವಿಯಾಗಿ ರಾಜ್ಯದಲ್ಲಿಯೇ ಜಿಲ್ಲೆಗೆ ಪ್ರಥಮ ಸ್ಥಾನದಲ್ಲಿದೆ.ಇದು ಜಿಲ್ಲೆಯ ಜನರ ಹಾಗೂ ಎಲ್ಲ ಇಲಾಖಾ ಅಧಿಕಾರಗಳ ಸಮನ್ವಯ ಸಹಕಾರ ದಿಂದ ಹೆಚ್‌ಪಿವಿ ಲಸಿಕಾ ಅಭಿಯಾನ ಯಶಸ್ವಿಯಾಗಲು ಕಾರಣ.ಈ ಹೆಚ್‌ಪಿವಿ ಲಸಿಕೆಯು ಹೊಸದೇನಲ್ಲ ಜಗತ್ತಿನಾದ್ಯಂತ ಈಗಾಗಲೇ 50 ಕೋಟಿ ಮಕ್ಕಳಿಗೆ ಲಸಿಕೆ ನೀಡಲಾಗಿದೆ. ವಿಶ್ವ ಆರೋಗ್ಯ ಸಂಸ್ಥೆ ಸಮಿತಿಯು ಲಸಿಕಾ ಸುರಕ್ಷತೆಯ ದತ್ತಾಂಶಗಳನ್ನು ಪರಿಶೀಲಿಸಿದ್ದು, ಹೆಚ್‌ಪಿವಿ ಲಸಿಕೆಯು ಸುರಕ್ಷವಾಗಿದೆ ಎಂದು ದೃಢಪಡಿಸಿದೆ.ಲಸಿಕೆಯು ಸಂಪೂರ್ಣ ಸುರಕ್ಷಿತ ಹಾಗೂ ಪರಿಣಾಮಕಾರಿಯಾಗಿದ್ದು ಇದು 14 ರಿಂದ 15ವರ್ಷದೊಳಗಿನ ಹೆಣ್ಣು ಮಕ್ಕಳನ್ನು ಗರ್ಭಕಂಠದ ಕ್ಯಾನ್ಸರ್ ಯಿಂದ ರಕ್ಷಿಸುತ್ತದೆ. ಲಸಿಕೆಯ ಅಭಿಯಾನ ಜಿಲ್ಲೆಯಲ್ಲಿ ಈಗಾಗಲೇ ಯಶಸ್ವಿಯಾಗಿ ಅನುಷ್ಠಾನಗೊಳಿಸಲಾಗಿದೆ. ಭಾರತದ ಮಹಿಳೆಯರಲ್ಲಿ ಕಂಡುಬರುವ ಕ್ಯಾನ್ಸರ್‌ಗಳಲ್ಲಿ ಗರ್ಭಕಂಠದ ಕ್ಯಾನ್ಸರ್ ಎರಡನೇ ಸ್ಥಾನದಲ್ಲಿದೆ. ಇದನ್ನು ತಡೆಗಟ್ಟಲು ಲಸಿಕೆ–ಯೇ ಹೆಚ್‌ಪಿವಿ ಲಸಿಕೆಯೇ ಏಕೈಕ ಮಾರ್ಗ. ಜಿಲ್ಲೆಯಾದ್ಯಂತ ನಡೆಯುತ್ತಿರುವ ಈ ಅಭಿಯಾನದಲ್ಲಿ ಮುಖ್ಯವಾಗಿ 14 ವರ್ಷದಿಂದ 15 ವರ್ಷದೊಳಗಿನ ಹೆಣ್ಣು ಮಕ್ಕಳಿಗೆ ಲಸಿಕೆಯನ್ನು ಸುಮಾರು 15,124 ಗುರಿ ಹೊಂದಲಾಗಿದೆ. ಜಿಲ್ಲೆಯ ಎಲ್ಲ ಸರ್ಕಾರಿ ಆರೋಗ್ಯ ಸಂಸ್ಥೆಗಳಲ್ಲಿ ಉಚಿತ ಲಸಿಕೆ ಗಾರ್ಡ್ ಸಿಲ್–4 ಅನ್ನು ಒಂದು ಡೋಸ್ ಪಡೆಯಬಹುದಾಗಿದೆ. ಈಗಾಗಲೇ 10,793 ಹೆಣ್ಣು ಮಕ್ಕಳು ಲಸಿಕೆ ನೀಡಲಾಗಿದೆ. ಗರ್ಭ ಕಂಠದ ಕ್ಯಾನ್ಸರ್ ತಡೆಗಟ್ಟಲು ಲಸಿಕೆ 90ರಷ್ಟು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಲಿದೆ ಎಂದು ಎಂದು ಜಿಲ್ಲಾಧಿಕಾರಿ ಕವಿತಾ ಎಸ್.ಮನ್ನಿಕೇರಿ ತಿಳಿಸಿದ್ದಾರೆ.

# ಪಡಿತರ ಚೀಟಿ ಇ-ಕೆವೈಸಿ ಜುಲೈ 15 ಕೊನೆಯ ದಿನ

• ಮಲ್ಲಮ್ಮ ನುಡಿ ವಾರ್ತೆ ವಿಜಯನಗರ(ಹೊಸಪೇಟೆ)

ಜುಲೈ.09:ಜಿಲ್ಲೆಯ ಪಡಿತರ ಚೀಟಿ ಫಲಾನುಭವಿಗಳು ಜುಲೈ 15ರೊಳಗಾಗಿ ಹತ್ತಿರದ ನ್ಯಾಯಬೆಲೆ ಅಂಗಡಿಗಳಲ್ಲಿ ಇ–ಕೆವೈಸಿ ಮಾಡಿಸಬೇಕು. ಈಗಾಗಲೇ ಇ–ಕೆವೈಸಿ ಕಾರ್ಯ ಪ್ರಗತಿಯಲ್ಲಿದ್ದು, ಜಿಲ್ಲೆಯ ಹರಪನಹಳ್ಳಿ ತಾಲೂಕಿನಲ್ಲಿ 7500, ಹಗರಿಬೊಮ್ಮನಹಳ್ಳಿ 5443, ಹೊಸಪೇಟೆ 5434, ಹಡಗಲಿ 3650, ಕೂಡ್ಲಿಗಿ 2977 ಹಾಗೂ ಕೊಟ್ಟೂರು 1258 ಸೇರಿದಂತೆ ಒಟ್ಟು 26262 ಪಡಿತರ ಚೀಟಿದಾರರು ಇ–ಕೆವೈಸಿ ಮಾಡಿಸಬೇಕಾಗಿದೆ. ಈ ಕುರಿತು ಅನೇಕ ಬಾರಿ ಪತ್ರಿಕಾ ಪ್ರಕಟಣೆ ಮತ್ತು ಸ್ಥಳೀಯವಾಗಿ ವ್ಯಾಪಕ ಪ್ರಚಾರವನ್ನು ನೀಡಿದ್ದರೂ ಸಹ ಈ ವರೆಗೂ ಇ–ಕೆವೈಸಿ ಮಾಡಿಸದೇ ಬಾಕಿ ಉಳಿದಿವೆ.

# ಚುನಾವಣಾ ಪ್ರಕ್ರಿಯೆ ಪಾರದರ್ಶಕತೆಗೆ ದೋಷಮುಕ್ತ ಮತದಾರರ ಪಟ್ಟಿ ಅಗತ್ಯ: ಸಿಇಒ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ




ಚುನಾವಣಾ ಪ್ರಕ್ರಿಯೆಯಲ್ಲಿ ಯಾವುದೇ ಲೋಪದೋಷಗಳಿಲ್ಲದ,ದೋಷಮುಕ್ತ ಮತದಾರರ ಪಟ್ಟಿಯನ್ನು ಸಿದ್ಧಪಡಿಸುವುದು ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಅಭಿಯಾನದ ಮುಖ್ಯ ಉದ್ದೇಶವಾಗಿದೆ ಎಂದು ಜಿಲ್ಲಾ ಸ್ವೀಪ್ ಸಮಿತಿಯ ಅಧ್ಯಕ್ಷರೂ ಆದ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಅವರು ಹೇಳಿದರು.ಜಿಲ್ಲಾಡಳಿತ,ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ನಗರದ ನಂದಿ ಪಿಯು ಕಾಲೇಜು ಸಭಾಂಗಣದಲ್ಲಿ ಗುರುವಾರ ಆಯೋಜಿಸಿದ್ದ 'ಎಸ್‌ಐಆರ್' ವಿಶೇಷ ಜಾಗೃತಿ ಅಭಿಯಾನದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ದೇಶದ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸಲು ಮತ್ತು ಮುಂಬರುವ ಚುನಾವಣೆಗಳಲ್ಲಿ ಯುವಕರ ಪಾತ್ರವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಚುನಾವಣಾ ಆಯೋಗವು ಕಾಲೇಜು ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸಲು 'ವಿಶೇಷ ಸಮಗ್ರ ಪರಿಷ್ಕರಣೆ' ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಎಸ್‌ಐಆರ್ ಪ್ರಕ್ರಿಯೆಯಲ್ಲಿ ಅರ್ಹತೆ ಪಡೆಯಲಿರುವ ಹೊಸ ಯುವ ಮತದಾರರನ್ನು ಗುರುತಿಸಿ ಪಟ್ಟಿಗೆ ಸೇರಿಸುವುದು. ಹಿಂದೆ ನಡೆದಿರುವಂತೆ ಒಬ್ಬರೇ ವ್ಯಕ್ತಿ ಹಲವು ಬಾರಿ ಮತದಾನ ಮಾಡುವುದು ಅಥವಾ ಮೃತಪಟ್ಟವರ ಹೆಸರಿನಲ್ಲಿ ಮತದಾನವಾಗುವುದನ್ನು ತಡೆಯಲು ಹಳೆಯ ಮತದಾರರ ವಿವರಗಳನ್ನು ಕಟ್ಟುನಿಟ್ಟಾಗಿ ಮರುಪರಿಶೀಲಿಸಲಾಗುತ್ತದೆ ಎಂದರು.

ಸದ್ಯದಲ್ಲೇ ಮತದಾನದ ವಯಸ್ಸನ್ನು ತಲುಪಲಿರುವ ಕಾಲೇಜು ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸಲು ಪ್ರತಿ ಕಾಲೇಜಿನಲ್ಲೂ 'ಮತದಾರರ ಸಾಕ್ಷರತಾ ಕ್ಲಬ್' ಅನ್ನು ಸ್ಥಾಪಿಸಲಾಗಿದೆ. ರಾಜಕೀಯ ವಿದ್ಯಮಾನಗಳು ಮತ್ತು ಚುನಾವಣಾ ಪ್ರಕ್ರಿಯೆಗಳಿಂದ ಯುವಕರು ದೂರ ಉಳಿಯಬಾರದು, ಬದಲಿಗೆ ಪ್ರಜಾಪ್ರಭುತ್ವದ ಸಕ್ರಿಯ ಪಾಲುದಾರರಾಗಬೇಕು ಎಂಬುದು ಈ ಕ್ಲಬ್‌ನ ಉದ್ದೇಶವಾಗಿದೆ ಎಂದು ತಿಳಿಸಿದರು.

ವಿದ್ಯಾರ್ಥಿಗಳು ಕೇವಲ ತಾವಷ್ಟೇ ಜಾಗೃತರಾಗುವುದಲ್ಲದೆ, ತಮ್ಮ ಕುಟುಂಬದ ಯಾವುದೇ ಅರ್ಹ ಸದಸ್ಯರ ಹೆಸರು ಸೂಕ್ತ ದಾಖಲೆಗಳ ಕೊರತೆಯಿಂದಾಗಿ ಮತದಾರರ ಪಟ್ಟಿಯಿಂದ ಹೊರಗುಳಿಯದಂತೆ ನೋಡಿಕೊಳ್ಳುವ ಜವಾಬ್ದಾರಿಯನ್ನೂ ಹೊಂದಬೇಕು ಎಂದು ಅವರು ತಿಳಿಸಿದರು.

*ಎಸ್‌ಐಆರ್ ಗಣತಿ ನಮೂನೆ ಭರ್ತಿ ಮಾಡುವ ವಿಧಾನ ತಿಳಿಸಿದ ಜಿಪಂ ಸಿಇಒ:*

ಕುಟುಂಬದ ಹಿರಿಯರು ಅಥವಾ ಪೋಷಕರು ಕಳೆದ 24–25 ವರ್ಷಗಳ ಹಿಂದೆ (2002ರ ಅವಧಿಯಲ್ಲಿ) ಭಾರತದ ಯಾವುದೇ ಭಾಗದಲ್ಲಿ (ಕರ್ನಾಟಕ, ಆಂಧ್ರಪ್ರದೇಶ, ಮಣಿಪುರ ಸೇರಿದಂತೆ ಯಾವುದೇ ರಾಜ್ಯದಲ್ಲಿ) ಮತ ಚಲಾಯಿಸಿದ್ದರೆ, ಆ ವಿವರಗಳನ್ನು ಈ ಅರ್ಜಿಯ ಎಡಭಾಗದಲ್ಲಿ ಭರ್ತಿ ಮಾಡಬೇಕಾಗುತ್ತದೆ.

ಪ್ರಸ್ತುತ 21ರಿಂದ 23 ವರ್ಷದೊಳಗಿನ ಯುವಕ–ಯುವತಿಯರು 2002ರ ಅವಧಿಯಲ್ಲಿ ಸಣ್ಣ ಮಕ್ಕಳಾಗಿದ್ದರಿಂದ ಮತ ಚಲಾಯಿಸಿರುವುದಿಲ್ಲ. ಅಂತಹವರು ಅರ್ಜಿಯ ಬಲಭಾಗದಲ್ಲಿ ತಮ್ಮ ಪೋಷಕರ (ತಂದೆ, ತಾಯಿ, ಅಜ್ಜ ಅಥವಾ ಅಜ್ಜಿ) ವಿವರಗಳನ್ನು ಭರ್ತಿ ಮಾಡಿ, ತಮ್ಮ ರಕ್ತ ಸಂಬಂಧಿ ಕುಟುಂಬಸ್ಥರು ಭಾರತದ ಯಾವುದೇ ಭಾಗದಲ್ಲಿ ಮತದಾರರಾಗಿದ್ದರು ಎಂಬುದನ್ನು ಖಚಿತಪಡಿಸಬೇಕು ಎಂದು ವಿದ್ಯಾರ್ಥಿಗಳಿಗೆ ಮನವರಿಕೆ ಮಾಡಿಕೊಟ್ಟರು.

*ಜುಲೈ 29 ಕೊನೆಯ ದಿನ:*

ಈ ವಿಶೇಷ ಪರಿಷ್ಕರಣಾ ಪ್ರಕ್ರಿಯೆಯಲ್ಲಿ ಅರ್ಜಿಯನ್ನು ಭರ್ತಿ ಮಾಡಿ ಸಲ್ಲಿಸಲು ಜುಲೈ 29 ಕೊನೆಯ ದಿನವಾಗಿದೆ. ನಿಗದಿತ ಅವಧಿಯೊಳಗೆ ಸಾರ್ವಜನಿಕರು ಅಥವಾ ಅವರ ಪೋಷಕರು ಈ ಫಾರ್ಮ್ ಅನ್ನು ಸಲ್ಲಿಸದಿದ್ದರೆ, ಅವರ ಹೆಸರನ್ನು ಮತದಾರರ ಪಟ್ಟಿಯಿಂದಲೇ ಕೈಬಿಡುವ ಸಾಧ್ಯತೆ ಇರುತ್ತದೆ. ಹೆಸರು ಪಟ್ಟಿಯಿಂದ ಹೊರಬಿದ್ದರೆ ಮುಂಬರುವ ಚುನಾವಣೆಗಳಲ್ಲಿ ಮತದಾನದ ಹಕ್ಕನ್ನು ಕಳೆದುಕೊಳ್ಳಬೇಕಾಗುತ್ತದೆ ಎಂದು ತಿಳಿಸಿದರು.

ಒಂದು ವೇಳೆ ಬಿಎಲ್‌ಒ ನಿಮ್ಮ ಮನೆಗೆ ಭೇಟಿ ನೀಡದಿದ್ದರೆ, ಅವರಿಗಾಗಿ ಕಾಯುವ ಅಗತ್ಯವಿಲ್ಲ. ಚುನಾವಣಾ ಆಯೋಗದ ಅಧಿಕೃತ ಮೊಬೈಲ್ ಆಪ್ ಆದ ಇಸಿಐ ನೆಟ್ ಅನ್ನು ಗೂಗಲ್ ಪ್ಲೇ ಸ್ಟೋರ್‌ನಿಂದ ಡೌನ್‌ಲೋಡ್ ಮಾಡಿಕೊಂಡು, ಆನ್‌ಲೈನ್ ಮೂಲಕವೇ ಈ ಫಾರ್ಮ್ ಅನ್ನು ಸುಲಭವಾಗಿ ಸಲ್ಲಿಸಬಹುದು ಎಂದು ಹೇಳಿದರು.

ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಶಶಿಕಾಂತ್ ಶಿವಪುರೆ ಅವರು ಮಾತನಾಡಿ, ದೇಶದ ಪ್ರತಿಯೊಬ್ಬ ನಾಗರಿಕನಿಗೂ ಮತದಾನದ ಹಕ್ಕು ಅತ್ಯಂತ ಪವಿತ್ರವಾದದ್ದು. ಈ ನಿಟ್ಟಿನಲ್ಲಿ ಅರ್ಹ ಮತದಾರರು ತಮ್ಮ ಹೆಸರನ್ನು ಮತದಾರರ ಪಟ್ಟಿಗೆ ಸೇರಿಸಲು ಜುಲೈ 29 ರಿಂದ ಫಾರ್ಮ್ ನಂಬರ್ 6 ವಿತರಣೆ ಆರಂಭವಾಗಲಿದ್ದು, ಸಾರ್ವಜನಿಕರು ಇದನ್ನು ಪಡೆದು ತಮ್ಮ ಹೆಸರನ್ನು ಮತದಾರರ ಪಟ್ಟಿಯಲ್ಲಿ ನೋಂದಾಯಿಸಿಕೊಳ್ಳಬಹುದಾಗಿದೆ ಎಂದು ತಿಳಿಸಿದರು.ಭಾರತೀಯ ನಾಗರಿಕರಾಗಿ ನಮ್ಮ ಹಕ್ಕನ್ನು ಚಲಾಯಿಸಲು ಮತದಾರರ ಗುರುತಿನ ಚೀಟಿ ಅತ್ಯಗತ್ಯ. ಹಾಗಾಗಿ ಯಾವುದೇ ಕಾರಣಕ್ಕೂ ನಿಮ್ಮ ಕುಟುಂಬದ ಅರ್ಹ ಸದಸ್ಯರ ಹೆಸರುಗಳು ಮತದಾರರ ಪಟ್ಟಿಯಿಂದ ಕೈಬಿಟ್ಟು ಹೋಗದಂತೆ ಎಚ್ಚರ ವಹಿಸಿ, ಜುಲೈ 29 ರಿಂದ ಆರಂಭವಾಗುವ ಈ ಪ್ರಕ್ರಿಯೆಯ ಸದುಪಯೋಗ ಪಡೆದುಕೊಳ್ಳಿ ಎಂದು ಮನವಿ ಮಾಡಿದರು.

ಜಿಲ್ಲಾ ಮಟ್ಟದ ಮಾಸ್ಟರ್ ತರಬೇತುದಾರರಾದ ಶಿವಲಿಂಗ ರೆಡ್ಡಿ ಹಾಗೂ ಅಕ್ಕಿ ಮಲ್ಲಿಕಾರ್ಜುನ ಅವರು ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಿ ಎಸ್‌ಐಆರ್ ಪ್ರಕ್ರಿಯೆ ಕುರಿತು ಸವಿವರವಾದ ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಹನುಮಂತರಾವ್, ನೋಡಲ್ ಅಧಿಕಾರಿ ಕೆ.ನಾಗೀರೆಡ್ಡಿ, ನಂದಿ ಪಿಯು ಕಾಲೇಜಿನ ಪ್ರಾಂಶುಪಾಲರುಗಳಾದ ಜಗದೀಶ್ ಬಾಬು, ಅನಿತಾ ಸೇರಿದಂತೆ ಕಾಲೇಜಿನ ಬೋಧಕ–ಬೋಧಕೇತರ ಸಿಬ್ಬಂದಿ, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಅಂಗನವಾಡಿ ಮಕ್ಕಳಿಗೆ ಅಕ್ಷರಭ್ಯಾಸ ಹಾಗೂ ಒಂದನೇ ತರಗತಿಗೆ ಹೋಗುವ 10 ಮಕ್ಕಳಿಗೆ ಬೀಳ್ಕೊಡುಗೆ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ



ಜಿಲ್ಲೆ ಕೊಪ್ಪಳ ತಾಲೂಕಿನ ಹಿರೇ ಸುಳಿಕೇರಿ ತಾಂಡಾದಲ್ಲಿ ಇದು ಕೊಪ್ಪಳ ಯೋಜನೆ ಅಡಿಯಲ್ಲಿ ಇಂದು ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಹಾಗೂ ಕಲಿಕಾ ಟಾಟಾ ಟ್ರಸ್ಟ್‌ಸಯೋಗದೊಂದಿಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ. ಅಂಗನವಾಡಿಗೆ ಪ್ರವೇಶವಾಗುವ ಮಕ್ಕಳಿಗೆಅಕ್ಷರಭ್ಯಾಸ ಮಾಡಿಸಲಾಯಿತು. ಅಂಗನವಾಡಿಯಲ್ಲಿ ಮೂರು ವರ್ಷ ಶಾಲಾ ಪೂರ್ವಶಿಕ್ಷಣಅಧ್ಯಯನ ಮಾಡಿ ಒಂದನೇ ತರಗತಿಗೆ ಹೋಗುವಮಕ್ಕಳಿಗೆ ಬಿಳ್ಕೊಡುಗೆ ಕಾರ್ಯಕ್ರಮ ಮಾಡಲಾಯಿತು.ಸದರಿ ಕಾರ್ಯಕ್ರಮದಲ್ಲಿ ಮಕ್ಕಳಿಗೆ ಅಕ್ಷರಭ್ಯಾಸ ಅತಿಥಿಗಳಿಂದ ಮಾಡಿಸಲಾಯಿತು.ಮತ್ತು ಒಂದನೇ ತರಗತಿಗೆ ಹೋಗುವ ಮಕ್ಕಳು ಪ್ರಸ್ತುತ ಇಲ್ಲಿಯವರೆಗೆ ಅಂಗನವಾಡಿಯಲ್ಲಿ ಕಲಿತ ಚಟುವಟಿಕೆಗಳನ್ನು ಆಕಾರಗಳು. ಬಣ್ಣಗಳು. ಅಂಕಿಗಳು. ಅಂಗನವಾಡಿ ನಿಯಮಗಳು. ಶಿಶು ಗೀತೆಗಳು. ಚಿಕ್ಕದು ದೊಡ್ಡದು. ಭೌತಿಕ ಚಟುವಟಿಕೆ ಹಾಗೂ ಅಂಕಿಗಳು ಕುರಿತುಮಕ್ಕಳಿಂದ ಚಟುವಟಿಕೆ ಮಾಡಿಸಲಾಯಿತು. ಕಾರ್ಯಕ್ರಮಕ್ಕೆ ಶಾಲಾಪೂರ್ವ ಶಿಕ್ಷಣದ ಕುರಿತು ಮಾಹಿತಿ ನೀಡಿ ಮಕ್ಕಳು ಚಟುವಟಿಕೆ ಆಧಾರಿತ ಶಿಕ್ಷಣವನ್ನು ನೀಡುವಲ್ಲಿ ಶಾಲಾ ಪೂರ್ವ ಶಿಕ್ಷಣ ಯಶಸ್ವಿ ಕಾರ್ಯಕ್ರಮ ಆಗಿರುತ್ತದೆ ಮಕ್ಕಳಿಗೆ ಅಂಗನವಾಡಿ ಕೇಂದ್ರವು ಭದ್ರಬುನಾದಿಯಾಗಿ ಕೆಲಸ ನಿರ್ವಹಿಸುತ್ತದೆ ಎಂದು ಜಿಲ್ಲಾ ಸಂಪನ್ಮೂಲ ವ್ಯಕ್ತಿಗಳು ಹೇಳಿದರು. ಎಲ್ಲ ಮಕ್ಕಳು ಚಟುವಟಿಕೆಯಿಂದ ಭಾಗವಹಿಸಿದರು ಶಾಲಾ ಮುಖ್ಯೋಪಾಧ್ಯಾಯರು ನಾವು ಕಲಿಯುವಾಗ ಯಾವುದೇ ಚಟುವಟಿಕೆಯನ್ನು ಮಾಡುತ್ತಿರಲಿಲ್ಲ ಇಂದಿನ ಮಕ್ಕಳು ಕಂಪ್ಯೂಟರ್‌ನಂತೆ ಉತ್ತರವನ್ನು ನೀಡುತ್ತಾರೆ ಎಂದರು. ಅಂಗನವಾಡಿಯಲ್ಲಿ ಕಲಿತ ಮಕ್ಕಳು ಒಂದನೇ ತರಗತಿಗೆ ಬಂದಾಗ ಧೈರ್ಯವಾಗಿ ಉತ್ತರಿಸುವ ಮತ್ತು ಪ್ರತಿದಿನ ಶಾಲೆಗೆ ಬರುವ ಹವ್ಯಾಸವನ್ನು ರೂಡಿಸಿಕೊಂಡಿದ್ದಾರೆ ಇದು ನಮಗೆಬಹಳ ಖುಷಿಯನ್ನು ತಂದುಕೊಡುತ್ತದೆ. ಮಕ್ಕಳು ತೊದಲು ನುಡಿಯಲ್ಲಿ ಚಟುವಟಿಕೆಗಳನ್ನು ಮಾಡುವುದನ್ನು ನೋಡಿದಾಗ ಬಹಳ ಖುಷಿ ಆಗುತ್ತದೆ ಎಂದು ಹೇಳಿದರು. ಪಾಲಕರು ಕೂಡ ಇನ್ನು ಮೇಲೆ ತಪ್ಪದೇ ಸಹಾಯಕಿ ಅಂಗನವಾಡಿಗೆ ಕರೆದು–ಕೊಂಡು ಹೋಗುವ ಮೊದಲು ಮಕ್ಕಳನ್ನು ಶಾಲೆಗೆ ತಯಾರಿ ಮಾಡಿ ಕಳಿಸುತ್ತೇವೆ ಎಂದು ಸಭೆಯಲ್ಲಿ ಹೇಳಿಕೊಂಡರು. ಕಾರ್ಯಕ್ರಮದಲ್ಲಿ ಮೇಲ್ವಿಚಾರಕರು ಕಾರ್ಯಕ್ರಮ ಕುರಿತು ನಿರೂಪಣೆ ಮಾಡಿದರು ಅಂಗನವಾಡಿ ಶಿಕ್ಷಕಿಯರು ಮತ್ತು ಸಹಾಯಕಿಯರು ಮುಖ್ಯೋಪಾಧ್ಯಾಯರು ಶಾಲಾ ಅಧ್ಯಕ್ಷರು ಬಾಲ ವಿಕಾಸ ಕಮಿಟಿ ಅಧ್ಯಕ್ಷರು ಭಾಗವಹಿಸಿದ್ದರು. ಕಾರ್ಯಕ್ರಮದಲ್ಲಿ ಪ್ರಾಥಮಿಕ ಶಾಲಾ ಮುಖ್ಯ ಗುರುಗಳು ಹನುಮಂತಪ್ಪ ಭಾಗವಹಿಸಿದ್ದರು. ಪ್ರಾಥಮಿಕ ಶಾಲಾ ಎಸ್ ಡಿ ಎಂ ಸಿ ಅಧ್ಯಕ್ಷರು ಕೃಷ್ಣಪ್ಪ. ಮೇಲ್ವಿಚಾರಕರು ಮಂಜುಳಾ ಕುಂಬಾರ್ ಜಿಲ್ಲಾ ಸಂಪನ್ಮೂಲ ವ್ಯಕ್ತಿ ಸಿದ್ದಪ್ಪ ಕುರಿ . ಅಂಗನವಾಡಿ ಕಾರ್ಯಕರ್ತರು ಮತ್ತು ಸಹಾಯಕರು ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲಾಯಿತು..

# ಸುರಭೀ ನಶಾ ಮುಕ್ತ ಕೇಂದ್ರದಲ್ಲಿ ಮಾದಕ ದ್ರವ್ಯ , ಕಳ್ಳ ಸಾಗಣೆ ವಿರೋಧಿ ದಿನಾಚರಣೆ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ



ನಗರದ ಸುರಭೀ ನಶಾ ಮುಕ್ತ ಕೇಂದ್ರದಲ್ಲಿ ಮಾದಕ ದ್ರವ್ಯ ವಿರೋಧ ಹಾಗೂ ಕಳ್ಳ ಸಾಗಣೆ ವಿರೋಧಿ ದಿನವನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.

ಕಾರ್ಯಕ್ರಮದ ಮುಖ್ಯ ಉದ್ದೇಶ ಮಾದಕ ವಸ್ತುಗಳ ದುಷ್ಪರಿಣಾಮಗಳ ಕುರಿತು ಸಾರ್ವಜನಿಕರಲ್ಲಿ ಹಾಗೂ ಚಿಕಿತ್ಸೆಯಲ್ಲಿರುವ ಫಲಾನುಭವಿಗಳಲ್ಲಿ ಜಾಗೃತಿ ಮೂಡಿಸುವುದಾಗಿತ್ತು. ಜೊತೆಗೆ ಮಾದಕ ವಸ್ತುಗಳ ಕಳ್ಳ ಸಾಗಣೆಯನ್ನು ತಡೆಗಟ್ಟುವಲ್ಲಿ ಪ್ರತಿಯೊಬ್ಬ ನಾಗರಿಕನ ಜವಾಬ್ದಾರಿಯ ಕುರಿತು ಅರಿವು ಮೂಡಿಸಲಾಯಿತು.ಕಾರ್ಯಕ್ರಮದಲ್ಲಿ ಮಾತನಾಡಿದ ಗಣ್ಯರು, ಮಾದಕ ವಸ್ತುಗಳ ಕಳ್ಳ ಸಾಗಣೆ ಸಮಾಜದ ನೆಮ್ಮದಿಗೆ ಮತ್ತು ಯುವಜನರ ಭವಿಷ್ಯಕ್ಕೆ ಗಂಭೀರ ಅಪಾಯವಾಗಿದ್ದು, ಈ ದುಷ್ಟ ಜಾಲವನ್ನು ನಿರ್ಮೂಲನೆ ಮಾಡಲು ಸಾರ್ವಜನಿಕರ ಸಹಕಾರ, ಜಾಗೃತಿ ಹಾಗೂ ಕಾನೂನು ಪಾಲನೆ ಅತ್ಯಗತ್ಯ ಎಂದು ತಿಳಿಸಿದರು. ವ್ಯಸನಮುಕ್ತ ಸಮಾಜ ನಿರ್ಮಾಣಕ್ಕೆ ಪ್ರತಿಯೊಬ್ಬರೂ ಕೈಜೋಡಿಸಬೇಕೆಂದು ಕರೆ ನೀಡಿದರು.ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಕೊಪ್ಪಳ ಜಿಲ್ಲಾ ಕಾರಾಗೃಹ ಅಧೀಕ್ಷಕ ಶ್ರೀ ಅಂಬರೀಷ್ ಪೂಜಾರಿ, ಕಾರಾಗೃಹದ ಆಪ್ತ ಸಮಾಲೋಚಕ ಶ್ರೀ ಅಡಿವೆಪ್ಪ ಆವೋಜಿ, ಹಾಗೂ ಮಹಿಳಾ ಧ್ವನಿ ಸಂಸ್ಥೆಯ ಸಂಸ್ಥಾಪಕಿ ಶ್ರೀಮತಿ ಪ್ರಿಯದರ್ಶಿನಿ ಮುಂಡರಗಿಮಠ,ವಕೀಲೆ ಶ್ರೀಮತಿ ಶೋಭಾ ನಾಲವಾಡ ಭಾಗವಹಿಸಿ ಮಾದಕ ವ್ಯಸನ ತಡೆ ಮತ್ತು ಸಮಾಜದ ಜವಾಬ್ದಾರಿಗಳ ಕುರಿತು ಉಪಯುಕ್ತ ಮಾಹಿತಿಯನ್ನು ಹಂಚಿಕೊಂಡರು.ಸುರಭೀ ನಶಾ ಮುಕ್ತ ಕೇಂದ್ರದ ಯೋಜನಾ ನಿರ್ದೇಶಕ ಭರಮಪ್ಪ ಹಾಗೂ ಸಿಬ್ಬಂದಿ ವರ್ಗ ಹಾಗೂ ಫಲಾನುಭವಿಗಳು ಕಾರ್ಯಕ್ರಮದಲ್ಲಿ ಸಕ್ರಿಯವಾಗಿ ಪಾಲ್ಗೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

# ತೊಗರಿ ಮತ್ತು ಹತ್ತಿ ಬೆಳೆಯ ವಿಮೆ ಕಂತು ತುಂಬಲು 31 ರಂದು ಕೊನೆಯ ದಿನ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಜೇವರ್ಗಿ ಹಾಗೂ ಯಡ್ರಾಮಿ ತಾಲೂಕುಗಳಲ್ಲಿ 2026ರ ಮುಂಗಾರು ಹಂಗಾಮಿಗೆ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ (ವಿಮಾ) ಯೋಜನೆ ಅನುಷ್ಠಾನಗೊಳಿಸಲು ಇಂಡಸ್‌ಯಿಂಡ ಜನರಲ್ ಇನ್ಸುರೆನ್ಸ(IndusInd Geeral Insurance) ವಿಮಾ ಸಂಸ್ಥೆಯನ್ನು ನಿಗದಿಪಡಿಸಲಾಗಿದೆ ಎಂದು ಜೇವರ್ಗಿ ಸಹಾಯಕ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

# ಸುಭಾಷ್ ಗೈದನಕರ್‌ಗೆ ಬಿಳ್ಕೋಡುಗೆ




• ಮಲ್ಲಮ್ಮ ನುಡಿ ವಾರ್ತೆಬಸವಕಲ್ಯಾಣ

ತಾಲೂಕಿನ ಸರ್ಕಾರಿ (RMSA) ಪ್ರೌಢಶಾಲೆ ಯಲ್ಲದಗುಂಡಿ ಯಿಂದ ವರ್ಗಾವಣೆಯಾದ ಶಿಕ್ಷಕರಾದ ಸುಭಾಷ್ ಗೈದನಕರ್ ರವರ ಬಿಳ್ಕೋಡುಗೆ ಸಮಾರಂಭದಲ್ಲಿ ಕ.ರಾ.ಪ್ರೌ.ಶಾ.ಸ.ಶಿ ಸಂಘ ತಾಲೂಕ ಘಟಕ ಬಸವಕಲ್ಯಾಣ ಹಾಗೂ ಹುಲಸೂರ ವತಿಯಿಂದ ಸನ್ಮಾನಿಸಲಾಯಿತು .ಎರಡು ತಾಲೂಕಿನ.ಅಧ್ಯಕ್ಷರಾದ ವಿಜಯಕುಮಾರ ಮಾನೆ.ಸೂರ್ಯಕಾಂತ.ಅಡಕೆ.ಸಂಘದ ಸದ್ಯ ಸರು.ಶಾಲಾ ಮುಖ್ಯಗುರು.ಸುರೇಖಾ ಉಪಾಸೆ.ಸಿಬ್ಬಂಧಿ ವರ್ಗ ಉಪಸ್ಥಿತರಿದ್ದರು.

# ಉಚಿತ ಫ್ಯಾಷನ್ ಡಿಸೈನಿಂಗ್ ಮತ್ತು ಉದ್ಯಮಶೀಲತಾ ತರಬೇತಿ: ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಕರ್ನಾಟಕ ಸರ್ಕಾರ ಹಾಗೂ ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮದ ಪ್ರಾಯೋಜಕತ್ವದಲ್ಲಿ, ಬಳ್ಳಾರಿಯ ಕರ್ನಾಟಕ ಉದ್ಯಮಶೀಲತಾ ಅಭಿವೃದ್ಧಿ ಕೇಂದ್ರ (ಸಿಡಾಕ್) ವತಿಯಿಂದ ಸ್ವಯಂ ಉದ್ಯೋಗ ಪ್ರಾರಂಭಿಸಲು ಆಸಕ್ತಿ ಹೊಂದಿರುವ ಪರಿಶಿಷ್ಟ ಪಂಗಡದ ಮಹಿಳಾ ಫಲಾನುಭವಿಗಳು ಹಾಗೂ ಯುವನಿಧಿ ಯೋಜನೆಯ ಫಲಾನುಭವಿಗಳಿಗಾಗಿ 24 ದಿನಗಳ ಉಚಿತ 'ಫ್ಯಾಷನ್ ಡಿಸೈನಿಂಗ್' ವಲಯಾಧಾರಿತ ಉದ್ಯಮಶೀಲತಾಭಿವೃದ್ಧಿ ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಫ್ಯಾಷನ್ ಡಿಸೈನಿಂಗ್ ಕುರಿತು ಪ್ರಾಯೋಗಿಕ ಮತ್ತು ಸಿದ್ಧಾಂತ ತರಬೇತಿಯೊಂದಿಗೆ, ಉದ್ಯಮಶೀಲತೆಯ ಗುಣಲಕ್ಷಣಗಳು, ಸ್ವಯಂ ಉದ್ಯೋಗ ಆರಂಭಿಸುವ ಹಂತಗಳು, ಸರ್ಕಾರದ ಯೋಜನೆಗಳು, ಬ್ಯಾಂಕ್ ವ್ಯವಹಾರ, ಸಾಲ ಹಾಗೂ ಹಣಕಾಸು ಸೌಲಭ್ಯಗಳು, ಲೆಕ್ಕಪತ್ರ ನಿರ್ವಹಣೆ ಮತ್ತು ಯೋಜನಾ ವರದಿ ತಯಾರಿಕೆಯ ಬಗ್ಗೆ ಅನುಭವಿ ಉಪನ್ಯಾಸಕರಿಂದ ಮಾಹಿತಿ ನೀಡಲಾಗುವುದು.

ಸಾಲ ಸೌಲಭ್ಯಕ್ಕಾಗಿ ಅರ್ಜಿ ಸಲ್ಲಿಸುವಲ್ಲಿ ಅಭ್ಯರ್ಥಿಗಳಿಗೆ ಸೂಕ್ತ ಮಾರ್ಗದರ್ಶನ ಮತ್ತು ಸಹಾಯವನ್ನು ಒದಗಿಸಲಾಗುವುದು.

*ಅರ್ಹತೆಗಳು:*ವಯೋಮಿತಿಯು 18 ರಿಂದ 35 ವರ್ಷದೊಳಗಿನವರಾಗಿರಬೇಕು. ಕನಿಷ್ಠ ಎಸ್‌ಎಸ್‌ಎಲ್‌ಸಿ ತೇರ್ಗಡೆಯಾಗಿರಬೇಕು. ಪರಿಶಿಷ್ಟ ಪಂಗಡದ ಮಹಿಳೆಯರು ಹಾಗೂ ಯುವನಿಧಿ ಯೋಜನೆಯ ಆಸಕ್ತ ಫಲಾನುಭವಿಗಳು ಅರ್ಹರಾಗಿರುತ್ತಾರೆ.

ಆಸಕ್ತ ಮತ್ತು ಅರ್ಹ ಅಭ್ಯರ್ಥಿಗಳು ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಲು ಜುಲೈ 15, 2026 ಕೊನೆಯ ದಿನವಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಂಟಿ ನಿರ್ದೇಶಕರು, ಸಿಡಾಕ್, ಜಿಲ್ಲಾ ಕೈಗಾರಿಕಾ ಕೇಂದ್ರದ ಕಟ್ಟಡ, ಹೊಸಪೇಟೆ ರಸ್ತೆ, ಬಳ್ಳಾರಿ – 583102. ಮೊ.9449226221/7483538942 ಗೆ ಸಂಪರ್ಕಿಸಬಹುದಾಗಿದೆ ಎಂದು ಸಿಡಾಕ್ ನ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಳ್ಳಾರಿ ನಗರ ವಿಧಾನಸಭಾ ಕ್ಷೇತ್ರ: 2,03,410 ಎಸ್‌ಐಆರ್ ಗಣತಿ ನಮೂನೆ ವಿತರಣೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

94–ಬಳ್ಳಾರಿ ನಗರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆಯು ನಡೆಯುತ್ತಿದ್ದು, ಮತದಾರರಿಗೆ ಗಣತಿ ಅರ್ಜಿಗಳನ್ನು ವಿತರಿಸಲು ಬಿ.ಎಲ್.ಓ ಗಳ ಮೂಲಕ ಮನೆ ಮನೆ ಭೇಟಿ ನೀಡುತ್ತಿದ್ದಾರೆ. ಒಟ್ಟು 2,79,144 ಮತದಾರರಿದ್ದು, ಬುಧವಾರಕ್ಕೆ 2,03,410 (ಶೇ. 72.87) ಎಸ್‌ಐಆರ್ ಗಣತಿ ನಮೂನೆಗಳನ್ನು ವಿತರಿಸಲಾಗಿದೆ.ಈ ಮನೆ ಮನೆ ಗಣತಿ ಹಾಗೂ ಡಿಜಿಟಲೀಕರಣ ಪ್ರಕ್ರಿಯೆಯು ಜುಲೈ 29 ರವರೆಗೆ ನಡೆಯಲಿದೆ. ಈಗಾಗಲೇ ಶೇ.98.01 ರಷ್ಟು ಮತದಾರರನ್ನು ಮ್ಯಾಪ್ ಮಾಡಲಾಗಿದೆ. 15,033 (ಶೇ. 5.39) ಅರ್ಜಿಗಳು ಡಿಜಿಟಲೀಕರಣಗೊಂಡಿವೆ. 664 ಅರ್ಜಿಗಳು ಆನ್‌ಲೈನ್ ಮೂಲಕ ಸಲ್ಲಿಕೆಯಾಗಿವೆ.431– ಮರಣ ಹೊಂದಿದವರು, 203 –ಶಾಶ್ವತವಾಗಿ ವಲಸೆ ಹೋದವರು, 28– ಈಗಾಗಲೇ ದಾಖಲಾಗಿರುವ ಮತದಾರರು, 02– ಗೈರುಹಾಜರಿ ಹಾಗೂ 10– ಇತರ ಪ್ರಕರಣಗಳು (10) ಸೇರಿವೆ ಎಂದು ಬಳ್ಳಾರಿ ನಗರ ಕ್ಷೇತ್ರದ ಮತದಾರರ ನೋಂದಣಾಧಿಕಾರಿಯೂ ಆದ ಮಹಾನಗರ ಪಾಲಿಕೆ ಆಯುಕ್ತ ಪಿ.ಎಸ್. ಮಂಜುನಾಥ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಲೆಮಾರಿ ಸಮುದಾಯದಲ್ಲಿ ಎಸ್‌ಐಆರ್ ಜಾಗೃತಿ



**ಬಳ್ಳಾರಿ:** ಮತದಾರರ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯಲ್ಲಿ ಅಲೆಮಾರಿ ಸಮುದಾಯದ ಪ್ರತಿಯೊಬ್ಬರೂ ಭಾಗವಹಿಸಿ ತಮ್ಮ ಮತದಾನದ ಹಕ್ಕನ್ನು ಖಚಿತಪಡಿಸಿಕೊಳ್ಳಬೇಕು ಎಂದು ಕೆಪಿಸಿಸಿ ಸಾಮಾಜಿಕ ನ್ಯಾಯ ಸಮಿತಿ ರಾಜ್ಯ ಉಪಾಧ್ಯಕ್ಷ ವೈ. ಶಿವಕುಮಾರ್ ಕರೆ ನೀಡಿದರು.

ಸಿರುಗುಪ್ಪ ತಾಲೂಕಿನ ಸಿರಿಗೇರಿ ಕ್ರಾಸ್ ಸಮೀಪದ ಅಲೆಮಾರಿ ಕಾಲೋನಿಗೆ ಭೇಟಿ ನೀಡಿ ಮನೆ ಮನೆಗೆ ತೆರಳಿ ಅವರು ಎಸ್‌ಐಆರ್ ಕುರಿತು ಜಾಗೃತಿ ಮೂಡಿಸಿದರು. ಎಸ್‌ಐಆರ್ ಫಾರ್ಮ್ ಅನ್ನು ಹೇಗೆ ಭರ್ತಿ ಮಾಡಬೇಕು, ಬಿಎಲ್‌ಒ (Booth Level Officer) ಅಧಿಕಾರಿಗಳು ಮನೆಗಳಿಗೆ ಬಂದಾಗ ಯಾವ ರೀತಿಯ ಮಾಹಿತಿ ಮತ್ತು ದಾಖಲೆಗಳನ್ನು ನೀಡಬೇಕು ಎಂಬುದರ ಕುರಿತು ನಿವಾಸಿಗಳಿಗೆ ವಿವರವಾಗಿ ತಿಳಿಸಿದರು.

ಯಾವುದೇ ಅಲೆಮಾರಿ ಕುಟುಂಬ ಮತದಾರರ ಪಟ್ಟಿಯಿಂದ ಹೊರಗುಳಿಯಬಾರದು. ಪ್ರತಿಯೊಬ್ಬ ಅರ್ಹ ನಾಗರಿಕರೂ ತಮ್ಮ ಮತದಾನದ ಹಕ್ಕನ್ನು ಉಳಿಸಿಕೊಳ್ಳುವುದು ಪ್ರಜಾಪ್ರಭುತ್ವದ ಬಲವರ್ಧನೆಗೆ ಅಗತ್ಯವಾಗಿದೆ ಎಂದು ಅವರು ಹೇಳಿದರು.

ಅಲೆಮಾರಿ ಸಮುದಾಯವು ಸಮಾಜದ ಮುಖ್ಯವಾಹಿನಿಯಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕಿದ್ದು, ಯಾವುದೇ ಕಾರಣಕ್ಕೂ ಮತದಾನದ ಹಕ್ಕಿನಿಂದ ವಂಚಿತರಾಗಬಾರದು. ಬಿಎಲ್‌ಒ ಅಧಿಕಾರಿಗಳಿಗೆ ನಿಖರ ಮಾಹಿತಿ ನೀಡಿ ಎಸ್‌ಐಆರ್ ಪ್ರಕ್ರಿಯೆಗೆ ಸಂಪೂರ್ಣ ಸಹಕಾರ ನೀಡುವಂತೆ ಅವರು ಮನವಿ ಮಾಡಿದರು.

ಈ ವೇಳೆ ಕಾಲೋನಿಯ ನಿವಾಸಿಗಳೊಂದಿಗೆ ಸಂವಾದ ನಡೆಸಿದ ವೈ. ಶಿವಕುಮಾರ್, ಮತದಾರರ ಪಟ್ಟಿಯಲ್ಲಿ ಹೆಸರು ಪರಿಶೀಲಿಸಿಕೊಳ್ಳುವುದು, ಅಗತ್ಯ ದಾಖಲೆಗಳನ್ನು ಸಿದ್ಧವಾಗಿಟ್ಟುಕೊಳ್ಳುವುದು ಹಾಗೂ ಎಸ್‌ಐಆರ್ ಸಂಬಂಧಿತ ಮಾಹಿತಿಯನ್ನು ಸರಿಯಾಗಿ ಒದಗಿಸುವಂತೆ ತಿಳಿಸಿದರು.

ಅಲೆಮಾರಿ ಸಮುದಾಯದ ಜನರು ತಮ್ಮ ಹಕ್ಕುಗಳ ಬಗ್ಗೆ ಜಾಗೃತರಾಗಬೇಕು. ಮತದಾನದ ಹಕ್ಕು ಕೇವಲ ಒಂದು ಹಕ್ಕಷ್ಟೇ ಅಲ್ಲ, ಅದು ಪ್ರಜಾಪ್ರಭುತ್ವವನ್ನು ಬಲಪಡಿಸುವ ಜವಾಬ್ದಾರಿಯೂ ಆಗಿದೆ ಎಂದು ವೈ. ಶಿವಕುಮಾರ್ ಅಭಿಪ್ರಾಯಪಟ್ಟರು.

ಈ ಜಾಗೃತಿ ಅಭಿಯಾನಕ್ಕೆ ಅಲೆಮಾರಿ ಕಾಲೋನಿಯ ನಿವಾಸಿಗಳು ಉತ್ತಮ ಸ್ಪಂದನೆ ವ್ಯಕ್ತಪಡಿಸಿದ್ದು, ಎಸ್‌ಐಆರ್ ಪ್ರಕ್ರಿಯೆಯಲ್ಲಿ ಸಕ್ರಿಯವಾಗಿ ಭಾಗವಹಿಸುವ ಭರವಸೆ ನೀಡಿದರು.

# ಏಸ್‌ಐಆರ್ ಕುರಿತು ಜಾಗೃತಿ ಕಾರ್ಯಕ್ರಮ




**ಬಳ್ಳಾರಿ:** ನಗರದ ರಾಮೇಶ್ವರಿ ಹೋಟೆಲ್‌ನಲ್ಲಿ ಇಂದು, ಜಿಲ್ಲಾ ಕ್ರೈಸ್ತ ಸಮುದಾಯದ ವತಿಯಿಂದ ಆಯೋಜಿಸಲಾಗಿದ್ದ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (SIR) ಕುರಿತು ಜಾಗೃತಿ ಕಾರ್ಯಕ್ರಮದಲ್ಲಿ ಡಿಸಿಸಿ ಅಧ್ಯಕ್ಷ ಅಲ್ಲಂ ಪ್ರಶಾಂತ್ ಭಾಗವಹಿಸಿ, ಮತದಾರರ ಪಟ್ಟಿಯಲ್ಲಿ ಪ್ರತಿಯೊಬ್ಬ ಅರ್ಹ ನಾಗರಿಕರ ಹೆಸರು ಸರಿಯಾಗಿ ನೋಂದಣಿಯಾಗಿರುವುದು ಪ್ರಜಾಪ್ರಭುತ್ವದ ಬಲವರ್ಧನೆಗೆ ಅತ್ಯಂತ ಅಗತ್ಯವಾಗಿದೆ. ಈ ನಿಟ್ಟಿನಲ್ಲಿ ಎಲ್ಲರೂ ಎಸ್.ಐ.ಆರ್. ಪ್ರಕ್ರಿಯೆಯಲ್ಲಿ ಸಕ್ರಿಯವಾಗಿ ಭಾಗವಹಿಸಿ, ಅಗತ್ಯ ದಾಖಲೆಗಳೊಂದಿಗೆ ನಮೂನೆಗಳನ್ನು ಸಮಯಕ್ಕೆ ಸರಿಯಾಗಿ ಸಲ್ಲಿಸುವಂತೆ ಜಾಗೃತಿ ಮೂಡಿಸಲಾಯಿತು. ಈ ಸಂದರ್ಭದಲ್ಲಿ ಜಿಲ್ಲಾ ಕಾಂಗ್ರೆಸ್ ಸಮಿತಿಯ ಪ್ರಧಾನ ಕಾರ್ಯದರ್ಶಿಯಾದ ಕಾಂತಿ ನೋಹ ವಿಲ್ಸನ್ ಅವರು, ಜಿಲ್ಲಾ ಸಾಮಾಜಿಕ ಜಾಲತಾಣ ಅಧ್ಯಕ್ಷ ಶೇಕ್ ಅಫಾಕ್ ಹುಸೇನ್, ಜಿಲ್ಲಾ ಕ್ರೈಸ್ತ ಸಮುದಾಯದ ಪ್ರಮುಖ ಮುಖಂಡರು, ಪಕ್ಷದ ಮಹಿಳಾ ಕಾರ್ಯಕರ್ತರಾದ ಶಮಿಮ್ ಜಕ್ಲಿ, ಗೀತಾ, ಮಮತ, ಮತ್ತು ಇತರ ಗಣ್ಯರು ಉಪಸ್ಥಿತರಿದ್ದರು.

# ಆರು ವಾರಗಳ ನಂತರ ಕ್ರಿಮಿನಲ್ ಪ್ರಕರಣ ದಾಖಲು: ಚಿತ್ರ ಸಾಹಿತಿ ಡಾ. ವರದರಾಜು

**ಚಿಕ್ಕಬಳ್ಳಾಪುರ:** ಶಾಸಕ ಪ್ರದೀಪ್ ಈಶ್ವರ ಅವರು ತಮ್ಮ ಸ್ಥಾನಕ್ಕೆ



ಗೌರವ ತರದ ರೀತಿಯಲ್ಲಿ ವರ್ತಿಸಿ ತಮಗೆ ಮತ ನೀಡಿದ ಮತದಾರರ ಅಭಿಪ್ರಾಯವನ್ನು ಸಹ ಕಡೆಗಣಿಸಿ ದುರ್ನಾಡ್ತೆ ವ್ಯಕ್ತಪ್ರಸಿ ಸಮಾಜದಲ್ಲಿ ಶಾಂತಿ ಕದಡುವ ರೀತಿಯಲ್ಲಿ ವರ್ತಿಸಿದ ಹಿನ್ನೆಲೆ ಅವರ ವಿರುದ್ಧ ನ್ಯಾಯಾಲಯದಲ್ಲಿ ಆರು ವಾರಗಳ ನಂತರ ಕ್ರಿಮಿನಲ್ ಪ್ರಕರಣ ದಾಖಲಿಸುವುದಾಗಿ ಸಮಾಜ ಸೇವಕ ಹಾಗೂ ಚಿತ್ರ ಸಾಹಿತಿ ಮಾಲೂರು ಡಾ. ವರದರಾಜು ತಿಳಿಸಿದರು.

ಅವರು ನಗರದ ಪತ್ರಕರ್ತರ ಗಮನದಲ್ಲಿ ಏರ್ಪಡಿಸಿದ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಪ್ರದೀಪ್ ಈಶ್ವರ್ ಅವರು ಬಹಿರಂಗವಾಗಿ ತೊಡೆ, ಭುಜ ಹಾಗೂ ಕೂದಲು ಕಿತ್ತೆಸೆಯುವಂತೆ ಸಾರ್ವಜನಿಕ ಸ್ಥಳದಲ್ಲಿಯೇ ವರ್ತಿಸಿದ ಕಾರಣ ಅವರ ಮೇಲೆ ಚಪ್ಪಲಿ ಎಸಿಯುವಂತಹ ಘಟನೆ ನಡೆಯಲು ಕಾರಣವಾಯಿತು ಚಪ್ಪಲಿ ಎಸೆದವನದ್ದು ಎಷ್ಟು ತಪ್ಪಿದ್ದಿಯೋ ಅಷ್ಟೇ ತಪ್ಪು, ಚಪ್ಪಲಿ ಎಸೆಯುವಂತೆ ಪ್ರಚೋದನೆ ಮಾಡಿದ ಶಾಸಕ ಪ್ರದೀಪ್ ಈಶ್ವರ್ ಅವರದ್ದು ಸಹ ತಪ್ಪು ಆಗಿದೆ ಚಪ್ಪಲಿ ಎಸೆದವನ ಮೇಲೆ ಪ್ರಕರಣ ದಾಖಲಿಸುವುದೇ ಆದರೆ ಪ್ರಚೋದನೆ ಮಾಡಿದ ಶಾಸಕನ ವಿರುದ್ಧವು ಯಾಕೆ ಪ್ರಕರಣ ದಾಖಲಿಸಲಿಲ್ಲ ಎಂದು ಪೊಲೀಸರನ್ನ ಪ್ರಶ್ನೆ ಮಾಡಿದರು. ಎರಡು ಬಾರಿ ಈ ರಾಜ್ಯದ ಮುಖ್ಯಮಂತ್ರಿ ಆಗಿದ್ದ ಹೆಚ್ ಡಿ ಕುಮಾರಸ್ವಾಮಿ ಅವರ ಬಗ್ಗೆ ಮಾಡಿದ ಅಪಮಾನ ಮಾಡಿದ ರೀತಿಯಲ್ಲಿ ಜಾತಿ ಜಾತಿಗಳ ಮಧ್ಯೆ ವೈಶಮ್ಯ ಸೃಷ್ಟಿ ಮಾಡಲು ಯತ್ನಿಸುತ್ತಿರುವ ಶಾಸಕ ಪ್ರದೀಪ್ ಈಶ್ವರ್ ಅಷ್ಟೇ ಎದೆಗಾರಿಕೆಯಿಂದ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಗೃಹಮಂತ್ರಿ ಪ್ರಿಯಾಂಕ ಖರ್ಗೆ ಹಾಗೂ ಉಪಮುಖ್ಯಮಂತ್ರಿ ಡಾಕ್ಟರ್ ಜಿ ಪರಮೇಶ್ವರ್ ಅವರುಗಳನ್ನು ಪ್ರಶ್ನೆ ಮಾಡುತ್ತಾರೆಯೇ? ಅಷ್ಟು ಎದೆಗಾರಿಕೆ ಅವರಲ್ಲಿ ಇದೆಯೇ ಎಂದು ಪ್ರಶ್ನೆ ಮಾಡಿದರು.

# ಭೋವಿ-ವಡ್ಡರ ಜನೋತ್ಸವ: ಪೂರ್ವಭಾವಿ ಸಭೆ, ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲು ಕರೆ



• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಜಗದ್ಗುರು ಶ್ರೀ ಶ್ರೀ ಸಿದ್ಧರಾಮೇಶ್ವರ ಸ್ವಾಮಿಗಳವರ 17ನೇ ಪಟ್ಟಾಭಿಷೇಕ ಹಾಗೂ 40ನೇ ವರ್ಷದ ಜನ್ಮದಿನೋತ್ಸವ ಅಂಗವಾಗಿ ಆಯೋಜಿಸಿರುವ ಭೋವಿ-ವಡ್ಡರ ಜನೋತ್ಸವ ಕಾರ್ಯಕ್ರಮವು ಜುಲೈ 19, 2026ರಂದು ಚಿತ್ರದುರ್ಗದ ಶ್ರೀ ಸಿದ್ಧರಾಮೇಶ್ವರ ಭೋವಿ ಗುರುಪೀಠದಲ್ಲಿ ವಿಜೃಂಭಣೆಯಿಂದ ನಡೆಯಲಿದ್ದು, ಇದರ ಅಂಗವಾಗಿ ಗುರುವಾರ ಕಲಬುರಗಿ ನಗರದ ಶ್ರೀ ಶಿವದಾಸ್ ಮಹಾರಾಜ ಮಠದಲ್ಲಿ ಪೂರ್ವಭಾವಿ ಸಭೆ ನಡೆಯಿತು.

ಸಭೆಯನ್ನು ಸಮಾಜದ ಗಣ್ಯರು ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಕಲ್ಯಾಣ ಕರ್ನಾಟಕ ರಾಜ್ಯದ ಪ್ರಚಾರ ಸಮಿತಿಯ ಮುಖ್ಯಸ್ಥ ಸಿದ್ದು ಬಂಡಿ, ಚಿತ್ರದುರ್ಗದಲ್ಲಿ ನಡೆಯಲಿರುವ ಜನೋತ್ಸವವು ಭೋವಿ-ವಡ್ಡರ ಸಮಾಜದ ಐತಿಹಾಸಿಕ ಸಮಾವೇಶವಾಗಿದ್ದು, ಕಲಬುರಗಿ ಜಿಲ್ಲೆಯ ಭೋವಿ-ವಡ್ಡರ ಸಮಾಜ ಬಾಂಧವರು, ಮಹಿಳೆಯರು, ಯುವಕರು ಹಾಗೂ ಮುಖಂಡರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು.

ಸಭೆಯಲ್ಲಿ ತಿಪ್ಪಣ್ಣ ಒಡೆಯರಾಜ, ರಾಮಾಂಜನೇಯ ಬಳ್ಳಾರಿ, ಅಶೋಕ್ ಉಮಲೂಟಿ, ಹನುಮಂತ ಜುಕುರು, ನಿಂಗಣ್ಣ ದೇವಕರ, ರಾಜು ಮೀಸ್ತ್ರಿ, ಮಲ್ಲಿಕಾರ್ಜುನ ಕುಸ್ತಿ, ಸಿದ್ದರಾಮ ದಂಡಗುಲಕರ, ಭೀಮಾಶಂಕರ್ ಭಂಕೂರ್, ಈರಣ್ಣ ರಾವೂರಕರ, ಶ್ರೀರಾಮು ನಂದೂರ, ಕನಕಪ್ಪ ದಂಡಗುಲಕರ, ರಾಮಯ್ಯ ಪೂಜಾರ, ರಾಜು ಗುತ್ತೇದಾರ್, ರವಿಚಂದ್ರ ಗುತ್ತೇದಾರ್, ಭಾಗ್ಯಶ್ರೀ, ಭಾನು ಪವಾರ, ರಮೇಶ್ ಪವಾರ, ಅನೀಲ ಜಾಧವ, ವಿಜಯಕುಮಾರ ಸೇಡಂ ಸೇರಿದಂತೆ ವಿವಿಧ ತಾಲೂಕಿನ ಅಧ್ಯಕ್ಷರು, ಪದಾಧಿಕಾರಿಗಳು, ಜಿಲ್ಲೆಯ ಮಹಿಳೆಯರು ಹಾಗೂ ಸಮಾಜದ ಮುಖಂಡರು ಉಪಸ್ಥಿತರಿದ್ದರು.

ಸಭೆಯಲ್ಲಿ ಜನೋತ್ಸವ ಕಾರ್ಯಕ್ರಮದ ಯಶಸ್ವಿ ಆಯೋಜನೆ, ಪ್ರಯಾಣ ವ್ಯವಸ್ಥೆ ಹಾಗೂ ಹೆಚ್ಚಿನ ಸಂಖ್ಯೆಯಲ್ಲಿ ಸಮಾಜದ ಮುಖಂಡರು, ಮಹಿಳೆಯರು, ಯುವಕರು ಭಾಗವಹಿಸುವಂತೆ ಮಾಡುವ ಕುರಿತು ಚರ್ಚಿಸಿ ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಲು ನಿರ್ಧರಿಸಲಾಯಿತು.

# ನಿವೃತ್ತಿ ವೇತನ ವಿಳಂಬ ಖಂಡಿಸಿ ಧರಣಿ



• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಗುಲಬರ್ಗಾ ವಿಶ್ವವಿದ್ಯಾಲಯವು ನಿವೃತ್ತ ನೌಕರರಿಗೆ ಪ್ರತಿ ತಿಂಗಳು ಸಕಾಲಕ್ಕೆ ನಿವೃತ್ತಿ ವೇತನ ಪಾವತಿಸದೇ ವಿಳಂಬ ಮಾಡುತ್ತಿರುವುದನ್ನು ಖಂಡಿಸಿ, ಗುಲಬರ್ಗಾ ವಿಶ್ವವಿದ್ಯಾಲಯ ನಿವೃತ್ತ ನೌಕರರ ಸಂಘದ ನೇತೃತ್ವದಲ್ಲಿ ಗುರುವಾರ ವಿಶ್ವವಿದ್ಯಾಲಯದ ಆಡಳಿತ ಕಚೇರಿ ಎದುರು ಧರಣಿ ಸತ್ಯಾಗ್ರಹ ನಡೆಸಲಾಯಿತು. ಸಂಘದ ಮುಖಂಡ ಎಂ.ಬಿ. ಸಜ್ಜನ, ಮಾತನಾಡಿ, ವಿಶ್ವವಿದ್ಯಾಲಯದಲ್ಲಿ ಸುಮಾರು 600ಕ್ಕೂ ಹೆಚ್ಚು ಶಿಕ್ಷಕ ಹಾಗೂ ಶಿಕ್ಷಕೇತರ ನಿವೃತ್ತ ನೌಕರರಿದ್ದು, ಅವರಿಗೆ ಪ್ರತಿ ತಿಂಗಳು ನಿಗದಿತ ಸಮಯಕ್ಕೆ ನಿವೃತ್ತಿ ವೇತನ ಪಾವತಿಸಲಾಗುತ್ತಿಲ್ಲ. ಇದರಿಂದ ಅನೇಕ ನಿವೃತ್ತ ನೌಕರರು ತೀವ್ರ ಆರ್ಥಿಕ ಸಂಕಷ್ಟ ಎದುರಿಸುತ್ತಿದ್ದು, ಜೀವನ ನಿರ್ವಹಣೆಗೆ ಪರದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಆರೋಪಿಸಿದರು. ಜೂನ್ 2026ರ ನಿವೃತ್ತಿ ವೇತನವನ್ನು ಇದುವರೆಗೆ ಪಾವತಿಸದಿರುವುದನ್ನು ಖಂಡಿಸಿ ಈ ಧರಣಿ ಹಮ್ಮಿಕೊಳ್ಳಲಾಗಿದೆ. ವಿಶ್ವವಿದ್ಯಾಲಯದ ಆಡಳಿತ ಹಾಗೂ ರಾಜ್ಯ ಸರ್ಕಾರ ಕೂಡಲೇ ಮಧ್ಯಪ್ರವೇಶಿಸಿ ನಿವೃತ್ತಿ ವೇತನವನ್ನು ಸಕಾಲಕ್ಕೆ ಬಿಡುಗಡೆ ಮಾಡುವಂತೆ ಮನವಿಯಲ್ಲಿ ಆಗಮಿಸಲಾಯಿತು. ಧರಣಿಯಲ್ಲಿ ಸಂಘ ಉಪಾಧ್ಯಕ್ಷ ಸಿದ್ರಾಮಪ್ಪ ಹೊದಲೂರ, ಪದಾಧಿಕಾರಿಗಳಾದ ಆರ್.ಎಸ್. ತಲ್ಲಳ್ಳಿ, ಸೇರಿದಂತೆ ಹಲವು ನಿವೃತ್ತ ನೌಕರರು ಭಾಗವಹಿಸಿದ್ದರು.

# ಒಳಮೀಸಲಾತಿ ವಿರೋಧಿಸಿ ರಾಜ್ಯಾದ್ಯಂತ ಹೋರಾಟ: ಉಮೇಶ ಜಾಧವ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ




ಒಳಮೀಸಲಾತಿಯ ಅವೈಜ್ಞಾನಿಕ ಹಂಚಿಕೆ ಮತ್ತು ಅವೈಜ್ಞಾನಿಕ ರೋಸ್ಟರ್ ಬಿಂದು ಆದೇಶ ಜಾರಿಯ ಮೂಲಕ ಬಂಜಾರ ಸಮಾಜದ ಶಿಕ್ಷಣ ಮತ್ತು ಉದ್ಯೋಗದ ಹಕ್ಕು ಕಸಿದುಕೊಂಡು ಸೇಡಿನ ರಾಜಕಾರಣ ಮಾಡುತ್ತಿರುವ ರಾಜ್ಯ ಸರ್ಕಾರದ ವಿರುದ್ಧ ಪ್ರತಿ ಜಿಲ್ಲೆಯಲ್ಲಿ ಜನಾಂದೋಲನಕ್ಕಾಗಿ ನಮ್ಮ ಮೀಸಲಾತಿ ನಮ್ಮ ಹಕ್ಕು ಜನ ಜಾಗೃತಿ ಸಭೆ ನಡೆಸಲಾಗುತ್ತಿದೆ ಎಂದು ಮಾಜಿ ಸಂಸದ ಡಾ.ಉಮೇಶ ಜಾಧವ ಹೇಳಿದರು.

ನಗರದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈಗಾಗಲೇ ಜೂನ್ 28 ರಿಂದ ಕಲಬುರಗಿಯಿಂದ ಜನ ಜಾಗೃತಿ ಆರಂಭಗೊಂಡಿದ್ದು, ರಾಜ್ಯಾದ್ಯಂತ ಜನ ಜಾಗೃತಿ ಸಭೆಯನ್ನು ನಡೆಸಲಾಗುವುದು ಎಂದ ಅವರು, ಕಾಂಗ್ರೆಸ್ ಹಟಾವೋ- ಬಂಜಾರ ಬಚಾವೋ ಮತ್ತು ತಾಂಡ ಬಚಾವೋ ಘೋಷಣೆಯೊಂದಿಗೆ ರಾಜ್ಯಾದ್ಯಂತ ಸಭೆಗಳು ನಡೆಯಲಿದೆ ಎಂದು ತಿಳಿಸಿದರು.

ದೇಶದಲ್ಲಿ ಅರ್ಹ ಸಮುದಾಯಗಳಿಗೆ ನ್ಯಾಯಯುತ ಮೀಸಲಾತಿ ಸೌಲಭ್ಯವನ್ನು ಕಲ್ಪಿಸಲು ಪ್ರಸ್ತುತ ಸಾಲಿನ ನಿಖರವಾದ ಪ್ರಾಯೋಗಿಕ ದತ್ತಾಂಶಗಳನ್ನು ತಕ್ಷಣವೇ ಬಿಡುಗಡೆ ಮಾಡಬೇಕು ಎಂದು ಸರ್ಕಾರಕ್ಕೆ ಒತ್ತಾಯಿಸಿದ ಜಾಧವ, ಈ ಹಿಂದೆ ನಡೆದ ಜನಗಣತಿಗಳ ದತ್ತಾಂಶಗಳು ಪ್ರಸ್ತುತ ಪರಿಸ್ಥಿತಿಗೆ ಸರಿಯಾಗಿ ಹೊಂದಿಕೆಯಾಗುತ್ತಿಲ್ಲ. ಈ ಕೊರತೆಯಿಂದಾಗಿ ಹಲವು ಸಮುದಾಯಗಳಿಗೆ ಸಿಗಬೇಕಾದ ಸೂಕ್ತ ಪ್ರಾತಿನಿಧ್ಯ ಮತ್ತು ಮೀಸಲಾತಿ ಸೌಲಭ್ಯಗಳು ದೊರೆಯುತ್ತಿಲ್ಲ ಎಂದು ಕಳವಳ ವ್ಯಕ್ತಪಡಿಸಿದರು.

ಸಮುದಾಯಗಳ ಸಾಮಾಜಿಕ ಮತ್ತು ಆರ್ಥಿಕ ಸ್ಥಿತಿಗತಿಗಳನ್ನು ಸ್ಪಷ್ಟಪಡಿಸುವ ಸುಮಾರು 1,800 ಪುಟಗಳ ವಿಸ್ತೃತ ವರದಿಯನ್ನು ತಕ್ಷಣವೇ ಸಾರ್ವಜನಿಕವಾಗಿ ಬಹಿರಂಗಪಡಿಸಬೇಕು. ಆಗ ಮಾತ್ರ ಎಲ್ಲರಿಗೂ ವಸ್ತುಸ್ಥಿತಿಯ ಅರಿವಾಗುತ್ತದೆ ಎಂದು ಅವರು ಒತ್ತಾಯಿಸಿದರು.

ಶಾಸಕ ಪ್ರಭು ಚವ್ಹಾಣ್ ಮಾತನಾಡಿ, ಒಳಮೀಸಲಾತಿ ಬಗ್ಗೆ ಸರ್ಕಾರವು ತಾರತಮ್ಯ ಮಾಡಿದ್ದು, ಅದನ್ನು ಅನುಷ್ಠಾನಗೊಳಿಸುವಲ್ಲಿ ಕಾಂಗ್ರೆಸ್ ಸರ್ಕಾರ ವಿಫಲಗೊಂಡಿದ್ದು ಬಂಜಾರ ಸಮಾಜವನ್ನು ದಾರಿತಪ್ಪಿಸುವ ಕೆಲಸ ಮಾಡುತ್ತಿದೆ. ಈ ಸಂಬಂಧ ಬಂಜಾರ ಸಮಾಜ ಒಗ್ಗಟ್ಟಿನಿಂದ ಕೆಲಸ ಮಾಡಬೇಕು. ಕಾಂಗ್ರೆಸ್ ಪಕ್ಷ ನಮ್ಮ ಸಮಾಜವನ್ನು ಮತಬ್ಯಾಂಕಾಗಿ ಬಳಸಿಕೊಳ್ಳುತ್ತಿದೆ. ಆದರೆ ಬಿಜೆಪಿ ಸರ್ಕಾರದಲ್ಲಿ ನಮ್ಮ ಸಮುದಾಯಕ್ಕೆ ಪ್ರಾತಿನಿಧ್ಯ ನೀಡಿ ನ್ಯಾಯವನ್ನು ಒದಗಿಸಿಕೊಟ್ಟಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಬಿಜೆಪಿ ಮುಖಂಡ ಮಣಿಕಂಠ ರಾಠೋಡ, ಎಸ್.ಪಿ.ಲಿಂಬಾನಾಯಕ, ಮಹೇಂದ್ರ ನಾಯಕ, ಹೂವಪ್ಪ ರಾಠೋಡ, ನಿಂಗಪ್ಪ ಚವ್ಹಾಣ, ರತ್ನಪ್ಪ ರಾಠೋಡ ಇದ್ದರು.

# ರೇಲ್ವೆ ಅಧಿಕಾರಿಗಳು, ರೈತರೊಂದಿಗೆ ಸಂಸದರ ಸಭೆ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ



ಮುಧೋಳ ತಾಲೂಕಿನ ಜಾಲಿಬೇರಿ ಹತ್ತಿರ ಘಟಪ್ರಭಾ ನದಿಗೆ ಅಡ್ಡಲಾಗಿ ರೈಲು ಸೇತುವೆ ನಿರ್ಮಾಣ ಕುರಿತು ಸಂಸದ ಪಿ.ಸಿ.ಗದ್ದಿಗೌಡರ ಅಧ್ಯಕ್ಷತೆಯಲ್ಲಿ ರೇಲ್ವೆ ಅಧಿಕಾರಿಗಳು ಹಾಗೂ ರೈತರೊಂದಿಗೆ ಸಭೆ ನಡೆಯಿತು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜರುಗಿದ ಸಭೆಯಲ್ಲಿ ಬಾಗಲಕೋಟೆ-ಕುಡಚಿ ರೈಲು ಮಾರ್ಗ ನಿರ್ಮಾಣದ ಕಾಮಗಾರಿ ಪ್ರಗತಿಯಲ್ಲಿದ್ದು, ಜಾಲಿಬೇರಿ ಭಾಗದಲ್ಲಿ ಘಟಪ್ರಭಾ ನದಿಗೆ ರೈಲು ಸೇತುವೆ ನಿರ್ಮಾಣ ಮಾಡುವ ಅಗತ್ಯವಿದೆ. ವೈಜ್ಞಾನಿಕವಾಗಿ ಸೇತುವೆ ನಿರ್ಮಾಣಕ್ಕೆ ಕ್ರಮಕೈಗೊಳ್ಳಬೇಕು. ಅದೇ ಸಮಯದಲ್ಲಿ ರೈತರ ಹಿತಾಶಕ್ತಿಗೆ ಯಾವುದೇ ಧಕ್ಕೆಯಾಗದಂತೆ ಕಾರ್ಯನಿರ್ವಹಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಿಗದಿತ ಅವಧಿಯಲ್ಲಿ ಯೋಜನೆ ಪೂರ್ಣಗೊಂಡರೆ ರೈಲು ಸಂಚಾರಕ್ಕೆ ಅನುಕೂಲವಾಗುವದರ ಜೊತೆಗೆ ಜಿಲ್ಲೆಯ ಮೂಲಸೌಕರ್ಯ ಅಭಿವೃದ್ಧಿಗೂ ಹೊಸ ಉತ್ತೇಜನ ದೊರೆಯಲಿದೆ. ಆದ್ದರಿಂದ ಕಾಮಗಾರಿಯ ಪ್ರತಿಯೊಂದು ಹಂತವನ್ನು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಲು ಅಧಿಕಾರಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು. ಅಭಿವೃದ್ಧಿ ಕಾಮಗಾರಿ ಕೈಗೊಳ್ಳುವ ಸಂದರ್ಭದಲ್ಲಿ ರೈತರ ಹಿತಾಸಕ್ತಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ವಿಶೇಷ ಕಾಳಜಿ ವಹಿಸಬೇಕು. ರೈತರು ಸಲ್ಲಿಸಿರುವ ನ್ಯಾಯಸಮ್ಮತ ಬೇಡಿಕೆಗಳನ್ನು ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿ ಸೂಕ್ತ ಕ್ರಮಕೈಗೊಳ್ಳಬೇಕು ಎಂದರು.

ಜಿಲ್ಲಾಧಿಕಾರಿ ಸಂಗಪ್ಪ ಮಾತನಾಡಿ, ಜಿಲ್ಲೆಯಲ್ಲಿ ಘಟಪ್ರಭಾ ನದಿಯಿಂದ ಉಂಟಾಗುವ ಪ್ರವಾಹವನ್ನು ಆಧರಿಸಿ ಸೇತುವೆ ನಿರ್ಮಾಣ ಕುರಿತು ಯೋಜನೆ ಸಿದ್ದಪಡಿಸಬೇಕು. ಪ್ರವಾಹ ಬಂದಾಗ ರೈತರ ಜಮೀನುಗಳಿಗೆ ನೀರು ಹೋಗದ ರೀತಿಯಲ್ಲಿ ವೈಜ್ಞಾನಿಕವಾಗಿ ಸೇತುವ ನಿರ್ಮಿಸುವ ನಿಟ್ಟಿನಲ್ಲಿ ಕೆಬಿಜೆಎನ್‌ಎಲ್, ರೈಲ್ವೆ ಅಧಿಕಾರಿಗಳು ಹಾಗೂ ರೈತರೊಂದಿಗೆ ಜಂಟಿ ಸ್ಥಳ ಪರಿಶೀಲಿಸಿ, ನೀರಿನ ಹರಿವು ನೋಡಿಕೊಂಡು ಯೋಜನೆ ರೂಪಿಸಬೇಕು ಎಂದು ತಿಳಿಸಿದರು.

ಸಭೆಯಲ್ಲಿ ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ, ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಭಾರತೀಯ ರೈಲ್ವೆ ಇಲಾಖೆಯ ಡೆಪ್ಯೂಟಿ ಸಿಇ ಶಿವುಕುಮಾರ, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ರಾಜು ನಾಯಕ, ಆಡಳಿತಾಧಿಕಾರಿ ಉಮೇಶ ನಾಯಕ, ಎಡಿಎಲ್‌ಆರ್ ಮಹೇಶ ಪತ್ತಾರ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಜಿಲ್ಲಾ ಉಸ್ತುವಾರಿ ಸಚಿವ ಯು.ಟಿ. ಖಾದರ್‌ಗೆ ದಾಂಡೇಲಿ ಸಮಗ್ರ ಅಭಿವೃದ್ಧಿ ಹೋರಾಟ ಸಮಿತಿಯಿಂದ ವಿವಿಧ ಬೇಡಿಕೆಗಳ ಮನವಿ

• ಮಲ್ಲಮ್ಮ ನುಡಿ ವಾರ್ತೆ ಕಾರವಾರ



ಜಿಲ್ಲಾ ಉಸ್ತುವಾರಿ ಹಾಗೂ ಆರೋಗ್ಯ ಸಚಿವ ಯು.ಟಿ. ಖಾದರ್ ಅವರನ್ನು ದಾಂಡೇಲಿ ಸಮಗ್ರ ಅಭಿವೃದ್ಧಿ ಹೋರಾಟ ಸಮಿತಿಯ ಪದಾಧಿಕಾರಿಗಳು ಭೇಟಿ ಮಾಡಿ, ದಾಂಡೇಲಿ ತಾಲೂಕಿನ ವಿವಿಧ ಜನಪರ ಸಮಸ್ಯೆಗಳ ಕುರಿತು ವಿವರವಾದ ಮನವಿಪತ್ರ ಸಲ್ಲಿಸಿದರು.

ಮನವಿಯಲ್ಲಿ ಪ್ರಧಾನಮಂತ್ರಿ ಆವಾಸ್ ಯೋಜನೆ ಹಾಗೂ ಆಶ್ರಯ ಯೋಜನೆಯಡಿ ನಿರ್ಮಾಣವಾಗುತ್ತಿರುವ ಜಿ+2 ಮಾದರಿಯ 1006 ಮನೆಗಳ ಕಾಮಗಾರಿಯನ್ನು ಶೀಘ್ರ ಪೂರ್ಣಗೊಳಿಸಿ ಫಲಾನುಭವಿಗಳಿಗೆ ಹಸ್ತಾಂತರಿಸಬೇಕು ಎಂದು ಒತ್ತಾಯಿಸಲಾಯಿತು. ಈ ಯೋಜನೆಗಾಗಿ ಫಲಾನುಭವಿಗಳಿಂದ ಸುಮಾರು ₹9 ಕೋಟಿ ಸಂಗ್ರಹಿಸಲಾಗಿದ್ದು, ಇದುವರೆಗೆ ಕೇವಲ 108 ಮನೆಗಳನ್ನು ಮಾತ್ರ ಹಸ್ತಾಂತರಿಸಲಾಗಿದೆ ಎಂದು ತಿಳಿಸಿದರು.

2026ರ ಮೇ 12ರಂದು ದಾಂಡೇಲಿ ನಗರಸಭೆಯಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಸಂಬಂಧಿತ ಇಲಾಖೆಗಳು, ಬ್ಯಾಂಕ್ ಅಧಿಕಾರಿಗಳು, ಗುತ್ತಿಗೆದಾರರು ಹಾಗೂ ಹೋರಾಟ ಸಮಿತಿಯೊಂದಿಗೆ ಚರ್ಚಿಸಿ ಸಮಸ್ಯೆಗಳನ್ನು ಬಗೆಹರಿಸಲು ಸೂಚನೆ ನೀಡಲಾಗಿತ್ತು. ಆದರೆ ಜಿಲ್ಲಾಧಿಕಾರಿಗಳ ಆದೇಶವನ್ನು ನಗರಸಭೆ ಹಾಗೂ ಗೃಹ ಮಂಡಳಿ ಅಧಿಕಾರಿಗಳು ಪಾಲಿಸದೆ, ಕಾಮಗಾರಿಗಳನ್ನು ಉದ್ದೇಶಪೂರ್ವಕವಾಗಿ ವಿಳಂಬ ಮಾಡುತ್ತಿದ್ದಾರೆ ಎಂದು ಸಮಿತಿ ಆರೋಪಿಸಿದೆ. ಉಳಿದ 84 ಮನೆಗಳನ್ನು ಫಲಾನುಭವಿಗಳಿಗೆ ಹಂಚಿಕೆ ಮಾಡುವಂತೆ ನೀಡಿದ್ದ ಸೂಚನೆಯೂ ಇನ್ನೂ ಜಾರಿಯಾಗಿಲ್ಲ ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ.

2018ರಲ್ಲಿ ದಾಂಡೇಲಿಯನ್ನು ತಾಲೂಕಾಗಿ ಘೋಷಿಸಿದರೂ, ತಾಲೂಕು ಆಸ್ಪತ್ರೆಯನ್ನು ಇನ್ನೂ ಘೋಷಿಸದಿರುವುದರಿಂದ ಸಾರ್ವಜನಿಕರಿಗೆ ಸಮರ್ಪಕ ಆರೋಗ್ಯ ಸೇವೆ ದೊರೆಯುತ್ತಿಲ್ಲ ಎಂದು ಸಮಿತಿ ತಿಳಿಸಿದೆ. ಸರ್ಕಾರಿ ಆಸ್ಪತ್ರೆಯಲ್ಲಿ ವೈದ್ಯರ ಕೊರತೆಯಿಂದ ಪ್ರತಿದಿನ 400 ರಿಂದ 500 ಹೊರರೋಗಿಗಳು ತೊಂದರೆ ಅನುಭವಿಸುತ್ತಿದ್ದು, ಹೆಚ್ಚಿನ ವೈದ್ಯರನ್ನು ನೇಮಿಸುವಂತೆ ಆಗ್ರಹಿಸಲಾಗಿದೆ.

ಇದೇ ವೇಳೆ, 50 ಹಾಸಿಗೆಗಳ ಇಎಸ್‌ಐ ಆಸ್ಪತ್ರೆಯನ್ನು ಕೇಂದ್ರ ಸರ್ಕಾರದ ಇಎಸ್‌ಐಸಿ (ESIC) ಅಧೀನಕ್ಕೆ ಹಸ್ತಾಂತರಿಸಬೇಕು ಎಂದು ಒತ್ತಾಯಿಸಲಾಯಿತು. ಕಾರ್ಮಿಕರಿಂದ ಕೋಟ್ಯಂತರ ರೂಪಾಯಿ ವಂತಿಗೆ ಸಂಗ್ರಹವಾಗುತ್ತಿದ್ದರೂ, ಅಗತ್ಯ ವೈದ್ಯರು ಹಾಗೂ ಸಿಬ್ಬಂದಿ ಕೊರತೆಯಿಂದ ಸಮರ್ಪಕ ಚಿಕಿತ್ಸೆ ದೊರೆಯುತ್ತಿಲ್ಲ. ಖಾಲಿ ಹುದ್ದೆಗಳನ್ನು ತಕ್ಷಣ ಭರ್ತಿ ಮಾಡಬೇಕು ಎಂದು ಮನವಿ ಮಾಡಲಾಗಿದೆ.

ಈ ಸಂದರ್ಭದಲ್ಲಿ ದಾಂಡೇಲಿ ಸಮಗ್ರ ಅಭಿವೃದ್ಧಿ ಹೋರಾಟ ಸಮಿತಿಯ ಅಧ್ಯಕ್ಷ ಅಕ್ರಂ ಖಾನ್, ಉಪಾಧ್ಯಕ್ಷ ಅಶೋಕ ಪಾಟೀಲ, ಪ್ರಧಾನ ಕಾರ್ಯದರ್ಶಿ ರಾಘವೇಂದ್ರ ಗಡಪನವರ ಸೇರಿದಂತೆ ಪದಾಧಿಕಾರಿಗಳು ಉಪಸ್ಥಿತರಿದ್ದರು. ಮನವಿಯ ಪ್ರತಿಯನ್ನು ಆಡಳಿತ ಸುಧಾರಣಾ ಆಯೋಗದ ಅಧ್ಯಕ್ಷ ಹಾಗೂ ಶಾಸಕ ಆರ್.ವಿ. ದೇಶಪಾಂಡೆ ಮತ್ತು ಜಿಲ್ಲಾಧಿಕಾರಿಗಳಿಗೂ ಸಲ್ಲಿಸಲಾಗಿದೆ ಎಂದು ಹೋರಾಟ ಸಮಿತಿಯ ಅಧ್ಯಕ್ಷ ಅಕ್ರಂ ಖಾನ್ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಎಸ್‌ಐಆರ್‌ಗೆ ಸಹಕರಿಸಲು ಮತದಾರರ ನೋಂದಣಾಧಿಕಾರಿ ಮನವಿ



**ವಿಜಯಪುರ:** ನೈಜ ಮತದಾರರು ಮತದಾರರ ಪಟ್ಟಿಯಿಂದ ಹೊರಗೆ ಉಳಿಯದಂತೆ ಮತ್ತು ಅನರ್ಹ ಮತದಾರರನ್ನು ಯಾವುದೇ ಕಾರಣ–ಕ್ಕೂ ಮತದಾರರ ಪಟ್ಟಿಗೆ ಸೇರ್ಪಡೆಯಾಗದಂತೆ ಕ್ರಮ ವಹಿಸಲು ಎಲ್ಲ ರಾಜಕೀಯ ಪಕ್ಷಗಳು ಹಾಗೂ ಮತದಾರರು ಸಹಕರಿಸಬೇಕು ಎಂದು ಮತದಾರರ ನೋಂದಣಾಧಿಕಾರಿಗಳು ಆಗಿರುವ ಮಹಾನಗರ ಪಾಲಿಕೆ ಆಯುಕ್ತರಾದ ವಿಜಯ ಮೆಕ್ಕಳಕಿ ಅವರು ಹೇಳಿದರು.

ಮಹಾನಗರ ಪಾಲಿಕೆ ಸಭಾಂಗಣದಲ್ಲಿ ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ ಕುರಿತು ನಗರದ ಎಲ್ಲ ರಾಜಕೀಯ ಪಕ್ಷಗಳ ಮುಖಂಡರ ಸಭೆಯ ಅಧ್ಯಕ್ಷತೆ ವಹಿಸಿ ಅವರು ನಗರದ ಎಲ್ಲ ರಾಜಕೀಯ ಪಕ್ಷಗಳ ಮುಖಂಡರ ಸಭೆಯಲ್ಲಿ ಅವರು ಮಾತನಾಡಿದರು. ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಹಾಗೂ ತಮ್ಮ ಪಕ್ಷಗಳಿಂದ ನೇಮಿಸಿಕೊಂಡ ಬಿಎಲ್ ಒ ಗಳನ್ನು ಈ ಪರಿಷ್ಕರಣೆ ಕಾರ್ಯದಲ್ಲಿ ಭಾಗವಹಿಸುವಂತೆ ನೋಡಿಕೊಳ್ಳಬೇಕು ಎಂದರು. ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಜೂ. 30 ರಿಂದ ಜು. 29ರವರೆಗೆ ಮತದಾರರ ಮನೆ ಮನೆಗೆ ತೆರಳಿ ಮತದಾರ ಗಣತಿ ನಮೂನೆಗಳನ್ನು ವಿತರಣೆ ಮಾಡಲಾಗುತ್ತಿದೆ. ಈ ಹಂತದಲ್ಲಿ ಆಯಾ ರಾಜಕೀಯ ಪಕ್ಷಗಳಿಂದ ನೇಮಿಸಿದ ಪ್ರತಿನಿಧಿಗಳು ಭಾಗವಹಿಸಬಹುದಾಗಿದೆ ಎಂದರು.

ಭಾರತದ ಚುನಾವಣಾ ಆಯೋಗದ ನಿರ್ದೇಶನದಂತೆ ಜೂ. 30ರಿಂದ ಜು. 29ರವರೆಗೆ ಮತದಾರರ ಮನೆ ಮನೆಗೆ ತೆರಳಿ ಮತದಾರರ ಗಣತಿ ನಮೂನೆಗಳನ್ನು ವಿತರಣೆ ಮಾಡುತ್ತಿದ್ದು, ಸಾರ್ವಜನಿಕ ಹಾಗೂ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಹಾಗೂ ತಮ್ಮ ಪಕ್ಷಗಳಿಂದ ನೇಮಿಸಿಕೊಂಡ ಬಿಎಲ್‌ಎಗಳು ಈ ಕಾರ್ಯದಲ್ಲಿ ಭಾಗವಹಿಸುವಂತ ಮನವಿ ಮಾಡಿದರು.

## ಹತ್ಯೆ ಪ್ರಕರಣ: ಮೂವರ ಬಂಧನ

**ಬಳ್ಳಾರಿ:** ನಗರದ ಗುಗ್ಗರಹಟ್ಟಿ ಪ್ರದೇಶದಲ್ಲಿ ಪತ್ನಿ ಹಾಗೂ ಮಾವನನ್ನು ಬರ್ಬರವಾಗಿ ಹತ್ಯೆಗೈದ ಪ್ರಕರಣವನ್ನು ಎಪಿಎಂಸಿ ಯಾರ್ಡ್ ಪೊಲೀಸರು ತ್ವರಿತವಾಗಿ ಭೇದಿಸಿದ್ದು, ಪ್ರಕರಣಕ್ಕೆ ಸಂಬಂಧಿಸಿದ ಮೂವರು ಆರೋಪಿಗಳನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಸುಮನ್ ಡಿ. ಪೆನ್ನೇಕರ್, ಐಪಿಎಸ್ ತಿಳಿಸಿದರು.




ನಗರದ ದುರ್ಗಮ್ಮಗುಡಿ ದೇವಸ್ಥಾನದ ಸಮೀಪದಲ್ಲಿರುವ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಚೇರಿಯಲ್ಲಿ ಗುರುವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜುಲೈ 7ರಂದು ನಡೆದ ದ್ವಿ–ಕೊಲೆ ಪ್ರಕರಣದ ತನಿಖೆಯ ವಿವರಗಳನ್ನು ಬಹಿರಂಗಪಡಿಸಿದರು.

ಜುಲೈ 7ರಂದು ಮಧ್ಯಾಹ್ನ ಗುಗ್ಗರಹಟ್ಟಿ ಪ್ರದೇಶದಲ್ಲಿ ಶ್ರೀಮತಿ ನಾಗಲಕ್ಷ್ಮಿ (24) ಹಾಗೂ ಶ್ರೀನಿವಾಸ @ ವೆಂಕಟೇಶ್ (47) ಅವರನ್ನು ಮಾರಕಾಸ್ತ್ರಗಳಿಂದ ಹತ್ಯೆ ಮಾಡಲಾಗಿತ್ತು. ಈ ಕುರಿತು ಎಪಿಎಂಸಿ ಯಾರ್ಡ್ ಪೊಲೀಸ್ ಠಾಣೆಯಲ್ಲಿ ಗುನ್ನೆ ಸಂಖ್ಯೆ 137/2026ರಡಿ ಬಿಎನ್‌ಎಸ್ ಕಲಂ 103(1), 109 ಹಾಗೂ 3(5) ಅಡಿಯಲ್ಲಿ ಪ್ರಕರಣ ದಾಖಲಿಸಿ ತನಿಖೆ ಕೈಗೊಳ್ಳಲಾಗಿತ್ತು. ತನಿಖೆಯ ವೇಳೆ ಆರೋಪಿಗಳಾದ ತೇಜ (29), ವೆಂಕಟೇಶ್ (27) ಹಾಗೂ ಗುರುಶಂಕರ್ (50) ಅವರನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ. ಅಲ್ಲದೆ, ಕೃತ್ಯಕ್ಕೆ ಬಳಸಿದ್ದ ಮಾರಕಾಸ್ತ್ರ ಹಾಗೂ ಇತರೆ ಪ್ರಮುಖ ಸಾಕ್ಷ್ಯಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಎಸ್‌ಪಿ ತಿಳಿಸಿದರು.

ಮೃತ ನಾಗಲಕ್ಷ್ಮಿ ಆರೋಪಿ ತೇಜನ ಪತ್ನಿಯಾಗಿದ್ದು, ಮೃತ ಶ್ರೀನಿವಾಸ @ ವೆಂಕಟೇಶ್ ಅವರು ತೇಜನ ಹೆಣ್ಣು ಕೊಟ್ಟ ಮಾವನಾಗಿದ್ದಾರೆ. ಸುಮಾರು ಏಳು ವರ್ಷಗಳ ಹಿಂದೆ ತೇಜ ಮತ್ತು ನಾಗಲಕ್ಷ್ಮಿ ವಿವಾಹವಾಗಿದ್ದು, ಅವರಿಗೆ ಇಬ್ಬರು ಮಕ್ಕಳಿದ್ದಾರೆ.

ಪತ್ನಿಯ ಶೀಲದ ಬಗ್ಗೆ ಅನುಮಾನ ಹೊಂದಿದ್ದ ತೇಜ, ಮಾತುಕತೆ ನಡೆಸುವ ನೆಪದಲ್ಲಿ ನಾಗಲಕ್ಷ್ಮಿಯ ತಂದೆ–ತಾಯಿಯನ್ನು ಮನೆಗೆ ಕರೆಯಿಸಿಕೊಂಡಿದ್ದ. ಮಾತುಕತೆ ವೇಳೆ ವಾಗ್ವಾದ ತಾರಕಕ್ಕೇರಿದಾಗ ಆರೋಪಿಗಳು ಖಾರದ ಪುಡಿ ಎರಚಿ, ಬಳಿಕ ಮಾರಕಾಸ್ತ್ರಗಳಿಂದ ನಾಗಲಕ್ಷ್ಮಿ ಹಾಗೂ ಶ್ರೀನಿವಾಸ ಅವರ ಮೇಲೆ ಹಲ್ಲೆ ನಡೆಸಿ ಹತ್ಯೆಗೈದಿದ್ದಾರೆ ಎಂದು ಪ್ರಾಥಮಿಕ ತನಿಖೆಯಿಂದ ತಿಳಿದುಬಂದಿದೆ. ಈ ಘಟನೆಯಲ್ಲಿ ನಾಗಲಕ್ಷ್ಮಿಯ ತಾಯಿ ಗಾಯಗೊಂಡಿದ್ದು, ಚಿಕಿತ್ಸೆ ಪಡೆದು ಆಸ್ಪತ್ರೆಯಿಂದ ಬಿಡುಗಡೆಯಾಗಿದ್ದಾರೆ. ಪ್ರಕರಣದ ಸಮಗ್ರ ತನಿಖೆಗಾಗಿ ಆರೋಪಿಗಳನ್ನು ಪೊಲೀಸ್ ಕಸ್ಟಡಿಗೆ ಪಡೆಯಲಾಗುವುದು. ತನಿಖೆಯನ್ನು ಶೀಘ್ರ ಪೂರ್ಣಗೊಳಿಸಿ ನ್ಯಾಯಾಲಯಕ್ಕೆ ದೋಷಾರೋಪಣಾ ಪತ್ರ (ಚಾರ್ಜ್‌ಶೀಟ್) ಸಲ್ಲಿಸಲಾಗುವುದು. ಅಲ್ಲದೆ, ಪ್ರಕರಣದ ತ್ವರಿತ ವಿಚಾರಣೆಗೆ ನ್ಯಾಯಾಲಯಕ್ಕೆ ಮನವಿ ಸಲ್ಲಿಸಿ ಆರೋಪಿಗಳಿಗೆ ಶೀಘ್ರ ಶಿಕ್ಷೆಯಾಗುವಂತೆ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಸುಮನ್ ಡಿ. ಪೆನ್ನೇಕರ್ ತಿಳಿಸಿದರು.



**ಪೀಣ್ಯ ದಾಸರಹಳ್ಳಿ: ಕ್ಷೇತ್ರದ ನೆಲಗದರನಹಳ್ಳಿ ವಾರ್ಡ್ ಜಿಬಿಎ ಆಕಾಂಕ್ಷಿ ರಮ್ಯಾ ಬೈರೇಗೌಡ ಅವರ ನೇತೃತ್ವದಲ್ಲಿ ನೂತನ ರಮ್ಯಾ ಬೈರೇಗೌಡ ಟ್ರಸ್ಟ್‌ನ್ನು ನೆಲಗದರನಹಳ್ಳಿಯಲ್ಲಿ ಶಾಸಕ ಎಸ್.ಮುನಿರಾಜು ಉದ್ಘಾಟಿಸಿ ಶಿವಪುರ ಹಾಗೂ ನೆಲಗದರನಹಳ್ಳಿಯ ಸರ್ಕಾರಿ ಶಾಲ ಮಕ್ಕಳಿಗೆ ಉಚಿತ ನೋಟ್ ಬುಕ್ ವಿತರಿಸಿದರು. ಇದೇ ವೇಳೆ ಶಾಸಕರನ್ನು ಸನ್ಮಾನಿಸಿ ಗೌರವಿಸಲಾಯಿತು. ವಿವಿಧ ಶಾಲೆಗಳಿಂದ ಆಗಮಿಸಿದ್ದ ಮಕ್ಕಳಿಂದ ಮನ ರಂಜನೆ ಕಾರ್ಯಕ್ರಮವನ್ನು ನೀಡಿದರು.ಮಾರಮ್ಮ ದೇವಸ್ಥಾನ ಹತ್ತಿರ ಅನ್ನದಾನ ಏರ್ಪಡಿಸಲಾಗಿತ್ತು. ಈ ಸಂದರ್ಭದಲ್ಲಿ ಚನ್ನಗಿರಿಯಪ್ಪ, ಕಾಂಗ್ರೆಸ್ ಮುಖಂಡರಾದ ಮಂಜುನಾಥ್ ನಾಗಯ್ಯ, ಮುಖಂಡರಾದ ರಾಧಾಕೃಷ್ಣ ಡಿ.ವೆಂಕಿ, ವಿಜಯ್ ಕುಮಾರ್, ಚನ್ನಕೇಶವ ಸೇರಿದಂತೆ ಅನೇಕ ಮುಖಂಡರು ಭಾಗವಹಿಸಿದ್ದರು.**

# ಸಿಎಂರಿಂದ ಸಯ್ಯದ್ ಮೊಹಮ್ಮದ್ ಗೇಸು ದರಾಜ್ ಸಂಶೋಧನಾ ಅಕಾಡೆಮಿಗೆ ಚಾಲನೆ

• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ**

ನಗರದ ಹಜರತ್ ಖ್ವಾಜಾ ಬಂದಾನವಾಜ್ (ರ.ಅ) ದರ್ಗಾ ಆವರಣದಲ್ಲಿ ಸ್ಥಾಪಿಸಲಾದ ಸಯ್ಯದ್ ಮೊಹಮ್ಮದ್ ಗೇಸು ದರಾಜ್ ಸಂಶೋಧನಾ ಅಕಾಡೆಮಿಯನ್ನು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಅಧಿಕೃತವಾಗಿ ಉದ್ಘಾಟಿಸಿದರು.

ಈ ಅಕಾಡೆಮಿಯ ಪರಿಕಲ್ಪನೆಯನ್ನು ದಿವಂಗತ ಹಜರತ್ ಸಯ್ಯದ್ ಶಾ ಮೊಹಮ್ಮದ್ ಅಲ್–ಹುಸೈನಿ ಅವರು ರೂಪಿಸಿದ್ದು, ಬಳಿಕ ದಿವಂಗತ ಹಜರತ್ ಡಾ. ಸಯ್ಯದ್ ಶಾ ಗೇಸು ದರಾಜ್ ಖುಸ್ರೋ ಹುಸೈನಿ ಅವರು ಅದನ್ನು ಸಾಕಾರಗೊಳಿಸಲು ಮಹತ್ವದ ಪ್ರಯತ್ನಗಳನ್ನು ಕೈಗೊಂಡಿದ್ದರು. ಹಜರತ್ ಖ್ವಾಜಾ ಬಂದಾನವಾಜ್ (ರ.ಅ) ಅವರ ಜೀವನ, ಉಪದೇಶಗಳು, ಸಾಹಿತ್ಯ ಕೃತಿಗಳು ಹಾಗೂ ಹಸ್ತಪ್ರತಿಗಳನ್ನು ಸಂರಕ್ಷಿಸುವುದು, ಸಂಶೋಧಿಸುವುದು ಮತ್ತು ಜನಸಾಮಾನ್ಯರಿಗೆ ಪರಿಚಯಿಸುವುದು ಅಕಾಡೆಮಿಯ ಮುಖ್ಯ ಉದ್ದೇಶವಾಗಿದೆ.

ಅಕಾಡೆಮಿಯನ್ನು ಉದ್ಘಾಟಿಸಿದ ಬಳಿಕ ಮುಖ್ಯಮಂತ್ರಿ ಅವರಿಗೆ ಹಜರತ್ ಡಾ. ಹಾಫಿಜ್ ಸಯ್ಯದ್ ಮೊಹಮ್ಮದ್ ಅಲಿ ಅಲ್–ಹುಸೈನಿ ಹಾಗೂ ಅಕಾಡೆಮಿ ನಿರ್ದೇಶಕರಾದ ಪ್ರೊ. ಮೊಹಮ್ಮದ್ ಮುಸ್ತಫಾ ಶರೀಫ್ ಅವರು ಅಕಾಡೆಮಿಯ ಉದ್ದೇಶಗಳು ಮತ್ತು ಕಾರ್ಯಚಟುವಟಿಕೆಗಳ ಕುರಿತು ವಿವರಿಸಿದರು. ವಿಶ್ವದ ವಿವಿಧ ಭಾಗಗಳಲ್ಲಿ ಲಭ್ಯವಿರುವ ಹಜರತ್ ಖ್ವಾಜಾ ಬಂದಾನವಾಜ್ (ರ.ಅ) ಅವರ ಅಪರೂಪದ ಹಸ್ತಪ್ರತಿಗಳು ಹಾಗೂ ಸಾಹಿತ್ಯ ಕೃತಿಗಳನ್ನು ಸಂಗ್ರಹಿಸಿ, ಅವುಗಳನ್ನು ವಿವಿಧ ಭಾಷೆಗಳಿಗೆ ಅನುವಾದಿಸಿ ಸಂಶೋಧಕರಿಗೆ ಹಾಗೂ ಸಾರ್ವಜನಿಕರಿಗೆ ಲಭ್ಯವಾಗುವಂತೆ ಮಾಡುವುದು ಅಕಾಡೆಮಿಯ ಪ್ರಮುಖ ಗುರಿಯಾಗಿದೆ.



ಮುಖ್ಯಮಂತ್ರಿ ಅವರು ಅಕಾಡೆಮಿಯಲ್ಲಿ ಸಂರಕ್ಷಿಸಲಾಗಿರುವ ಅಪರೂಪದ ಅರೇಬಿಕ್, ಪರ್ಷಿಯನ್ ಮತ್ತು ದಖ್ನಿ ಉರ್ದು ಹಸ್ತಪ್ರತಿಗಳು, ಶತಮಾನಗಳಷ್ಟು ಹಳೆಯ ಕೈಬರಹದ ದಾಖಲೆಗಳು ಹಾಗೂ ರೇಷ್ಮೆ ಬಟ್ಟೆಯ ಮೇಲೆ ಬರೆಯಲಾದ ಅಪರೂಪದ ಪವಿತ್ರ ಕುರ್‌ಆನ್ ಪ್ರತಿಯನ್ನು ವೀಕ್ಷಿಸಿದರು. ಅಲ್ಲದೆ, ಅಕಾಡೆಮಿಯಲ್ಲಿ ನಡೆಯುತ್ತಿರುವ ಸಂಶೋಧನೆ ಮತ್ತು ಅನುವಾದ ಯೋಜನೆಗಳ ಕುರಿತು ಮಾಹಿತಿ ಪಡೆದುಕೊಂಡರು.

ಅಕಾಡೆಮಿಯಲ್ಲಿ 500ಕ್ಕೂ ಹೆಚ್ಚು ಅಪರೂಪದ ಹಸ್ತಪ್ರತಿಗಳು ಹಾಗೂ ಹಜರತ್ ಖ್ವಾಜಾ ಬಂದಾನವಾಜ್ (ರ.ಅ) ಅವರಿಂದ ರಚಿಸಲ್ಪಟ್ಟ 30ಕ್ಕೂ ಹೆಚ್ಚು ಮೂಲ ಕೃತಿಗಳು ಸಂರಕ್ಷಿಸಲ್ಪಟ್ಟಿವೆ. ಅಸ್ಮಾರ್–ಉಲ್–ಅಸ್ರಾರ್, ಸಿರ್ಗ್–ಎ–ಮೊಹಮ್ಮದಿ, ಮಕ್ತೂಬಾತ್–ಎ–ಬಂದಾನವಾಜ್ ಹಾಗೂ ಪ್ರಸಿದ್ಧ ಮಆರಿಫ್–ಉಲ್–ಅವಾರಿಫ್ ಸೇರಿದಂತೆ ಹಲವು ಶ್ರೇಷ್ಠ ಸೂಫಿ ಗ್ರಂಥಗಳ ಸಂಶೋಧನೆ ಮತ್ತು ಅನುವಾದ ಕಾರ್ಯಗಳು ಅಕಾಡೆಮಿಯ ಪ್ರಮುಖ ಯೋಜನೆಗಳಾಗಿವೆ.

ಅಕಾಡೆಮಿಯ ಕಾರ್ಯಚಟುವಟಿಕೆಗಳನ್ನು ಶ್ಲಾಘಿಸಿದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು, ಭವಿಷ್ಯದಲ್ಲಿ ಸಂಶೋಧನಾ ಚಟುವಟಿಕೆಗಳಿಗೆ ಸರ್ಕಾರದಿಂದ ಸಾಧ್ಯವಿರುವ ಎಲ್ಲ ರೀತಿಯ ಸಹಕಾರವನ್ನು ನೀಡುವುದಾಗಿ ಭರವಸೆ ನೀಡಿದರು. ದಕ್ಕನ್ ಪ್ರದೇಶದ ಸಮೃದ್ಧ ಸೂಫಿ ಪರಂಪರೆಯನ್ನು ಸಂರಕ್ಷಿಸುವುದರ ಜೊತೆಗೆ ಹಜರತ್ ಖ್ವಾಜಾ ಬಂದಾನವಾಜ್ (ರ.ಅ) ಅವರ ಸಂದೇಶ ಮತ್ತು ಬೋಧನೆಗಳನ್ನು ಮುಂದಿನ ಪೀಳಿಗೆಗಳಿಗೆ ತಲುಪಿಸುವಲ್ಲಿ ಈ ಸಂಸ್ಥೆ ಮಹತ್ವದ ಪಾತ್ರ ವಹಿಸಲಿದೆ ಎಂದು ಅವರು ಅಭಿಪ್ರಾಯಪಟ್ಟರು.

# ಆಲಮಟ್ಟಿ ಜಲಾಶಯಕ್ಕೆ ಒಳಹರಿವು ಆರಂಭ, ರೈತರ ಮೊಗದಲ್ಲಿ ಸಂತಸ

• **ಮಲ್ಲಮ್ಮ ನುಡಿ ವಾರ್ತೆ ಆಲಮಟ್ಟಿ**

ಕರ್ನಾಟಕದಾದ್ಯಂತ ಮುಂಗಾರು ಮಳೆ ಆರಂಭಗೊಂಡಿದ್ದು ಪ್ರಸ್ತುತ ಈ ವರ್ಷ ಜುಲೈ ಮೊದಲ ವಾರದಲ್ಲಿ ಮಾನ್ಸೂನ್ ಪ್ರವೇಶವಾಗಿದ್ದು ಉತ್ತರ ಕರ್ನಾಟಕ ಭಾಗದ ಜೀವ ನದಿಯಾದ ಕೃಷ್ಣಾ ನದಿಗೆ ಒಳಹರಿವು ಆರಂಭಗೊಂಡಿದೆ. ವಿಜಯಪುರ, ಬಾಗಲಕೋಟೆ, ಯಾದಗಿರಿ, ಕೊಪ್ಪಳ, ರಾಯಚೂರು ಜಿಲ್ಲೆಗಳ ರೈತರ ಮೊಗದಲ್ಲಿ ಸಂತಸ ಮೂಡಿಸಿದೆ. ಪ್ರತಿವರ್ಷ ಮೇ– ಜೂನ್ ತಿಂಗಳಲ್ಲಿ ಒಳಹರಿವು ಆರಂಭವಾಗುತ್ತಿತ್ತು. ಆದರೆ ಈ ಬಾರಿ ಉತ್ತರ ಕರ್ನಾಟಕದಲ್ಲಿ ಮಳೆಯ ಪ್ರಮಾಣ ಕಡಿಮೆ ಇದ್ದರೂ ಮಹಾರಾಷ್ಟ್ರ ಪಶ್ಚಿಮ ಘಟ್ಟದ ಮಹಾಬಲೇಶ್ವರ ಹಾಗೂ ವ್ಯಾಪ್ತಿಯ ಪ್ರದೇಶದಲ್ಲಿ ವ್ಯಾಪಕವಾಗಿ ಧಾರಾಕಾರವಾಗಿ ಮಳೆ ಸುರಿಯುತ್ತಿರುವ ಪರಿಣಾಮ ಕೃಷ್ಣಾ ಮತ್ತು ಉಪ ನದಿಗಳಿಗೆ ಜುಲೈ ತಿಂಗಳಿನಲ್ಲಿ ಒಳಹರಿವು ಆರಂಭವಾಗಿದೆ.



ಗರಿಷ್ಠ 519.60ಮೀ. ಎತ್ತರದಲ್ಲಿ 123.081ಟಿಎಂಸಿ ಅಡಿ ಗರಿಷ್ಠ ನೀರು ಸಂಗ್ರಹ ಸಾಮರ್ಥ್ಯದ ಆಲಮಟ್ಟಿ ಲಾಲಬಹಾದ್ದೂರ ಶಾಸ್ತ್ರಿ ಜಲಾಶಯದಲ್ಲಿ ಗುರುವಾರ 512.59ಮೀ. ಎತ್ತರದಲ್ಲಿ 44.695ಟಿಎಂಸಿ ಅಡಿ ನೀರು ಸಂಗ್ರಹವಾಗಿದ್ದು, ಇದರಲ್ಲಿ ಡೆಡ್ ಸ್ಟೋ–ರೇಜ್ ಹೊರತುಪಡಿಸಿ 27.075ಟಿಎಂಸಿ ಅಡಿ ನೀರನ್ನು ಬಳಸಿಕೊಳ್ಳಬಹುದಾಗಿದೆ.

ಇದರಿಂದ ಕೃಷ್ಣೆಯನ್ನೇ ನಂಬಿರುವ ಜಿಲ್ಲೆಗಳ ಜನ–ಜಾನುವಾರುಗಳಿಗೆ ಕುಡಿಯುವ ನೀರಿಗೆ ವರ್ಷವಾದರೂ ತೊಂದರೆ ತಪ್ಪಿದಂತಾಗಿದೆ.

ಇನ್ನು ಕೃಷ್ಣೆಯ ನೀರನ್ನು ನಂಬಿ ಬಿತ್ತನೆ ಮಾಡುವ ರೈತರ ಜಮೀನುಗಳಿಗೆ ಹಿಂಗಾರು ಹಂಗಾಮಿನ ಬೆಳೆಗಳಿಗೆ ನೀರು ಕೊಡಲು ಇನ್ನೂ ಜಲಾಶಯದಲ್ಲಿ ಕನಿಷ್ಠ 60ಟಿಎಂಸಿ ಅಡಿಯಷ್ಟಾದರೂ ನೀರು ಬೇಕಾಗಬಹುದು.

ಜು.9ರ ಮುಂಜಾನೆಯ ಮಾಹಿತಿಯಂತೆ 1,31,940ಕ್ಯೂಸೆಕ್ ನೀರು ಜಲಾಶಯಕ್ಕೆ ಹರಿದು ಬರುತ್ತಿದೆ. ಜಲಾಶಯದಿಂದ ಭಾಷ್ಪೀಭವನ ಸೇರಿದಂತೆ 483 ಕ್ಯೂಸೆಕ್ ನೀರು ಹೊರಹರಿವಿದೆ.

ಒಟ್ಟಾರೆ ಮುಂಗಾರು ಕೈ ಕೊಟ್ಟರೂ ಹಿಂಗಾರು ಹಂಗಾಮು ಕೈ ಹಿಡಿಯಬಹುದೆಂಬ ಆಶಾಭಾವ ಉತ್ತರ ಕರ್ನಾಟಕ ಭಾಗದ ರೈತರಲ್ಲಿ ಮೂಡಿದೆ.

# ಕಾರಾಗೃಹದ ಬಂಧಿಗಳಿಗೆ ಉಚಿತ ದಂತ ತಪಾಸಣೆ ಶಿಬಿರ

• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ**

ಕಲಬುರಗಿ ಕೇಂದ್ರ ಕಾರಾಗೃಹ, ಶಾಖೆ ಕಡಗಂಚಿ ಕಾರ್ಮಲ್ ಜ್ಯೋತಿ ಪಬ್ಲಿಕ್ ಚಾರಿಟೇಬಲ್ ಟ್ರಸ್ಟ್(ರಿ) ಹಾಗೂ ಕಲಬುರಗಿ ಅಲ್ ಬ್ರದರ್ ಡೆಂಟಲ್ ಆಸ್ಪತ್ರೆ ಇವುಗಳ ಸಹಯೋಗದೊಂದಿಗೆ ಕಲಬುರಗಿ ಕೇಂದ್ರ ಕಾರಾಗೃಹದಲ್ಲಿ ಬುಧವಾರ ಕಾರಾಗೃಹದ ಬಂದಿಗಳಿಗೆ ಉಚಿತವಾಗಿ ಹಲ್ಲಿನ ತಪಾಸಣೆ ಶಿಬಿರವನ್ನು ಹಮ್ಮಿಕೊಳ್ಳಲಾಯಿತು.




ಈ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದ ಕಡಗಂಚಿ ಕಾರ್ಮಲ್ ಜ್ಯೋತಿ ಪಬ್ಲಿಕ್ ಚಾರಿಟೇಬಲ್ ಟ್ರಸ್ಟ್(ರಿ) ಶಾಖೆಯ ಸೇಕ್ರೇಟರಿ ಫಾದರ್ ವಿಲಿಯಮ್ ಮಿರಿಂಡಾ ಅವರು, ಆರೋಗ್ಯದ ಹಿತದೃಷ್ಟಿಯಿಂದ ಕಾರಾಗೃಹದ ಬಂದಿಗಳಿಗೆ ಹಲ್ಲಿನ ತಪಾಸಣೆ ಶಿಬಿರವನ್ನು ಹಮ್ಮಿಕೊಳ್ಳಲಾಗಿದ್ದು, ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕು. ಮುಂದಿನ ದಿನಗಳಲ್ಲಿ ಉಳಿದ ಆರೋಗ್ಯ ಸಮಸ್ಯೆಗಳ ಶೀಘ್ರವಾಗಿ ಶಿಬಿರಗಳನ್ನು ಆಯೋಜಿಸಲಾಗುತ್ತದೆ ಎಂದರು.

ಕಲಬುರಗಿ ಅಲ್ ಬದರ್ ಡೆಂಟಲ್ ಆಸ್ಪತ್ರೆಯ (ಹೆಚ್.ಓ.ಡಿ) ಡಾ॥ ಸಂಗೀತಾ ಅವರು ಮಾತನಾಡಿ, ಹಲ್ಲು ನಮ್ಮ ದೇಹದ ಮುಖ್ಯ ಅಂಗವಾಗಿದ್ದು, ಹಾಗಾಗಿ ನಿಯಮಿತವಾಗಿ ಹಲ್ಲಿನ ರಕ್ಷಣೆ ಮಾಡಬೇಕು. ಹಲ್ಲು ಇಲ್ಲದಿದ್ದರೆ ಮಾತನಾಡಲು, ಸೌಂದರ್ಯ, ಆಹಾರ ಅಗಿಯಲು ಸಾಧ್ಯವಾಗುವುದಿಲ್ಲ. ದೇಹದ ಆರೋಗ್ಯ ಎಷ್ಟು ಮುಖ್ಯವೋ ಅಷ್ಟೇ ಹಲ್ಲಿನ ಆರೋಗ್ಯ ಮುಖ್ಯ. ಪ್ರತಿದಿನ ಎರಡು ಬಾರಿ ಬ್ರೆಷ್ ಮಾಡಬೇಕು ಎಂದರು. ಈ ಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಕಲಬುರಗಿ ಕೇಂದ್ರ ಕಾರಾಗೃಹದ ಮುಖ್ಯ ಅಧೀಕ್ಷಕ ರಾಕೇಶ್ ಕಾಂಬಳೆ ಮಾತನಾಡಿದರು.

ಈ ಶಿಬಿರದಲ್ಲಿ ಈ ಸಂಸ್ಥೆಯ ವೈದ್ಯಾಧಿಕಾರಿ ಡಾ॥ ಸಂತೋಷ, ಡಾ॥ ರವೀದ್ರ ಬನ್ನೇರಿ, ಸಹಾಯಕ ಅಧೀಕ್ಷಕ ಚನ್ನಪ್ಪ, ಜೈಲರ್‌ಗಳಾದ ಶ್ರೀಮಂತಗೌಡ ಪಾಟೀಲ್, ಶ್ಯಾಮ ಬಿದ್ರಿ ಹಾಗೂ ಸಹಾಯಕ ಆಡಳಿತಾಧಿಕಾರಿ ಭೀಮಾಶಂಕರ ಡಾಂಗೆ, ಕಲಬುರಗಿ ಅಲ್ ಬದಲ್ ದಂತ ಆಸ್ಪತ್ರೆ ವೈದ್ಯಕೀಯ ಡಾ॥ ಅಬ್ದುಲ್ ಹಾಗೂ ಸಿಬ್ಬಂದಿಗಳು ಉಪಸ್ಥಿತರಿದ್ದರು. ಈ ಶಿಬಿರದಲ್ಲಿ ಒಟ್ಟು 85 ಜನರನ್ನು ತಪಾಸಣೆ ಮತ್ತು ಸಂಚಾರಿ ಬಸ್‌ನಲ್ಲಿ ಸ್ಕ್ರೀನಿಂಗ್ ತಪಾಸಣೆ ಮಾಡಲಾಯಿತು.

ಪ್ರಾರಂಭದಲ್ಲಿ ಸಂಸ್ಥೆಯ ಸಹಾಯಕ ಅಧೀಕ್ಷಕ ಬಿ. ಸುರೇಶ್ ಸ್ವಾಗತಿಸಿದರು. ಈ ಸಂಸ್ಥೆಯ ಶಿಕ್ಷಕರಾದ ನಾಗರಾಜ ಮುಲಗೆ ಕಾರ್ಯಕ್ರಮ ನಿರೂಪಿಸಿ ಕೊನೆಯಲ್ಲಿ ವಂದಿಸಿದರು.

# ನೀರಿಗಾಗಿ ಪ್ರತಿ ವಿಧಾನಸಭೆ ಕ್ಷೇತ್ರಕ್ಕೆ 1 ಕೋಟಿ ಬಿಡುಗಡೆಗೆ ಆದೇಶ

• **ಮಲ್ಲಮ್ಮ ನುಡಿ ವಾರ್ತೆ ಬೆಳಗಾವಿ**

ಸುವರ್ಣಸೌಧದಲ್ಲಿ ನಡೆದ ಬೆಳಗಾವಿ ವಿಭಾಗ ಮಟ್ಟದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಬರ ನಿರ್ವಹಣೆ, ಕುಡಿಯುವ ನೀರು, ಕೃಷಿ, ಮೂಲಸೌಕರ್ಯ, ಅರಣ್ಯ ಅನುಮತಿಗಳು, ರಸ್ತೆ ಕಾಮಗಾರಿಗಳು, ಮುಜರಾಯಿ ದೇವಸ್ಥಾನಗಳ ಭದ್ರತೆ ಹಾಗೂ ಆಡಳಿತದ ಜವಾಬ್ದಾರಿಗಳ ಕುರಿತು ಮಹತ್ವದ ನಿರ್ದೇಶನಗಳನ್ನು ನೀಡಿದ್ದಾರೆ.

ಶಾಸಕರ ಮನವಿಗೆ ತಕ್ಷಣ ಸ್ಪಂದಿಸಿದ ಮುಖ್ಯಮಂತ್ರಿ, ಪ್ರತಿ ವಿಧಾನಸಭಾ ಕ್ಷೇತ್ರದಲ್ಲಿ ಕುಡಿಯುವ ನೀರಿನ ತುರ್ತು ಸಮಸ್ಯೆ ಪರಿಹರಿಸಲು ತಲಾ 1 ಕೋಟಿ ಬಿಡುಗಡೆ ಮಾಡಲು ಸಭೆಯಲ್ಲೇ ಆದೇಶಿಸಿದರು. ಕುಡಿಯುವ ನೀರಿನ ಸಮಸ್ಯೆ ಎದುರಿಸುವ ಯಾವುದೇ ಗ್ರಾಮ ನಿರ್ಲಕ್ಷ್ಯಕ್ಕೆ ಒಳಗಾಗಬಾರದು ಎಂದು ಅಧಿಕಾರಿಗಳಿಗೆ ಸೂಚಿಸಿದರು.

"ನೀರಿನ ಬಿಕ್ಕಟ್ಟನ್ನು ಎದುರಿಸಲು ಸರ್ಕಾರದ ಬಳಿ ಹಣದ ಕೊರತೆ ಇಲ್ಲ. ಅಗತ್ಯವಿದ್ದರೆ ಹೆಚ್ಚುವರಿ ಅನುದಾನವೂ ಬಿಡುಗಡೆ ಮಾಡಲಾಗುವುದು. ಜನರಿಗೆ ನೀರು ಒದಗಿಸುವುದು ಸರ್ಕಾರದ ಮೊದಲ ಆದ್ಯತೆ" ಎಂದು ಅವರು ಸ್ಪಷ್ಟಪಡಿಸಿದರು.

ಜಿಲ್ಲಾಧಿಕಾರಿಗಳ ವಿಪತ್ತು ನಿರ್ವಹಣಾ ನಿಧಿಯಲ್ಲಿ ಈಗಾಗಲೇ ಲಭ್ಯವಿರುವ ಅನುದಾನವನ್ನು ತಕ್ಷಣ ಬಳಸುವಂತೆ ಸೂಚಿಸಿದ ಅವರು, ಬಾಗಲಕೋಟೆ, ಬೆಳಗಾವಿ, ವಿಜಯಪುರ, ಧಾರವಾಡ, ಗದಗ, ಹಾವೇರಿ ಹಾಗೂ ಉತ್ತರ ಕನ್ನಡ ಜಿಲ್ಲೆಗಳಲ್ಲಿ



ಲಭ್ಯವಿರುವ ನಿಧಿಯನ್ನು ಪರಿಣಾಮಕಾರಿಯಾಗಿ ಬಳಸಿ, ಅಗತ್ಯವಿದ್ದರೆ ಸರ್ಕಾರದಿಂದ ಹೆಚ್ಚುವರಿ ನೆರವು ಪಡೆಯುವಂತೆ ತಿಳಿಸಿದರು.

ನೀರಿನ ದೀರ್ಘಕಾಲೀನ ಭದ್ರತೆಗೆ ಹೂಳು ತೆಗೆಯುವುದು, ಮಳೆ ನೀರು ಸಂಗ್ರಹಣೆ, ಕೆರೆಗಳ ಪುನಶ್ಚೇತನ ಹಾಗೂ ಪೈಪ್‌ಲೈನ್ ವಿಸ್ತರಣೆ ಸೇರಿದಂತೆ ಸಮಗ್ರ ಜಲಸಂರಕ್ಷಣಾ ಕ್ರಮಗಳನ್ನು ಕೈಗೊಳ್ಳಲು ಸೂಚಿಸಿದ ಮುಖ್ಯಮಂತ್ರಿ, ಕುಡಿಯುವ ನೀರಿನ ಯೋಜನೆಗಳಿಗೆ ಅರಣ್ಯ ಇಲಾಖೆಯ ಅನುಮತಿಗಳು ಅನಗತ್ಯವಾಗಿ ವಿಳಂಬವಾಗಬಾರದು ಎಂದು ನಿರ್ದೇಶನ ನೀಡಿದರು. ಶಾಲೆಗಳು ಹಾಗೂ ಕುಡಿಯುವ ನೀರಿನ ಸಂಪರ್ಕಗಳಿಗೆ ಸಂಬಂಧಿಸಿದ ಅರಣ್ಯ ಅನುಮೋದನೆಗಳನ್ನು ಆದ್ಯತೆಯ ಮೇಲೆ ಇತ್ಯರ್ಥಗೊಳಿಸಬೇಕು ಎಂದರು.

ಶಾಸಕರು ಪ್ರಸ್ತಾಪಿಸಿರುವ ಸ್ಥಗಿತಗೊಂಡ ಬೋರ್‌ವೆಲ್ಗಳು, ವಿದ್ಯುತ್ ಸಂಪರ್ಕ ಹಾಗೂ ಪೈಪ್‌ಲೈನ್ ಸಮಸ್ಯೆಗಳನ್ನು ತ್ವರಿತವಾಗಿ ಬಗೆಹರಿಸುವುದು ಜಿಲ್ಲಾಧಿಕಾರಿಗಳ ನೇರ ಜವಾಬ್ದಾರಿ ಎಂದು ತಿಳಿಸಿದ ಅವರು, "ಈ ವಿಷಯದಲ್ಲಿ ಮತ್ತೆ ಶಾಸಕರಿಂದ ದೂರುಗಳು ಬರಬಾರದು" ಎಂದು ಎಚ್ಚರಿಸಿದರು.

ಬೆಳೆವಿಮೆ ಯೋಜನೆಯಲ್ಲಿ ಅಕ್ರಮಗಳ ಕುರಿತು ವ್ಯಾಪಕ ದೂರುಗಳು ಬಂದಿರುವ ಹಿನ್ನೆಲೆಯಲ್ಲಿ ಸಮಗ್ರ ವರದಿ ಪಡೆದು ಪ್ರತ್ಯೇಕ ಪರಿಶೀಲನಾ ಸಭೆ ನಡೆಸಿ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಘೋಷಿಸಿದರು.

ಬೆಳಗಾವಿ ವಿಭಾಗದ ಅಭಿವೃದ್ಧಿ ಕುರಿತು ಮಾತನಾಡಿದ ಅವರು, "ನಮ್ಮ ಗಮನ ಕೇವಲ ಬರ ನಿರ್ವಹಣೆ ಅಥವಾ ನೀರಾವರಿಯ ಮೇಲಷ್ಟೇ ಇಲ್ಲ. ಬೆಳಗಾವಿ ವಿಭಾಗದ ಸಮಗ್ರ, ಸಮತೋಲನ ಮತ್ತು ಸುಸ್ಥಿರ ಅಭಿವೃದ್ಧಿಯೇ ನಮ್ಮ ಗುರಿ. ಅಧಿಕಾರಿಗಳು ಸಮಸ್ಯೆಗಳ ಪಟ್ಟಿ ಮಾಡುವುದಕ್ಕಿಂತ ಪರಿಹಾರದ ಮಾರ್ಗಗಳನ್ನು ಸರ್ಕಾರಕ್ಕೆ ಸೂಚಿಸಬೇಕು" ಎಂದು ಹೇಳಿದರು.

ಸರ್ಕಾರಿ ಕಾಮಗಾರಿಗಳಲ್ಲಿ ಪಾರದರ್ಶಕತೆಗೆ ಒತ್ತು ನೀಡಿದ ಮುಖ್ಯಮಂತ್ರಿ, ಯಾವುದೇ ರಸ್ತೆ ಕಾಮಗಾರಿ ಆರಂಭಕ್ಕೂ ಮುನ್ನ, ಕಾಮಗಾರಿ ನಡೆಯುವ ವೇಳೆ ಹಾಗೂ ಪೂರ್ಣಗೊಂಡ ನಂತರದ ಛಾಯಾಚಿತ್ರ ಮತ್ತು ವಿಡಿಯೊ ದಾಖಲಾತಿ ಕಡ್ಡಾಯವಾಗಬೇಕು ಎಂದು ಸೂಚಿಸಿದರು. "ಒಂದೇ ರಸ್ತೆಗೆ ವಿವಿಧ ಇಲಾಖೆಗಳು ಅಥವಾ ವಿವಿಧ ಯೋಜನೆಗಳ ಹೆಸರಿನಲ್ಲಿ ಬಿಲ್ ಸಲ್ಲಿಸಿ ವಂಚನೆ ಮಾಡಿದರೆ ಸರ್ಕಾರ ಯಾವುದೇ ಕಾರಣಕ್ಕೂ ಸಹಿಸುವುದಿಲ್ಲ" ಎಂದು ಕಟ್ಟುನಿಟ್ಟಾಗಿ ಎಚ್ಚರಿಸಿದರು.

ಕುಡಿಯುವ ನೀರಿನ ಯೋಜನೆಗಳ ಗುಣಮಟ್ಟ ಹಾಗೂ ಕಾರ್ಯಕ್ಷಮತೆಯನ್ನು ಖಚಿತಪಡಿಸಿಕೊಳ್ಳಲು ತಾಂತ್ರಿಕ ಆಡಿಟ್ ನಡೆಸಲಾಗುವುದು ಎಂದು ತಿಳಿಸಿದ ಅವರು, ಯೋಜನೆಗಳ ಅನುಷ್ಠಾನದಲ್ಲಿ ಗುಣಮಟ್ಟಕ್ಕೆ ಯಾವುದೇ ರಾಜಿ ಇರಬಾರದು ಎಂದರು.

ಮುಜರಾಯಿ ದೇವಸ್ಥಾನಗಳ ಭದ್ರತೆ ಕುರಿತು ಮಾತನಾಡಿದ ಮುಖ್ಯಮಂತ್ರಿ, ದೇವಸ್ಥಾನಗಳ ನಿಧಿಯನ್ನು ಸುರಕ್ಷಿತವಾಗಿಡಲು ಹಾಗೂ ದುರುಪಯೋಗವನ್ನು ತಡೆಯಲು ಜಿಲ್ಲಾಧಿಕಾರಿಗಳು ವಿಶೇಷ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು. ಎಲ್ಲಾ ಪ್ರಮುಖ ದೇವಸ್ಥಾನಗಳಲ್ಲಿ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಿ ಸಮರ್ಪಕ ಭದ್ರತೆ ಒದಗಿಸುವ ಜವಾಬ್ದಾರಿ ಜಿಲ್ಲಾಧಿಕಾರಿಗಳು ಮತ್ತು ಪೊಲೀಸ್ ಅಧೀಕ್ಷಕರದ್ದಾಗಿದೆ ಎಂದು ಹೇಳಿದರು. ಧಾರ್ಮಿಕ ದೇಣಿಗೆಗಳ ಮೇಲಿನ ಸಾರ್ವಜನಿಕ ವಿಶ್ವಾಸವನ್ನು ಕಾಪಾಡುವುದು ಸರ್ಕಾರದ ಹೊಣೆಗಾರಿಕೆಯಾಗಿದೆ ಎಂದರು.

ಮತದಾರರ ಪಟ್ಟಿ ಪರಿಷ್ಕರಣೆ (SIR) ಕುರಿತು ಸರ್ಕಾರದ ನಿರ್ದೇಶನಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಸೂಚಿಸಿದ ಅವರು, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು (PDO) ನಿಖರ ಮಾಹಿತಿ ಒದಗಿಸಬೇಕು ಹಾಗೂ ನಕಲಿ ದಾಖಲೆಗಳನ್ನು ತೆರವುಗೊಳಿಸಿ ಸರ್ಕಾರದ ಯೋಜನೆಗಳು ನಿಜವಾದ ಅರ್ಹ ಫಲಾನುಭವಿಗಳಿಗೆ ತಲುಪುವಂತೆ ನೋಡಿಕೊಳ್ಳಬೇಕು ಎಂದು ತಿಳಿಸಿದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000, Telephone Number:08483200222

PRGI NO. 120927
(RNINO:KARKAN/2011/48371)